# ಪ್ರವಾದಿ ದಾನಿಯೇಲನ ಗ್ರಂಥ

## ಮುನ್ನುಡಿ

“ದಾನಿಯೇಲನು” ಎಂಬ ಈ ಗ್ರಂಥವು ಅನ್ಯದೇಶದ ಅರಸರು ಯೆಹೂದ್ಯರನ್ನು ದಬ್ಬಾಳಿಕೆಗೆ ಈಡುಪಡಿಸಿದಾಗ ಬರೆದದ್ದು. ದೇವರು ಕ್ರೂರಿಗಳಾದ ಆ ಅರಸರನ್ನು ಕೆಳಗಿಳಿಸಿ ದೇವಜನರನ್ನು ಉದ್ಧರಿಸಿ, ಗತ ವೈಭವವನ್ನು ಮರಳಿ ಸ್ಥಾಪಿಸುವರು ಎಂಬ ಆಶಾದಾಯಕ ವಿಷಯವನ್ನು ಕತೆಗಳ ಹಾಗೂ ದಿವ್ಯದರ್ಶನಗಳ ಮೂಲಕ ತನ್ನ ಕಾಲದ ಜನರಿಗೆ ಅರ್ಥವಾಗುವಂತೆ ಕಲಿಸುತ್ತಾನೆ ಈ ಗ್ರಂಥಕಾರ.

ಈ ಪುಸ್ತಕವನ್ನು ಎರಡು ಮುಖ್ಯ ಭಾಗಗಳನ್ನಾಗಿ ವಿಂಗಡಿಸಬಹುದು:

1 ದಾನಿಯೇಲನು ಮತ್ತು ಅವನ ಸಂಗಡಿಗರು ದೇವರ ಮೇಲೆ ಅಚಲವಾದ ನಂಬಿಕೆಯಿಟ್ಟು ಅದರಂತೆ ನಡೆದುಕೊಂಡದ್ದರಿಂದ ಶತ್ರುಗಳನ್ನು ಜಯಿಸಲು ಸಾಧ್ಯವಾಗುತ್ತದೆ. ಬಾಬಿಲೋನಿನ ಹಾಗು ಪರ್ಷಿಯದ ಚಕ್ರವರ್ತಿಗಳ ಆಳ್ವಿಕೆಯ ಹಿನ್ನೆಲೆಯಲ್ಲಿ ಬರೆದ ಕತೆಗಳಿವು.

2 ಬಾಬಿಲೋನಿನ ಚಕ್ರವರ್ತಿ ಮೊದಲ್ಗೊಂಡು ಹಲವಾರು ರಾಜರು ಬಂದು ಹೋದದ್ದು, ಅನೇಕ ರಾಷ್ಟ್ರಗಳು ಅಳಿದುಹೋದದ್ದು, ಅನ್ಯದೇಶೀಯರ ದಬ್ಬಾಳಿಕೆ ಕಣ್ಮರೆಯಾದದ್ದು, ದೇಶೀಯರು ವಿಜೇತರಾದದ್ದು, ಇವುಗಳನ್ನು ದಾನಿಯೇಲನು ಕಂಡ ದಿವ್ಯ ದರ್ಶನಗಳ ಮೂಲಕ ಸಾಂಕೇತಿಕವಾಗಿ ಎತ್ತಿ ತೋರಿಸುತ್ತಾನೆ ಲೇಖಕ.

ಈ ಗ್ರಂಥದ ಒಂದು ಭಾಗವನ್ನು ಅಂದರೆ, ಅಧ್ಯಾಯ 1:1–2, 3; 8:1–12; ಇವುಗಳನ್ನು ಹಿಬ್ರು ಭಾಷೆಯಲ್ಲೂ ಇನ್ನೊಂದು ಭಾಗವನ್ನು ಅಂದರೆ, 2:3–7:28 ಇವುಗಳನ್ನು ಅರಮೀಯ ಭಾಷೆಯಲ್ಲೂ ಬರೆಯಲಾಗಿದೆ.

## ಪರಿವಿಡಿ


| | | | | |
|---|---|---|---|---|
| 1. ದಾನಿಯೇಲನು ಮತ್ತು ಅವನ ಗೆಳೆಯರು | – | 1.1 | – | 6.28 |
| 2. ದಾನಿಯೇಲನು ಕಂಡ ದರ್ಶನಗಳು | – | 7.1 | – | 11.45 |
| – ನಾಲ್ಕು ಮೃಗಗಳು | – | 7.1 | – | 28 |
| – ಟಗರು ಮತ್ತು ಹೋತ | – | 8.1 | – | 9.27 |
| – ದೇವದೂತ | – | 10.1 | – | 11.45 |
| – ಕೊನೆಯ ಕಾಲ | – | 12.1 | – | 13 |

# ದಾನಿಯೇಲನು ಮತ್ತು ಗೆಳೆಯರು

(1.11 – 6.28)

## ನೆಬೂಕದ್ನೆಚ್ಚರನ ಆಸ್ಥಾನದಲ್ಲಿ ಹಿಬ್ರಿಯ ಯುವಕರು

**1** ಜುದೇಯದ ಅರಸ ಯೆಹೋಯಾಕೀಮನ ಆಳ್ವಿಕೆಯ ಮೂರನೆಯ ವರ್ಷದಲ್ಲಿ ಬಾಬಿಲೋನಿನ ರಾಜ ನೆಬೂಕದ್ನೆಚ್ಚರನು ಜೆರುಸಲೇಮಿಗೆ ಬಂದು ಮುತ್ತಿಗೆ ಹಾಕಿದನು.

2 ಸರ್ವೇಶ್ವರಸ್ವಾಮಿ ಜುದೇಯದ ಅರಸ ಯೆಹೋಯಾಕೀಮನನ್ನು ಅವನ ಕೈವಶವಾಗುವಂತೆ ಮಾಡಿದರು. ಅಂತೆಯೇ ದೇವಾಲಯದ ಅನೇಕ ಪೂಜಾಪಾತ್ರೆಗಳು ಅವನ ಕೈವಶವಾದವು. ನೆಬೂಕದ್ನೆಚ್ಚರನು ಅವುಗಳನ್ನು ಶಿನಾರ್ ದೇಶಕ್ಕೆ ಸಾಗಿಸಿ, ತನ್ನ ದೇವರ ಮಂದಿರಕ್ಕೆ ತಂದು, ಆ ದೇವರ ಭಂಡಾರಕ್ಕೆ ಸೇರಿಸಿಕೊಂಡನು.

3 ಅನಂತರ ಆ ರಾಜನು ತನ್ನ ಕಂಚುಕಿಯರಲ್ಲಿ ಮುಖ್ಯಸ್ಥನಾದ ಅಶ್ಪೆನಜನಿಗೆ, "ನೀನು ಇಸ್ರಯೇಲರಲ್ಲಿ, ಅಂದರೆ ರಾಜವಂಶೀಯರಲ್ಲಿ ಮತ್ತು ಪ್ರಧಾನರಲ್ಲಿ ಕೆಲವು ಯುವಕರನ್ನು ಇಲ್ಲಿಗೆ ಕರೆದು ಬಾ. 4ಅವರು ಅಂಗದೋಷವಿಲ್ಲದವರಾಗಿರಬೇಕು. ಸುಂದರರು, ಸಮಸ್ತ ಶಾಸ್ತ್ರಜ್ಞರು, ಪಂಡಿತರು, ವಿದ್ಯಾನಿಪುಣರು, ರಾಜಾಲಯದಲ್ಲಿ ಸನ್ನಿಧಿಸೇವೆ ಮಾಡಲು ಸಮರ್ಥರೂ ಆಗಿರಬೇಕು. ಅವರಿಗೆ ಬಾಬಿಲೋನ್ ಪಂಡಿತರ ಭಾಷೆಯನ್ನೂ ಶಾಸ್ತ್ರಗಳನ್ನೂ ಕಲಿಸಬೇಕು," ಎಂದು ಅಪ್ಪಣೆಕೊಟ್ಟನು. 5ಇದಲ್ಲದೆ, "ಇನ್ನು ಮುಂದಕ್ಕೆ ಅವರು ಸನ್ನಿಧಿಸೇವಕರಾಗುವಂತೆ, ನನ್ನ ಭೋಜನ ಪದಾರ್ಥಗಳನ್ನು ಹಾಗೂ ನಾನು ಕುಡಿಯುವ ದ್ರಾಕ್ಷಾರಸವನ್ನು ಅವರಿಗೆ ಪ್ರತಿದಿನ ಬಡಿಸುವ ಏರ್ಪಾಡುಮಾಡಿ ಅವರನ್ನು ಮೂರು ವರ್ಷ ಪೋಷಿಸಬೇಕು" ಎಂದು ಆಜ್ಞಾಪಿಸಿದನು. 6ಹೀಗೆ ಆರಿಸಿಕೊಂಡ ಯುವಕರಲ್ಲಿ ದಾನಿಯೇಲನು, ಹನನ್ಯನು, ಮಿಶಾಯೇಲನು, ಅಜರ್ಯನು ಎಂಬ ಯೆಹೂದ್ಯರು ಸೇರಿದ್ದರು. 7ಕಂಚುಕಿಯರ ನಾಯಕನು ಇವರಿಗೆ ನಾಮಕರಣಮಾಡಿ ದಾನಿಯೇಲನಿಗೆ 'ಬೇಲ್ತೆಶಚ್ಚರ್', ಹನನ್ಯನಿಗೆ 'ಶದ್ರಕ್', ಮಿಶಾಯೇಲನಿಗೆ 'ಮೇಶಕ್', ಹಾಗೂ ಅಜರ್ಯನಿಗೆ 'ಅಬೇದ್‌ನೆಗೋ', ಎಂಬ ಹೆಸರಿಟ್ಟನು.

8 ಆದರೆ ದಾನಿಯೇಲನು ತಾನು ರಾಜನ ಭೋಜನ ಪದಾರ್ಥಗಳನ್ನು ತಿಂದು ಹಾಗೂ ರಾಜನು ಕುಡಿಯುವ ದ್ರಾಕ್ಷಾರಸವನ್ನು ಕುಡಿದು ತನ್ನನ್ನೇ ಅಶುದ್ಧ ಮಾಡಿಕೊಳ್ಳಬಾರದೆಂದು ನಿಶ್ಚಯಿಸಿಕೊಂಡನು. ಕಂಚುಕಿಯರ ನಾಯಕನಿಗೆ, "ಕ್ಷಮಿಸು, ನಾನು ಅಶುದ್ಧನಾಗಲಾರೆ," ಎಂದು ವಿನಂತಿಸಿದನು. 9ಕಂಚುಕಿಯರ ನಾಯಕನು ದಾನಿಯೇಲನ ಮೇಲೆ ಕನಿಕರ ಮತ್ತು ದಯೆ ತೋರುವಂತೆ ದೇವರು ಅನುಗ್ರಹಿಸಿದ್ದರು. 10ಆದುದರಿಂದ ಆ ನಾಯಕನು ದಾನಿಯೇಲನಿಗೆ, "ನಿಮಗೆ ಅನ್ನಪಾನಗಳನ್ನು ಏರ್ಪಡಿಸಿದ ನನ್ನೊಡೆಯನಾದ ರಾಜನು ನಿಮ್ಮಂತೆ ಆಯ್ಕೆಯಾದ ಯುವಕರ ಮುಖಕ್ಕಿಂತ ನಿಮ್ಮ ಮುಖ ಬಾಡಿರುವುದನ್ನು ನೋಡಿ ನನ್ನ ತಲೆ ತೆಗೆಸಬಹುದೆಂಬ ಭಯ ನನಗಿದೆ. ಇದಕ್ಕೆ ನೀವು ಕಾರಣರಾಗಬಹುದಲ್ಲವೆ?" ಎಂದು ಹೇಳಿದನು.

11 ದಾನಿಯೇಲನು ತನ್ನನ್ನೂ, ಹನನ್ಯ, ಮಿಶಾಯೇಲ, ಅಜರ್ಯ ಇವರನ್ನೂ ನೋಡಿಕೊಳ್ಳಲು ಆ ನಾಯಕನು ನೇಮಿಸಿದ್ದ ವಿಚಾರಕನ ಬಳಿಗೆ ಬಂದು, 12"ಅಯ್ಯಾ, ಹತ್ತು ದಿನಗಳ ಮಟ್ಟಿಗೆ ನಮ್ಮನ್ನು ಪರೀಕ್ಷಿಸಿನೋಡು. ಸೇವಕರಾದ ನಮಗೆ ಭೋಜನಕ್ಕೆ ಬದಲಾಗಿ ಕಾಯಿಪಲ್ಯ, ಪಾನಕ್ಕೆ ಬದಲಾಗಿ ನೀರು ಒದಗಿಸಿದರೆ ಸಾಕು. 13ಆಮೇಲೆ ನಮ್ಮ ಮುಖಗಳನ್ನೂ ರಾಜಭೋಜನ ಉಣ್ಣುವ ಯುವಕರ ಮುಖಗಳನ್ನೂ ಹೋಲಿಸಿನೋಡು. ಅನಂತರ ನಿನಗೆ ತೋಚಿದ ಹಾಗೆ ನಮಗೆ ಮಾಡು," ಎಂದು ಕೇಳಿಕೊಂಡನು.

14 ವಿಚಾರಕನು ಅವರ ಬಿನ್ನಹಕ್ಕೆ ಒಪ್ಪಿ ಹತ್ತುದಿನದವರೆಗೆ ಪರೀಕ್ಷಿಸಿದನು. 15ಹತ್ತು ದಿನಗಳಾದ ಮೇಲೆ ರಾಜಭೋಜನ ಉಣ್ಣುತ್ತಿದ್ದ ಎಲ್ಲ ಯುವಕರಿಗಿಂತ ಇವರು ಸುಂದರವಾಗಿಯೂ ಪುಷ್ಟರಾಗಿಯೂ ಕಾಣಿಸಿದರು. 16ಅಂದಿನಿಂದ ವಿಚಾರಕನು ಇವರಿಗೆ ನೇಮಕವಾದ ಭೋಜನ ಪದಾರ್ಥಗಳನ್ನೂ ಕುಡಿಯಬೇಕಾದ ದ್ರಾಕ್ಷಾರಸವನ್ನೂ ತೆಗೆದುಬಿಟ್ಟು ಕಾಯಿಪಲ್ಯಗಳನ್ನೇ ಕೊಡುತ್ತಾ ಬಂದನು.

17 ಹೀಗಿರಲು ದೇವರು ಆ ನಾಲ್ಕು ಮಂದಿ ಯುವಕರಿಗೆ ಸಕಲ ಶಾಸ್ತ್ರಗಳಲ್ಲೂ ವಿದ್ಯೆಗಳಲ್ಲೂ ಜ್ಞಾನ ವಿವೇಕಗಳನ್ನು ದಯಪಾಲಿಸಿದರು. ದಾನಿಯೇಲನು ಸಮಸ್ತ ಸ್ವಪ್ನಗಳನ್ನೂ ದಿವ್ಯ ದರ್ಶನಗಳನ್ನೂ ಅರ್ಥೈಸುವುದರಲ್ಲಿ ಪ್ರವೀಣನಾದನು.

18 ರಾಜನು ನೇಮಿಸಿದ ಕಾಲವು ಕಳೆಯಿತು. ಆ ಯುವಕರನ್ನು ರಾಜಸನ್ನಿಧಿಗೆ ಕರೆದು ತರುವ ಸಮಯವು ಬಂದಿತು. ಕಂಚುಕಿಯರ ನಾಯಕ ಅವರನ್ನು ನೆಬೂಕದ್ನೆಚ್ಚರನ ಸಮ್ಮುಖಕ್ಕೆ ಕರೆದು ತಂದನು.
19ರಾಜನು ಅವರ ಸಂಗಡ ಮಾತಾಡುವಾಗ ಅಲ್ಲಿದ್ದ ಯುವಕರಲ್ಲೆಲ್ಲ ದಾನಿಯೇಲನಿಗೆ, ಹನನ್ಯನಿಗೆ, ಮೀಶಾಯೇಲನಿಗೆ, ಅಜರ್ಯನಿಗೆ, ಸಮಾನರು ಯಾರೂ ಕಂಡುಬರಲಿಲ್ಲ. ಆದಕಾರಣ ಆ ನಾಲ್ವರು ಸನ್ನಿಧಿ ಸೇವಕರಾದರು.
20ಬಳಿಕ ರಾಜನು ಶಾಸ್ತ್ರೀಯ ವಿದ್ಯೆಯ ಎಲ್ಲ ವಿಷಯಗಳಲ್ಲಿ ಅವರನ್ನು ವಿಚಾರ ಮಾಡಿದಾಗ ಸಮಸ್ತ ರಾಜ್ಯದಲ್ಲಿನ ಎಲ್ಲ ಜೋಯಿಸರಗಿಂತಲೂ ಮಂತ್ರವಾದಿಗಳಿಗಿಂತಲೂ ಹತ್ತರಷ್ಟು ನಿಪುಣರಾಗಿ ಕಂಡುಬಂದರು.
21ದಾನಿಯೇಲನು ರಾಜ ಸೈರೆಷನ ಆಳ್ವಿಕೆಯ ಮೊದಲನೆಯ ವರ್ಷದ ತನಕ ಸನ್ನಿಧಿ ಸೇವಕನಾಗಿಯೇ ಇದ್ದನು.

### ನೆಬೂಕದ್ನೆಚ್ಚರನ ಕನಸು

**2** ನೆಬೂಕದ್ನೆಚ್ಚರನು ತನ್ನ ಆಳ್ವಿಕೆಯ ಎರಡನೆಯ ವರ್ಷದಲ್ಲಿ ಒಂದು ಕನಸುಕಂಡು ತತ್ತರಗೊಂಡನು. ಅವನಿಗೆ ನಿದ್ರೆ ತಪ್ಪಿತು.
2ಆಗ ಆ ರಾಜನು ತನ್ನ ಕನಸಿನ ಅರ್ಥ ತಿಳಿಸಬೇಕೆಂದು ಜೋಯಿಸರನ್ನೂ ಮಂತ್ರವಾದಿಗಳನ್ನೂ ಮಾಟಗಾರರನ್ನೂ ಪಂಡಿತರನ್ನೂ ಕರೆಯಿಸಿದನು. ಅವರು ಆಸ್ಥಾನಕ್ಕೆ ಬಂದು ರಾಜನ ಮುಂದೆ ನಿಂತುಕೊಂಡರು.
3ರಾಜನು ಅವರಿಗೆ, "ನಾನು ಒಂದು ಕನಸು ಕಂಡೆ. ಅದರ ಅರ್ಥವೇನೋ ಎಂದು ನನ್ನ ಮನಸ್ಸು ತತ್ತರಗೊಂಡಿದೆ," ಎಂದನು.
4ಆ ಪಂಡಿತರು ಅರಮೀಯ ಭಾಷೆಯಲ್ಲಿ ರಾಜನಿಗೆ, "ಅರಸರೇ, ಚಿರಂಜೀವಿಯಾಗಿರಿ! ಆ ಕನಸನ್ನು ನಿಮ್ಮ ದಾಸರಾದ ನಮಗೆ ಹೇಳಿ. ಅದರ ತಾತ್ಪರ್ಯವನ್ನು ತಿಳಿಸುತ್ತೇವೆ," ಎಂದು ಅರಿಕೆ ಮಾಡಿದರು.

5 ಆಗ ರಾಜನು ಆ ಪಂಡಿತರಿಗೆ, "ನನ್ನ ಈ ಮಾತು ಖಂಡಿತ: ನೀವು ಈ ಕನಸನ್ನೂ ಅದರ ಉದ್ದೇಶವನ್ನೂ ನನಗೆ ತಿಳಿಸದಿದ್ದರೆ ನಿಮ್ಮನ್ನು ತುಂಡುತುಂಡಾಗಿ ಕತ್ತರಿಸುವೆನು; ನಿಮ್ಮ ಮನೆಗಳನ್ನು ತಿಪ್ಪೆಗುಂಡಿಯನ್ನಾಗಿಸುವೆನು.
6ನೀವು ಆ ಕನಸನ್ನೂ ಅದರ ಉದ್ದೇಶವನ್ನೂ ತಿಳಿಸಿದ್ದೇ ಆದರೆ ನನ್ನಿಂದ ನಿಮಗೆ ದಾನ ಬಹುಮಾನಗಳೂ ವಿಶೇಷ ಸನ್ಮಾನಗಳೂ ದೊರಕುವುವು. ಆದಕಾರಣ ಆ ಕನಸನ್ನೂ ಅದರ ಉದ್ದೇಶವನ್ನೂ ನನಗೆ ತಿಳಿಸಿ," ಎಂದನು.
7ಪಂಡಿತರು, "ರಾಜರು ತಮ್ಮ ದಾಸರಿಗೆ ಕನಸನ್ನು ತಿಳಿಸೋಣ ವಾಗಲಿ, ನಾವು ಅದರ ತಾತ್ಪರ್ಯವನ್ನು ವಿವರಿಸುವೆವು," ಎಂದು ಮತ್ತೊಮ್ಮೆ ಉತ್ತರಕೊಟ್ಟರು.

8 ಅದಕ್ಕೆ ರಾಜನು, "ನೀವು ಆ ಕನಸನ್ನು ನನಗೆ ತಿಳಿಸದಿದ್ದರೆ ನಿಮಗೆ ಮರಣದಂಡನೆಯಾಗುವುದು ಖಚಿತವೆಂದು ತಿಳಿದೇ ಕಾಲಹರಣ ಮಾಡುತ್ತಿದ್ದೀರಿ. ಇದು ನನಗೆ ಚೆನ್ನಾಗಿ ಗೊತ್ತು.
9ಕಾಲ ಬದಲಾಗುತ್ತಿರುತ್ತದೆ ಎಂದುಕೊಂಡೇ ನನ್ನ ಮುಂದೆ ಇಲ್ಲಸಲ್ಲದ್ದನ್ನು ಆಡಲು ಒಪ್ಪಂದ ಮಾಡಿಕೊಂಡಿದ್ದೀರಿ. ಅಂತು ಆ ಕನಸನ್ನು ನೀವು ನನಗೆ ತಿಳಿಸಲೇಬೇಕು. ಆಗ ಅದರ ಉದ್ದೇಶವನ್ನು ವಿವರಿಸಬಲ್ಲಿರೆಂದು ನಾನು ತಿಳಿದುಕೊಳ್ಳುವೆನು," ಎಂದು ಹೇಳಿದನು.

10 ಆಗ ಆ ಪಂಡಿತರು ಸನ್ನಿಧಿಯ ಮುಂದೆ, "ರಾಜರು ಕೇಳುವ ಸಂಗತಿಯನ್ನು ತಿಳಿಸಬಲ್ಲವನು ಈ ಲೋಕದಲ್ಲಿ ಯಾವನೂ ಇಲ್ಲ. ಎಷ್ಟೆಷ್ಟೋ ಬಲಿಷ್ಠರಾದ, ಪ್ರಬಲರಾದ ಯಾವ ಅರಸರೂ ಜೋಯಿಸನನ್ನಾಗಲಿ, ಮಾಟಗಾರನನ್ನಾಗಲಿ, ಪಂಡಿತನನ್ನಾಗಲಿ, ಇಂಥ ಸಂಗತಿಯನ್ನು ಎಂದೂ ಕೇಳಿದ್ದಿಲ್ಲ.
11ರಾಜರು ಕೇಳುತ್ತಿರುವ ಸಂಗತಿ ಅತಿಕಷ್ಟವಾದುದು. ನರಮಾನವರ ನಡುವೆ ವಾಸ ಮಾಡದ ದೇವರುಗಳೇ ಹೊರತು ಇನ್ನಾರೂ ರಾಜರ ಸಮ್ಮುಖದಲ್ಲಿ ಇದನ್ನು ತಿಳಿಸಲಾರರು," ಎಂದು ಉತ್ತರಕೊಟ್ಟರು.

12 ಇದನ್ನು ಕೇಳಿ ರಾಜನು ಉಗ್ರಕೋಪಗೊಂಡನು. ಬಾಬಿಲೋನಿನ ಸಕಲ ವಿದ್ವಾಂಸರನ್ನು ಕೊಲ್ಲಬೇಕೆಂದು ಆಜ್ಞಾಪಿಸಿದನು.
13ಕೂಡಲೆ ಆ ಆಜ್ಞೆ ಹೊರಪಟ್ಟಿತು. ವಿದ್ವಾಂಸರು ಪ್ರಾಣಾಪಾಯಕ್ಕೆ ಗುರಿಯಾದರು. ಅಂತೆಯೇ ದಾನಿಯೇಲನನ್ನೂ ಅವನ ಗೆಳೆಯರೆಲ್ಲರನ್ನೂ ಕೊಲ್ಲಲಿಕ್ಕೆ ಹುಡುಕಿದನು.

## ಕನಸಿನ ವಿವರ ದಾನಿಯೇಲನಿಗೆ ವಿಶದ

14 ರಾಜನ ಮೈಗಾವಲಿನವರ ದಳವಾಯಿಯಾದ ಅರ್ಯೋಕನು ಬಾಬಿಲೋನಿನ ವಿದ್ವಾಂಸರ ಸಂಹಾರಕ್ಕಾಗಿ ಹೊರಟಾಗ ದಾನಿಯೇಲನು ಬುದ್ಧಿ ವಿವೇಕಗಳಿಂದ ಅವನ ಸಂಗಡ ಮಾತಾಡಿದನು.
15"ಈ ರಾಜಾಜ್ಞೆಯೇಕೆ ಇಷ್ಟು ತೀಕ್ಷ್ಣ?" ಎಂದು ಕೇಳಿದನು. ಅರ್ಯೋಕನು ನಡೆದ ಸಂಗತಿಯನ್ನು ದಾನಿಯೇಲನಿಗೆ ತಿಳಿಸಿದನು.

16 ಆಮೇಲೆ ದಾನಿಯೇಲನು ಅರಮನೆಗೆ ಹೋಗಿ, "ನನಗೆ ಸಮಯಕೊಟ್ಟರೆ ಆ ಕನಸಿನ ಅರ್ಥವನ್ನು ರಾಜರಿಗೆ ನಾನು ವಿವರಿಸಬಲ್ಲೆ," ಎಂದು ಅರಿಕೆ ಮಾಡಿದನು.
17ಬಳಿಕ ದಾನಿಯೇಲನು ತನ್ನ ಮನೆಗೆ ಹಿಂತಿರುಗಿ ಹನನ್ಯ, ಮೀಶಾಯೇಲ ಮತ್ತು ಅಜರ್ಯ ಎಂಬ ತನ್ನ ಗೆಳೆಯರಿಗೆ ಈ ಸಮಾಚಾರ ತಿಳಿಸಿದನು.
18"ನಾವು ಬಾಬಿಲೋನಿನ ಇತರ ವಿದ್ವಾಂಸರೊಂದಿಗೆ ನಾಶವಾಗದಂತೆ ಪರಲೋಕ ದೇವರು ಈ ರಹಸ್ಯದ ವಿಷಯವಾಗಿ ಕೃಪೆ ತೋರುವಂತೆ ಬೇಡಿಕೊಳ್ಳೋಣ," ಎಂದು ಹೇಳಿದನು.
19ಆ ರಾತ್ರಿಯೇ ಸ್ವಪ್ನದಲ್ಲಿ ಕನಸಿನ ಗುಟ್ಟು ದಾನಿಯೇಲನಿಗೆ ವ್ಯಕ್ತವಾಯಿತು. ಕೂಡಲೆ ಆತನು ಪರಲೋಕ ದೇವರನ್ನು ಹೀಗೆಂದು ಸ್ತುತಿಸಿದನು:

20 ಯುಗಯುಗಾಂತರಕ್ಕೂ ದೇವರ ನಾಮಕ್ಕೆ
ಸ್ತುತಿಸ್ತೋತ್ರ !
ಏಕೆಂದರೆ ಜ್ಞಾನವೂ ಶಕ್ತಿಯೂ ಆತನಿಗೆ
ಸ್ವಂತ.
21 ಕಾಲಗಳು ಋತುಗಳು ಆತನ ಕೈಯಲ್ಲಿವೆ
ರಾಜರನ್ನು ಕೆಳಕ್ಕಿಳಿಸುವವನು, ಮೇಲೆ
ನಿಲ್ಲಿಸುವವನು ಆತನೆ.
ಜ್ಞಾನಿಗಳ ಜ್ಞಾನ, ವಿವೇಕಿಗಳ ವಿವೇಕ ಆತನ
ಕೊಡುಗೆ.
22 ಅಗಾಧ ವಿಷಯಗಳನ್ನೂ ನಿಗೂಢ
ರಹಸ್ಯಗಳನ್ನೂ ತರುವನಾತ ಬಯಲಿಗೆ.
ಕಗ್ಗತ್ತಲೆಯಲ್ಲಿ ಅಡಗಿರುವುದೂ ಆತನಿಗೆ
ಗೋಚರ
ಏಕೆಂದರೆ ಬೆಳಕು ಆತನಲ್ಲೇ ಸುಸ್ಥಿರ.
23 ನನ್ನ ಪಿತೃಗಳ ದೇವಾ, ಮಾಡುವೆ ನಿನ್ನ
ಗುಣಗಾನ,
ನಿನಗೆ ನನ್ನ ಧನ್ಯವಾದ.
ಏಕೆಂದರೆ ನೀನೇ ನನಗೆ ಜ್ಞಾನಶಕ್ತಿಗಳನ್ನು
ದಯಪಾಲಿಸಿದಾತ.
ನಾವು ಬೇಡಿದ್ದನ್ನು ನನಗೆ ತೋರ್ಪಡಿಸಿದಾತ ನೀನೇ
ಹೌದು, ರಾಜ ಬಯಸಿದ ಗುಟ್ಟನ್ನು ನಮಗೆ
ವ್ಯಕ್ತಪಡಿಸಿದಾತ ನೀನೇ.

## ರಾಜಸ್ವಪ್ನದ ವಿವರ ದಾನಿಯೇಲನಿಂದ

24 ತರುವಾಯ ದಾನಿಯೇಲನು ಬಾಬಿಲೋನಿನ ವಿದ್ವಾಂಸರನ್ನು ಕೊಲ್ಲುವುದಕ್ಕೆ ರಾಜನು ನೇಮಿಸಿದ್ದ ಅರ್ಯೋಕನ ಬಳಿಗೆ ಹೋದನು. ಅವನಿಗೆ, "ಬಾಬಿಲೋನಿನ ವಿದ್ವಾಂಸರನ್ನು ಕೊಲ್ಲಬೇಡ. ನನ್ನನ್ನು ರಾಜನ ಸನ್ನಿಧಿಗೆ ಸೇರಿಸಿಬಿಡು. ನಾನು ಆ ಕನಸಿನ ಉದ್ದೇಶವನ್ನು ರಾಜನಿಗೆ ತಿಳಿಸುವೆನು," ಎಂದು ಕೇಳಿಕೊಂಡನು.

25 ಕೂಡಲೆ ಅರ್ಯೋಕನು ದಾನಿಯೇಲನನ್ನು ರಾಜನ ಸನ್ನಿಧಿಗೆ ಬೇಗಬೇಗನೆ ಕರೆದುಕೊಂಡು ಬಂದನು. "ರಾಜರೇ, ಆ ಕನಸಿನ ಉದ್ದೇಶವನ್ನು ನಿಮಗೆ ತಿಳಿಸಬಲ್ಲ ಒಬ್ಬನು ನನಗೆ ಸಿಕ್ಕಿದ್ದಾನೆ. ಅವನು ಜುದೇಯದಿಂದ ಸೆರೆಯಾಳಾಗಿ ತಂದವರಲ್ಲಿ ಒಬ್ಬನಾಗಿದ್ದಾನೆ," ಎಂದು ಅರಿಕೆಮಾಡಿದನು.

26 ರಾಜನು ಬೇಲ್ತೆಶಚ್ಚರನೆಂದು ಹೆಸರು ಪಡೆದಿದ್ದ ದಾನಿಯೇಲನನ್ನು ನೋಡಿ, "ನಾನು ಕಂಡ ಕನಸನ್ನೂ ಅದರ ಅರ್ಥವನ್ನೂ ತಿಳಿಸಬಲ್ಲೆಯಾ?" ಎಂದು ವಿಚಾರಿಸಿದನು. 27ಅದಕ್ಕೆ ದಾನಿಯೇಲನು ಸನ್ನಿಧಿಯಲ್ಲಿ, "ರಾಜರು ಕೇಳುವ ರಹಸ್ಯವನ್ನು ವಿದ್ವಾಂಸರಾಗಲಿ, ಮಾಟಗಾರರಾಗಲಿ, ಜೋಯಿಸರಾಗಲಿ, ಶಕುನದವರಾಗಲಿ ಯಾರೂ ತಿಳಿಸಲಾರರು. 28ಆದರೆ ರಹಸ್ಯಗಳನ್ನು ವ್ಯಕ್ತಪಡಿಸಬಲ್ಲವರು ಒಬ್ಬರಿದ್ದಾರೆ. ಅವರೇ ಪರಲೋಕದಲ್ಲಿರುವ ದೇವರು. ಬರಲಿರುವ ಕಾಲದಲ್ಲಿ ನಡೆಯತಕ್ಕದ್ದನ್ನು ರಾಜ ನೆಬೂಕದ್ನೆಚ್ಚರರಾದ ನಿಮಗೆ ಅವರೇ ತಿಳಿಯಪಡಿಸಿದ್ದಾರೆ. ನೀವು ಕಂಡ ಕನಸು, ಹಾಸಿಗೆಯ ಮೇಲೆ ಮಲಗಿದ್ದಾಗ ನಿಮ್ಮ ಮನಸ್ಸಿಗೆ ತೋಚಿದ ಸ್ವಪ್ನಗಳು ಹೀಗಿವೆ:

29 "ರಾಜರೇ, ನೀವು ಹಾಸಿಗೆಯ ಮೇಲೆ ಮಲಗಿರುವಾಗ ಮುಂದೆ ಏನು ಸಂಭವಿಸುವುದೋ ಎಂಬ ಯೋಚನೆ ನಿಮ್ಮಲ್ಲಿ ಹುಟ್ಟಿತ್ತು. ಗುಟ್ಟುಗಳನ್ನು ಬಟ್ಟಬಯಲಾಗಿಸುವಾತ ಮುಂದೆ ಸಂಭವಿಸುವುದನ್ನು ನಿಮಗೆ ಗೋಚರಪಡಿಸಿದ್ದಾರೆ. 30ಆ ಗುಟ್ಟನ್ನು ನನಗೂ ವ್ಯಕ್ತಪಡಿಸಿದ್ದಾರೆ. ನಾನು ಎಲ್ಲ ಜೀವಂತರಿಗಿಂತ ಹೆಚ್ಚು ಬುದ್ಧಿಯುಳ್ಳವನು ಎಂದೇನೂ ಅಲ್ಲ. ಆ ಕನಸಿನ ಉದ್ದೇಶ ರಾಜರಾದ ತಮಗೆ ಗೋಚರವಾಗಿ ನಿಮ್ಮ ಮನದಾಲೋಚನೆಗಳು ನಿಮಗೆ ಅರ್ಥವಾಗಲಿ ಎಂದು ನನಗೂ ವ್ಯಕ್ತಪಡಿಸಲಾಗಿದೆ.

31 "ರಾಜರೇ ಕೇಳಿ, ತಾವು ಕಂಡದ್ದು ಒಂದು ಅದ್ಭುತ ಪ್ರತಿಮೆ. ಥಳಥಳನೆ ಹೊಳೆಯುವ ಆ ದೊಡ್ಡ ಪ್ರತಿಮೆ ನಿಮ್ಮೆದುರಿಗೆ ನಿಂತಿತ್ತು. ಭಯಂಕರವಾಗಿ ಕಾಣಿಸುತ್ತಿತ್ತು. 32ಆ ಪ್ರತಿಮೆಯ ತಲೆ ಅಪ್ಪಟ ಬಂಗಾರದ್ದು. ಎದೆ ತೋಳುಗಳು ಬೆಳ್ಳಿಯವು. ಹೊಟ್ಟೆಸೊಂಟಗಳು ಕಂಚಿನವು. 33ಕಾಲುಗಳು ಕಬ್ಬಿಣದವು. ಪಾದಗಳು ಕಬ್ಬಿಣ ಮತ್ತು ಮಣ್ಣಿನಿಂದ ಮಾಡಿದವು. 34ನೀವು ನೋಡುತ್ತಿದ್ದ ಹಾಗೆ ಬೆಟ್ಟದಿಂದ ಒಂದು ಗುಂಡು ಬಂಡೆ, ಯಾವ ಕೈಯಿಯೂ ಮುಟ್ಟದೆಯೇ, ಸಿಡಿದು ಬಂದು ಆ ಪ್ರತಿಮೆಯ ಕಬ್ಬಿಣ ಮಣ್ಣಿನಿಂದಾದ ಆ ಪಾದಗಳಿಗೆ ಬಡಿದು ಚೂರುಚೂರು ಮಾಡಿ ಬಿಟ್ಟಿತು. 35ಆಗ ಕಬ್ಬಿಣ–ಮಣ್ಣು–ಕಂಚು–ಬೆಳ್ಳಿ–ಬಂಗಾರ ಇವುಗಳೆಲ್ಲವೂ ಪುಡಿಪುಡಿಯಾದವು: ಸುಗ್ಗಿಯ ಕಣಗಳ ಹೊಟ್ಟಿನಂತಾದವು. ಗಾಳಿ ಅವುಗಳನ್ನು ತೂರಿಕೊಂಡು ಹೋಯಿತು. ಅವುಗಳಿಗೆ ನೆಲೆಯೇ ಇಲ್ಲವಾಯಿತು. ಪ್ರತಿಮೆಗೆ ಬಡಿದ ಆ ಬಂಡೆ ಮಹಾ ಪರ್ವತವಾಗಿ ಭೂಲೋಕದಲ್ಲೆಲ್ಲಾ ತುಂಬಿಕೊಂಡಿತು.

36 "ಅರಸರೇ, ಇದೇ ನೀವು ಕಂಡ ಕನಸು. ಇದರ ಅರ್ಥವನ್ನೂ ತಮ್ಮ ಸನ್ನಿಧಿಯಲ್ಲಿ ಅರಿಕೆ ಮಾಡುತ್ತೇವೆ. 37ನೀವು ರಾಜಾಧಿರಾಜರು, ಪರಲೋಕ ದೇವರು ನಿಮಗೆ ರಾಜ್ಯಬಲ, ಪರಾಕ್ರಮ ಹಾಗು ವೈಭವಗಳನ್ನು ದಯಪಾಲಿಸಿದ್ದಾರೆ. 38ನರಮಾನವರು ವಾಸಿಸುವ ಸಕಲ ಪ್ರಾಂತ್ಯಗಳಲ್ಲಿ ಆಕಾಶಪಕ್ಷಿಗಳನ್ನೂ ಭೂಜಂತುಗಳನ್ನೂ ನಿಮ್ಮ ಕೈಗೆ ಒಪ್ಪಿಸಿದ್ದಾರೆ. 39ನಿಮ್ಮ ಕಾಲವಾದ ಮೇಲೆ ನಿಮಗಿಂತ ಬೀಳಾದ ಮತ್ತೊಂದು ರಾಜ್ಯ ತಲೆಯೆತ್ತಿಕೊಳ್ಳುವುದು. ಅನಂತರ ಬೇರೊಂದು ರಾಜ್ಯ ಕಂಚಿನದಾಗಿ ಕಾಣಿಸಿಕೊಂಡು ಭೂಮಂಡಲವನ್ನೆಲ್ಲ ಆಳುವುದು. 40ನಾಲ್ಕನೆಯ ರಾಜ್ಯ ಕಬ್ಬಿಣದಷ್ಟು ಗಟ್ಟಿಗೆ ಕಬ್ಬಿಣ ಎಲ್ಲ ವಸ್ತುಗಳನ್ನು ಚೂರುಚೂರಾಗಿ ಒಡೆದು ಹಾಕುತ್ತದೆ. ಅಂತೆಯೇ ಅದು ಎಲ್ಲವನ್ನು ಚೂರು ಚೂರಾಗಿಸಿ ಧ್ವಂಸ ಮಾಡುವುದು. 41ಪಾದಗಳಲ್ಲಿ ಹಾಗು ಪಾದಬೆರಳುಗಳಲ್ಲಿ ಒಂದು ಅಂಶ ಕಬ್ಬಿಣ ಮತ್ತೊಂದು ಅಂಶ ಮಣ್ಣು ಆಗಿದ್ದನ್ನು ನೀವು ನೋಡಿದಿರಿ. ಅಂತೆಯೇ ಆ ರಾಜ್ಯವು ಭಿನ್ನಭಿನ್ನವಾಗಿರುವುದು. ಜೇಡಿಮಣ್ಣಿನೊಂದಿಗೆ ಕಬ್ಬಿಣ ಮಿಶ್ರವಾಗಿದ್ದನ್ನು ನೀವು ನೋಡಿದಂತೆ ಆ ರಾಜ್ಯದಲ್ಲಿ ಕಬ್ಬಿಣದ ಬಲ ಸೇರಿರುವುದು. 42ಕಾಲ್ಬೆರಳುಗಳ ಒಂದಂಶ ಮಣ್ಣು ಆಗಿದ್ದ ಹಾಗೆ ಆ ರಾಜ್ಯದ ಒಂದಂಶ ಗಟ್ಟಿ ಇನ್ನೊಂದು ಅಂಶ ಬೆಂಡು. 43ಕಬ್ಬಿಣ ಜೇಡಿಮಣ್ಣಿನೊಂದಿಗೆ ಬೆರೆತಿರುವುದನ್ನು ನೀವು ನೋಡಿದ ಮೇರೆಗೆ ಆ ರಾಜ್ಯಾಂಶಗಳು ಮದುವೆ ಸಂಬಂಧದಿಂದ ಬೆರೆತುಕೊಳ್ಳುವುವು. ಆದರೆ ಕಬ್ಬಿಣ ಮಣ್ಣಿನೊಂದಿಗೆ ಹೇಗೆ ಕಲೆಯುವುದಿಲ್ಲವೋ ಹಾಗೆ ಅವು ಒಂದಕ್ಕೊಂದು ಅಂಟಿಕೊಳ್ಳುವುದಿಲ್ಲ. 44ಆ ರಾಜರ ಕಾಲದಲ್ಲಿ ಪರಲೋಕ ದೇವರು ಒಂದು ಸಾಮ್ರಾಜ್ಯವನ್ನು ಸ್ಥಾಪಿಸುವರು. ಅದು ಎಂದಿಗೂ ಅಳಿಯದು. ಅದರ ಪ್ರಾಬಲ್ಯವು ಬೇರೆ ರಾಷ್ಟ್ರಕ್ಕೆ ಜಾರಿಹೋಗದು. ರಾಷ್ಟ್ರಗಳನ್ನೆಲ್ಲಾ ಭಂಗಪಡಿಸಿ, ನಿರ್ನಾಮಮಾಡಿ ಆ ಸಾಮ್ರಾಜ್ಯ ಶಾಶ್ವತವಾಗಿ ನಿಲ್ಲವುದು.

45ಬೆಟ್ಟದಿಂದ ಒಂದು ಗುಂಡುಬಂಡೆ, ಯಾವ ಕೈಯೂ ಮುಟ್ಟದೆಯೇ, ಸಿಡಿದುಬಂದು ಕಬ್ಬಿಣ – ಕಂಚು – ಮಣ್ಣು – ಬೆಳ್ಳಿ – ಬಂಗಾರ ಇವುಗಳನ್ನು ಚೂರುಚೂರು ಮಾಡಿದ್ದನ್ನು ನೀವು ನೋಡಿದಿರಿ. ಇದರಿಂದ ಪರಲೋಕ ದೇವರು ಮುಂದೆ ನಡೆಯಲಿರುವ ವಿಷಯಗಳನ್ನು ರಾಜರಾದ ತಮಗೆ ತಿಳಿಯಪಡಿಸಿದ್ದಾರೆ. ಆ ಕನಸು ನಿಜವಾದುದು. ಅದರ ಅರ್ಥವೂ ನಂಬತಕ್ಕದ್ದು," ಎಂದು ವಿವರಿಸಿದನು.

### ಅರಸನ ವಿಶ್ವಾಸ

46 ಇದನ್ನು ಆಲಿಸಿದ ರಾಜ ನೆಬೂಕದ್ನೆಚ್ಚರನು ಎದ್ದು ಅಡ್ಡಬಿದ್ದನು. ದಾನಿಯೇಲನನ್ನು ಪೂಜಿಸಿ, ಅವನಿಗೆ ನೈವೇದ್ಯಮಾಡಿ, ಧೂಪಾರತಿ ಎತ್ತಬೇಕೆಂದು ಆಜ್ಞಾಪಿಸಿದನು. 47ದಾನಿಯೇಲನ ವಿವರಕ್ಕೆ ಉತ್ತರವಾಗಿ, "ನೀನು ಈ ಗುಟ್ಟನ್ನು ಬಯಲಿಗೆ ತರಲು ಸಮರ್ಥನಾದ ಕಾರಣ ನಿಮ್ಮ ದೇವರು ದೇವಾಧಿ ದೇವರು, ರಾಜಾಧಿರಾಜರು, ಗುಟ್ಟನ್ನು ಬಟ್ಟಬಯಲಾಗಿಸುವವರು! ಇದು ಸತ್ಯ" ಎಂದು ಹೇಳಿದನು. 48ಬಳಿಕ ರಾಜನು ದಾನಿಯೇಲನನ್ನು ದೊಡ್ಡ ಪದವಿಗೆ ಏರಿಸಿದನು. ಅಮೂಲ್ಯವಾದ ಬಹುಮಾನಗಳನ್ನು ಕೊಟ್ಟನು. ಬಾಬಿಲೋನಿನ ಸಂಸ್ಥಾನವನ್ನೆಲ್ಲ ಅವನಿಗೆ ಅಧೀನಪಡಿಸಿ ಬಾಬಿಲೋನಿನ ಎಲ್ಲಾ ವಿದ್ವಾಂಸರಿಗೂ ಅವನನ್ನು ಅಧ್ಯಕ್ಷನನ್ನಾಗಿ ನೇಮಿಸಿದನು. 49ದಾನಿಯೇಲನ ಕೋರಿಕೆಯ ಪ್ರಕಾರ ರಾಜನು ಶದ್ರಕ್, ಮೇಶಕ್ ಮತ್ತು ಅಬೇದ್‍ನೆಗೋ ಎಂಬುವರನ್ನು ಬಾಬಿಲೋನಿನ ಪ್ರಾಂತ್ಯಾಧಿಪತಿಗಳನ್ನಾಗಿ ನೇಮಿಸಿದನು. ದಾನಿಯೇಲನು ಮಾತ್ರ ಅರಮನೆಯಲ್ಲೇ ಕಾರ್ಯನಿರತನಾದನು.

### ಬಂಗಾರದ ಪ್ರತಿಮೆಯನ್ನು ಆರಾಧಿಸಲು ಆಜ್ಞೆ

**3** ರಾಜ ನೆಬೂಕದ್ನೆಚ್ಚರನು 27 ಮೀಟರ್ ಎತ್ತರದ 3 ಮೀಟರ್ ಅಗಲದ ಒಂದು ಬಂಗಾರದ ಪ್ರತಿಮೆಯನ್ನು ಮಾಡಿಸಿ ಬಾಬಿಲೋನ್ ಸಂಸ್ಥಾನದ 'ದೂರಾ' ಎಂಬ ಬಯಲಿನಲ್ಲಿ ನಿಲ್ಲಿಸಿದನು. 2ಬಳಿಕ ರಾಜ ನೆಬೂಕದ್ನೆಚ್ಚರನು ತಾನು ನಿಲ್ಲಿಸಿದ್ದ ಆ ಪ್ರತಿಮೆಯ ಪ್ರತಿಷ್ಠಾಪನಾ ಸಮಾರಂಭವನ್ನು ಏರ್ಪಡಿಸಿ, ಉಪರಾಜ, ನಾಯಕ, ದೇಶಾಧಿಪತಿ, ಮಂತ್ರಿ, ಕೋಶಾಧ್ಯಕ್ಷ, ನ್ಯಾಯಾಧಿಪತಿ, ವಿಚಾರಕ ಇವರನ್ನೂ, ಸಮಸ್ತ ಸಂಸ್ಥಾನಾಧಿಕಾರಿಗಳನ್ನೂ ಸಭೆಸೇರಿಸುವಂತೆ ದೂತರನ್ನು ಕಳುಹಿಸಿದನು. 3ಆ ಉಪರಾಜ, ನಾಯಕ, ದೇಶಾಧಿಪತಿ, ಮಂತ್ರಿ, ಕೋಶಾಧ್ಯಕ್ಷ, ನ್ಯಾಯಾಧಿಪತಿ, ವಿಚಾರಕ ಇವರೂ ಸಮಸ್ತ ಸಂಸ್ಥಾನಾಧಿಕಾರಿಗಳೂ ರಾಜ ನೆಬೂಕದ್ನೆಚ್ಚರನು ನಿಲ್ಲಿಸಿದ್ದ ಪ್ರತಿಮೆಯ ಪ್ರತಿಷ್ಠಾಪನಾ ಸಮಾರಂಭಕ್ಕೆ ನೆರೆದು ಬಂದು ಆ ಪ್ರತಿಮೆಯ ಮುಂದೆ ನಿಂತುಕೊಂಡರು. 4ಆಗ, ಸಾರುವವನು ಗಟ್ಟಿಯಾಗಿ ಕೂಗಿ, "ವಿವಿಧ ಜನಾಂಗ–ಕುಲ–ಭಾಷೆಗಳವರೇ, ನಿಮಗೆ ಹೀಗೆಂದು ರಾಜಾಜ್ಞೆಯಾಗಿದೆ: 5ನೀವು ತುತೂರಿ, ಕೊಳಲು, ಕಿನ್ನರಿ, ತಂಬೂರಿ, ವೀಣೆ, ಓಲಗ ಮುಂತಾದ ಸಕಲ ವಾದ್ಯಗಳ ಧ್ವನಿಯನ್ನು ಕೇಳಿದ ಕೂಡಲೆ ಅಡ್ಡಬಿದ್ದು ರಾಜ ನೆಬೂಕದ್ನೆಚ್ಚರರು ನಿಲ್ಲಿಸಿರುವ ಈ ಬಂಗಾರದ ಪ್ರತಿಮೆಯನ್ನು ಆರಾಧಿಸಬೇಕು. 6ಯಾರು ಅಡ್ಡಬಿದ್ದು ಆರಾಧಿಸುವುದಿಲ್ಲವೋ ಅಂಥವರನ್ನು ತಕ್ಷಣವೇ ಧಗಧಗನೆ ಉರಿಯುವ ಆವಿಗೆಯೊಳಗೆ ಹಾಕಲಾಗುವುದು," ಎಂದು ಸಾರಿದನು. 7ಅಂತೆಯೇ ಸಮಸ್ತ ಜನಾಂಗ–ಕುಲ–ಭಾಷೆಗಳವರು ತುತೂರಿ, ಕೊಳಲು, ಕಿನ್ನರಿ, ತಂಬೂರಿ, ವೀಣೆ ಮುಂತಾದ ಸಕಲ ವಾದ್ಯಗಳ ಧ್ವನಿಯನ್ನು ಕೇಳಿದ ಕೂಡಲೆ ಎಲ್ಲರು ಅದೇ ಸಮಯದಲ್ಲಿ ಅಡ್ಡಬಿದ್ದು ರಾಜ ನೆಬೂಕದ್ನೆಚ್ಚರನು ನಿಲ್ಲಿಸಿದ್ದ ಆ ಬಂಗಾರದ ಪ್ರತಿಮೆಯನ್ನು ಆರಾಧಿಸಿದರು. 8ಆಗ ಕೆಲವು ಮಂದಿ ಬಾಬಿಲೋನಿಯರು ಯೆಹೂದ್ಯರ ಮೇಲೆ ದೂರು ಹೊರಿಸಲು ರಾಜ ನೆಬೂಕದ್ನೆಚ್ಚರನ ಬಳಿಗೆ ಬಂದರು. 9 "ಅರಸರೇ, ನೀವು ಚಿರಂಜೀವಿಯಾಗಿರಿ!" 10ಪ್ರಭುವೇ, ತುತೂರಿ, ಕೊಳಲು, ಕಿನ್ನರಿ, ತಂಬೂರಿ, ವೀಣೆ, ಓಲಗ ಮುಂತಾದ ಸಕಲ ವಾದ್ಯಗಳ ಧ್ವನಿ ಕೇಳಿದ ಪ್ರತಿಯೊಬ್ಬನೂ ಅಡ್ಡಬಿದ್ದು ಬಂಗಾರದ ಪ್ರತಿಮೆಯನ್ನು ಆರಾಧಿಸಲಿ; 11ಯಾವನು ಅಡ್ಡಬಿದ್ದು ಆರಾಧಿಸುವುದಿಲ್ಲವೋ ಅಂಥವನು ಧಗಧಗಿಸುವ ಆವಿಗೆಯೊಳಗೆ ಹಾಕಲ್ಪಡಲಿ ಎಂದು ತಾವು ಆಜ್ಞೆ ಮಾಡಿದಿರಲ್ಲವೆ? 12ತಾವು ಬಾಬಿಲೋನಿನ ಸಂಸ್ಥಾನಾಧಿಕರಾತ್ವವನ್ನು ವಹಿಸಿಕೊಟ್ಟ ಶದ್ರಕ್, ಮೇಶಕ್ ಹಾಗೂ ಅಬೇದ್‍ನೆಗೋ ಎಂಬ ಕೆಲವು ಮಂದಿ

ಯೆಹೂದ್ಯರು ಇದ್ದಾರೆ. ರಾಜರೇ ಅವರು ನಿಮ್ಮನ್ನು ಲಕ್ಷಿಸುವುದಿಲ್ಲ. ನಿಮ್ಮ ದೇವರುಗಳಿಗೆ ಸೇವೆ ಮಾಡುವುದಿಲ್ಲ. ನೀವು ಸ್ಥಾಪಿಸಿದ ಬಂಗಾರದ ಪ್ರತಿಮೆಯನ್ನು ಆರಾಧಿಸುವುದಿಲ್ಲ," ಎಂದು ಆಪಾದಿಸಿದರು.

13 ನೆಬೂಕದ್ನೆಚ್ಚರನು ಉಗ್ರಕೋಪಗೊಂಡು ಶದ್ರಕ್, ಮೇಶಕ್, ಅಬೇದ್‌ನೆಗೋ ಎಂಬವರನ್ನು ಹಿಡಿದುತರಲು ಆಜ್ಞಾಪಿಸಿದನು. 14ಅದರಂತೆಯೇ ಅವರನ್ನು ಹಿಡಿದು ತರಲಾಯಿತು. ನೆಬೂಕದ್ನಚ್ಚರನು ಅವರಿಗೆ, "ಶದ್ರಕ್, ಮೇಶಕ್, ಹಾಗು ಅಬೇದ್‌ನೆಗೋ ಎಂಬವರೇ,ನೀವು ಬೇಕುಬೇಕೆಂದು, ನನ್ನ ದೇವರಿಗೆ ಸೇವೆಮಾಡದೆ, ನಾನು ಸ್ಥಾಪಿಸಿದ ಬಂಗಾರದ ಪ್ರತಿಮೆಯನ್ನು ಆರಾಧಿಸದೆ ಇರುವಿರೋ? 15ಈಗಲಾದರು ನೀವು ಸಿದ್ಧರಾಗಿದ್ದು ತುತೂರಿ, ಕೊಳಲು, ಕಿನ್ನರಿ, ತಂಬೂರಿ, ವೀಣೆ, ಓಲಗ ಮುಂತಾದ ಸಕಲ ವಾದ್ಯಗಳ ಧ್ವನಿ ಕೇಳಿದ ಕೂಡಲೆ ಅಡ್ಡಬಿದ್ದು ನಾನು ಸ್ಥಾಪಿಸಿದ ಪ್ರತಿಮೆಯನ್ನು ಆರಾಧಿಸಿದರೆ ಸರಿ, ಇಲ್ಲವಾದರೆ ಈ ಗಳಿಗೆಯಲ್ಲೆ ನಿಮ್ಮನ್ನು ಧಗಧಗನೆ ಉರಿಯುವ ಆವಿಗೆಯೊಳಗೆ ಹಾಕಲಾಗುವುದು. ನಿಮ್ಮನ್ನು ನನ್ನ ಕೈಯಿಂದ ಬಿಡಿಸಬಲ್ಲ ದೇವರು ಯಾರಿದ್ದಾನೆ?" ಎಂದು ಹೇಳಿದನು.

16 ಇದನ್ನು ಕೇಳಿದ ಶದ್ರಕ್, ಮೇಶಕ್ ಮತ್ತು ಆಬೇದ್‌ನೆಗೋ ಎಂಬುವರು ರಾಜನಿಗೆ: "ನೆಬೂಕದ್ನೆಚ್ಚರ ಅರಸರೇ, ಈ ವಿಷಯದಲ್ಲಿ ನಾವು ನಿಮಗೆ ಏನನ್ನೂ ಹೇಳಬೇಕಾಗಿಲ್ಲ. 17ನಾವು ಸೇವೆ ಮಾಡುವ ದೇವರಿಗೆ ಚಿತ್ತವಿದ್ದರೆ ಅವರೇ ಧಗಧಗನೆ ಉರಿಯುವ ಆವಿಗೆಯೊಳಗಿಂದಲೂ ನಮ್ಮನ್ನು ಕಾಪಾಡಬಲ್ಲರು. ಅವರೇ ನಮ್ಮನ್ನು ನಿಮ್ಮ ಕೈಯಿಂದಲೂ ಬಿಡಿಸಬಲ್ಲರು. 18ಒಂದು ವೇಳೆ ಬಿಡಿಸದಿದ್ದರೂ ರಾಜರೇ, ಇದು ನಿಮಗೆ ತಿಳಿದಿರಲಿ: ನಾವು ನಿಮ್ಮ ದೇವರುಗಳಿಗೆ ಸೇವೆಮಾಡುವುದಿಲ್ಲ. ನೀವು ಸ್ಥಾಪಿಸಿರುವ ಬಂಗಾರದ ಪ್ರತಿಮೆಯನ್ನು ಆರಾಧಿಸುವುದಿಲ್ಲ," ಎಂದು ಉತ್ತರಕೊಟ್ಟರು.

## ದಾನಿಯೇಲನ ಗೆಳೆಯರಿಗೆ ಮರಣದಂಡನೆ

19 ಆಗ ನೆಬೂಕದ್ನೆಚ್ಚರನು ಕೋಪೋದ್ರೇಕಗೊಂಡನು. ಶದ್ರಕ್, ಮೇಶಕ್ ಮತ್ತು ಅಬೇದ್‌ನೆಗೋ ಅವರ ಬಗ್ಗೆ ಅವನ ಮುಖಚರ್ಯೆ ಬದಲಾಯಿತು. ಆವಿಗೆಯನ್ನು ವಾಡಿಕೆಗಿಂತ ಏಳರಷ್ಟು ಹೆಚ್ಚಾಗಿ ಉರಿಸಬೇಕೆಂದು ಆಜ್ಞಾಪಿಸಿದನು. 20ಇದಲ್ಲದೆ ತನ್ನ ಸೈನ್ಯದ ಕೆಲವು ಮಂದಿ ಶೂರರಿಗೆ ಶದ್ರಕ್, ಮೇಶಕ್, ಅಬೇದ್‌ನೆಗೋ ಅವರನ್ನು ಕಟ್ಟಿ ಧಗಧಗನೆ ಉರಿಯುವ ಆವಿಗೆಯೊಳಗೆ ಎತ್ತಿಹಾಕಬೇಕೆಂದು ಅಪ್ಪಣೆಕೊಟ್ಟನು. 21ಅದರಂತೆಯೇ ಉಡಿಗೆತೊಡಿಗೆ, ಪೇಟ ಮುಂತಾದ ಬಟ್ಟೆಬರೆಗಳನ್ನು ಧರಿಸಿಕೊಂಡಿದ್ದ ಹಾಗೆಯೇ ಅವರನ್ನು ಕಟ್ಟಿ ಧಗಧಗನೆ ಉರಿಯುವ ಆವಿಗೆಯೊಳಗೆ ಹಾಕಿಬಿಟ್ಟರು. 22ರಾಜಾಜ್ಞೆಯು ಖಡಾಖಂಡಿತವಾಗಿ ದ್ದುದರಿಂದಲೂ ಆವಿಗೆಯ ಕಾವು ಅತಿ ತೀಕ್ಷ್ಣವಾಗಿದ್ದರಿಂದಲೂ ಅಗ್ನಿಕುಂಡವು ಶದ್ರಕ್, ಮೇಶಕ್ ಮತ್ತು ಅಬೇದ್‌ನೆಗೋ ಎಂಬುವರನ್ನು ಎತ್ತಿ ತಂದವರನ್ನೇ ಭಸ್ಮಮಾಡಿ ಬಿಟ್ಟಿತು. 23ಅತ್ತ ಶದ್ರಕ್, ಮೇಶಕ್, ಅಬೇದ್‌ನೆಗೋ ಈ ಮೂವರು ಕಟ್ಟಿನೊಂದಿಗೆ ಧಗಧಗನೆ ಉರಿಯುವ ಆವಿಗೆಯ ನಡುವೆ ಬಿದ್ದರು.

## ದೇವಭಕ್ತರನ್ನು ಸುಡದ ಅಗ್ನಿಕುಂಡ

24 ಇತ್ತ ರಾಜ ನೆಬೂಕದ್ನೆಚ್ಚರನು ಬೆಚ್ಚಿಬಿದ್ದು, ತಟ್ಟನೆ ಎದ್ದು ತನ್ನ ಮಂತ್ರಿಗಳನ್ನು ಕರೆಸಿ, "ನಾವು ಮೂವರನ್ನು ಕಟ್ಟಿ ಬೆಂಕಿಯಲ್ಲಿ ಹಾಕಿಸಿದೆವಲ್ಲವೆ?" ಎಂದು ಕೇಳಿದನು. ಅವರು ರಾಜನಿಗೆ, "ಹೌದು ಪ್ರಭೂ, ಅದು ಸತ್ಯ," ಎಂದು ಉತ್ತರ ಕೊಟ್ಟರು.

25 ಅದಕ್ಕೆ ಅವನು, "ಆದರೆ, ಇಗೋ ಕಟ್ಟಿಲ್ಲದ ನಾಲ್ವರನ್ನು ನಾನು ನೋಡುತ್ತಿದ್ದೇನೆ. ಬೆಂಕಿಯಲ್ಲಿ ತಿರುಗಾಡುತ್ತಿದ್ದಾರೆ; ಅವರಿಗೆ ಯಾವ ಹಾನಿಯೂ ಆಗುತ್ತಿಲ್ಲ. 26ನಾಲ್ಕನೆಯವನ ರೂಪ ದೇವಪುತ್ರನ ರೂಪದಂತಿದೆ!" ಎಂದು ಹೇಳಿ ಧಗಧಗನೆ ಉರಿಯುತ್ತಿದ್ದ ಆವಿಗೆಯ ಬಾಯಿಯ ಬಳಿಗೆಹೋಗಿ, "ಪರಾತ್ಪರ ದೇವರ ದಾಸರಾದ ಶದ್ರಕ್, ಮೇಶಕ್ ಮತ್ತು ಅಬೇದ್‌ನೆಗೋ ಎಂಬುವರೇ ಬನ್ನಿ, ಹೊರಗೆ ಬನ್ನಿ," ಎಂದು ಕೂಗಿಕೊಂಡನು.

ಅಂತೆಯೇ ಶದ್ರಕ್, ಮೇಶಕ್ ಹಾಗು ಅಬೇದ್‌ನೆಗೋ ಅವರು ಬೆಂಕಿಯಿಂದ ಹೊರಟು ಬಂದರು.

27 ಅವರನ್ನು ನೋಡಲು ಉಪರಾಜ, ನಾಯಕ, ದೇಶಾಧಿಪತಿ, ಮಂತ್ರಿ ಇವರೆಲ್ಲರು ಕೂಡಿ ಬಂದರು. ಅವರಿಗೆ ಬೆಂಕಿಯ ತಾಪವೂ ತಟ್ಟಿಲ್ಲ, ತಲೆಗೂದಲೂ ಸುಟ್ಟಿಲ್ಲ, ಅವರ ಬಟ್ಟೆಬರೆಗೆ ಏನೂ ಆಗಿಲ್ಲ, ಬೆಂಕಿಯ ವಾಸನೆಯೂ ಇಲ್ಲ, ಎಂದು ತಿಳಿದುಕೊಂಡರು.

28 ಆಗ ನೆಬೂಕದ್ನೆಚ್ಚರನು, "ಶದ್ರಕ್, ಮೇಶಕ್ ಹಾಗು ಅಬೇದ್‍ನೆಗೋ ಎಂಬುವರ ದೇವರಿಗೆ ಸ್ತೋತ್ರವಾಗಲಿ! ಆತ ತನ್ನ ದೂತರನ್ನು ಕಳಿಸಿ ತನ್ನಲ್ಲಿ ವಿಶ್ವಾಸವಿಟ್ಟ ಇವರನ್ನು ರಕ್ಷಿಸಿದ್ದಾನೆ. ಇವರೋ ರಾಜಾಜ್ಞೆಯನ್ನೂ ಮೀರಿ ತಮ್ಮ ದೇವರನ್ನೇ ಹೊರತು ಇನ್ನಾವ ದೇವರನ್ನೂ ಪೂಜಿಸಿ ಆರಾಧಿಸಬಾರದೆಂದು ಸ್ವಂತ ದೇಹಗಳನ್ನೇ ಸಾವಿಗೊಪ್ಪಿಸಿದಂಥ ಭಕ್ತರು!
29ಸಕಲ ದೇಶ-ಕುಲ-ಭಾಷೆಗಳವರಲ್ಲಿ ಯಾರಾದರು ಶದ್ರಕ್, ಮೇಶಕ್ ಹಾಗು ಅಬೇದ್‍ನೆಗೋ ಎಂಬುವರ ದೇವರ ವಿಷಯದಲ್ಲಿ ಅಲ್ಲಸಲ್ಲದ ಮಾತನಾಡಿದರೆ ಅಂಥವರನ್ನು ತುಂಡುತುಂಡಾಗಿ ಕತ್ತರಿಸಿ ಅವರ ಮನೆಗಳನ್ನು ತಿಪ್ಪೆಗುಂಡಿಯನ್ನಾಗಿಸಬೇಕೆಂದು ಆಜ್ಞೆ ವಿಧಿಸುತ್ತೇನೆ. ಹೀಗೆ ರಕ್ಷಿಸಲು ಸಮರ್ಥನಾದ ಇನ್ನಾವ ದೇವರೂ ಇಲ್ಲವೇ ಇಲ್ಲ," ಎಂದು ಹೇಳಿದನು.
30ಇದಾದ ಬಳಿಕ ರಾಜನು ಶದ್ರಕ್, ಮೇಶಕ್, ಅಬೇದ್‍ನೆಗೋ ಎಂಬುವರನ್ನು ಸಂಸ್ಥಾನದಲ್ಲಿ ಉನ್ನತಪದವಿಗೆ ಏರಿಸಿದನು.

### ಕಡಿದ ಮರದ ಕನಸು

**4** ಜಗದಲ್ಲಿ ವಾಸಿಸುವ ಎಲ್ಲಾ ಜನಾಂಗದವರಿಗೂ ಕುಲದವರಿಗೂ ಭಾಷೆಯವರಿಗೂ ರಾಜ ನೆಬೂಕದ್ನೆಚ್ಚರನು ಹೊರಟಿಸಿದ ಪ್ರಕಟಣೆ- "ನಿಮಗೆ ಹೆಚ್ಚೆಚ್ಚು ಸುಖಶಾಂತಿ ಲಭಿಸಲಿ!
2ಪರಾತ್ಪರ ದೇವರು ನನ್ನ ವಿಷಯದಲ್ಲಿ ನಡೆಸಿರುವ ಸೂಚಕ ಕಾರ್ಯಗಳನ್ನೂ ಅದ್ಭುತಗಳನ್ನೂ ಪ್ರಚುರಪಡಿಸುವುದು ನನಗೆ ವಿಹಿತವೆಂದು ತೋರಿಬಂದಿದೆ:

3 ದೇವರ ಸೂಚಕ ಕಾರ್ಯಗಳು ಎಷ್ಟೋ ಅತಿಶಯ !
ಅವರ ಅದ್ಭುತಗಳು ಎಷ್ಟೋ ಅಪಾರ !
ಅವರ ರಾಜ್ಯ ಶಾಶ್ವತ ಸಾಮ್ರಾಜ್ಯ;
ಅವರ ಆಳ್ವಿಕೆ ತಲತಲಾಂತರಕ್ಕೂ ಸ್ಥಿರ.

4 "ನೆಬೂಕದ್ನೆಚ್ಚರನಾದ ನಾನು ನನ್ನ ಅರಮನೆಯಲ್ಲಿ ಸುಖವಾಗಿದ್ದೆ. ನನ್ನ ರಾಜಭವನದಲ್ಲಿ ನೆಮ್ಮದಿಯಿಂದ ಇದ್ದೆ.
5ಹೀಗಿರುವಲ್ಲಿ ಭಯಂಕರವಾದ ಕನಸೊಂದನ್ನು ಕಂಡೆ. ನಿದ್ರೆಯಲ್ಲಿ ನನಗೆ ತೋಚಿದ ಆಲೋಚನೆಗಳು ಹಾಗು ಮನಸ್ಸಿಗೆ ಬಿದ್ದ ಸ್ವಪ್ನಗಳು ನನ್ನನ್ನು ಕಳವಳಕ್ಕೆ ಈಡುಮಾಡಿದವು.
6ಆದ್ದರಿಂದ ಕನಸಿನ ಅರ್ಥವನ್ನು ನನಗೆ ತಿಳಿಸಬೇಕೆಂದು ಬಾಬಿಲೋನಿನ ವಿದ್ವಾಂಸರೆಲ್ಲರನ್ನು ಕರೆದು ತರಬೇಕೆಂದು ಆಜ್ಞಾಪಿಸಿದೆ.
7ಜೋಯಿಸರು, ಮಂತ್ರವಾದಿಗಳು, ಪಂಡಿತರು, ಶಾಕುನಿಕರು ಇವರೆಲ್ಲರು ನನ್ನ ಸಮ್ಮುಖಕ್ಕೆ ಬಂದರು. ನಾನು ಕನಸನ್ನು ತಿಳಿಸಿದೆ. ಆದರೆ ಅದರ ಅರ್ಥವನ್ನು ಅವರಿಂದ ತಿಳಿಸಲಾಗಲಿಲ್ಲ.
8ನನ್ನ ದೇವರ ಹೆಸರು ಸೇರಿರುವ 'ಬೇಲ್ತೆಶಚ್ಚರ' ಎಂಬ ಅಡ್ಡ ಹೆಸರನ್ನು ಹೊಂದಿದ ದಾನಿಯೇಲನು ಕೊನೆಗೆ ನನ್ನ ಬಳಿಗೆ ಬಂದ. ಪರಿಶುದ್ಧ ದೇವರ ಆತ್ಮ ಅವನಲ್ಲಿತ್ತು. ಅವನಿಗೆ ನನ್ನ ಕನಸನ್ನು ಹೀಗೆ ತಿಳಿಸಿದೆ.
9'ಬೇಲ್ತೆಶಚ್ಚರನೇ, ಜೋಯಿಸರಲ್ಲಿ ಪ್ರಾಮುಖ್ಯನೇ, ಪರಿಶುದ್ಧ ದೇವರ ಆತ್ಮ ನಿನ್ನಲ್ಲಿ ನೆಲೆಯಾಗಿದೆಯೆಂದು ತಿಳಿದಿದ್ದೇನೆ. ಯಾವ ರಹಸ್ಯವೂ ನಿನಗೆ ಅಶೋಧ್ಯವಲ್ಲವೆಂದು ನನಗೆ ಗೊತ್ತು. ಆದುದರಿಂದ ನಾನು ಕಂಡ ಕನಸನ್ನೂ ಅದರ ಅರ್ಥವನ್ನೂ ನನಗೆ ತಿಳಿಸು.'

10 'ನಾನು ಹಾಸಿಗೆ ಮೇಲೆ ಮಲಗಿದ್ದಾಗ ನನ್ನ ಮನಸ್ಸಿಗೆ ಬಿದ್ದ ಕನಸುಗಳು ಇವು: ಇಗೋ ಭೂಮಧ್ಯದಲ್ಲಿ ಬಹು ಎತ್ತರವಾದ ಒಂದು ಮರವನ್ನು ಕಂಡೆ.
11ಆ ಮರ ಬೆಳೆದು ಬಲಗೊಂಡಿತ್ತು. ಅದರ ತುದಿ ಆಕಾಶವನ್ನು ಮುಟ್ಟುತ್ತಿತ್ತು. ಅದು ಭೂಲೋಕದ ಕಟ್ಟಕಡೆಗೂ ಕಾಣಿಸುತ್ತಿತ್ತು.
12ಅದರ ಎಲೆಗಳು ಚೆಲುವಾಗಿದ್ದವು. ಅದು ಹಣ್ಣುಗಳಿಂದ ತುಂಬಿತ್ತು. ಅದರಿಂದ ಎಲ್ಲಕ್ಕೂ ಆಹಾರ, ವನ್ಯಮೃಗಗಳಿಗೆ ಅದರ ನೆರಳಿನಲ್ಲಿ ಆಶ್ರಯ, ಆಕಾಶದ ಪಕ್ಷಿಗಳಿಗೆ ಅದರ ಕೊಂಬೆಗಳಲ್ಲಿ ನೆಲೆ, ಎಲ್ಲಾ ಪ್ರಾಣಿಗಳಿಗೂ ಅದರಿಂದ ಪೋಷಣೆ ದೊರಕುತ್ತಿತ್ತು.

13 'ನಾನು ಹಾಸಿಗೆ ಮೇಲೆ ಮಲಗಿದ್ದಾಗ ನನ್ನ ಮನಸ್ಸಿಗೆ ಬಿದ್ದ ಕನಸಿನಲ್ಲಿ, ಇಗೋ, ಕಾವಲುಗಾರನಾದ ದೇವದೂತನೊಬ್ಬನು ಆಕಾಶದಿಂದ ಇಳಿದು, ಗಟ್ಟಿಯಾಗಿ ಕೂಗಿ: 14ಆ ಮರವನ್ನು ಕಡಿಯಿರಿ, ಕೊಂಬೆಗಳನ್ನು ಕತ್ತರಿಸಿ, ಎಲೆಗಳನ್ನು ಉದುರಿಸಿ, ಹಣ್ಣುಗಳನ್ನು ಕಿತ್ತುಬಿಸಾಡಿ. ಮೃಗಗಳು ಅದರ ನೆರಳನ್ನು ಬಿಟ್ಟು ತೆರಳಲಿ, ಪಕ್ಷಿಗಳು ರೆಂಬೆಗಳನ್ನು ತೊರೆದು ಹೋಗಲಿ. 15ಆದರೆ ಅದರ ಬುಡದ ಮೋಟನ್ನು ನೆಲದಲ್ಲಿ ಉಳಿಸಿ ಹಿತ್ತಾಳೆ ಕಬ್ಬಿಣಗಳ ಪಟ್ಟಿಯನ್ನು ಅದಕ್ಕೆ ಬಿಗಿಯಿರಿ. ಅಡವಿಯ ಹುಲ್ಲು ಅದರ ಸುತ್ತ ಬೆಳೆದಿರಲಿ.'

'ಆಕಾಶದ ಇಬ್ಬನಿ ಅದನ್ನು ತೋಯಿಸಲಿ, ಹುಲ್ಲುಗಿಡಗಳ ಹಾಗು ಕಾಡು ಮೃಗಗಳ ನಡುವೆ ಅದಿರಲಿ. 16ಅದಕ್ಕೆ ಏಳು ವರ್ಷಕಾಲ, ಮನುಷ್ಯ ಹೃದಯ ಹೋಗಿ ಮೃಗದ ಹೃದಯ ಬರಲಿ. 17ಇದು ಕಾವಲುಗಾರ ದೂತನ ತೀರ್ಮಾನ; ಹಾಗೂ ದೇವರ ತೀರ್ಪು. ಪರಾತ್ಪರ ದೇವರಿಗೆ ನರಮಾನವರ ರಾಜ್ಯದ ಮೇಲೂ ಅಧಿಕಾರವಿದೆ. ಅದರ ಆಳ್ವಿಕೆಯನ್ನು ಅವರು ತಮಗೆ ಬೇಕಾದವರಿಗೆ ಒಪ್ಪಿಸುತ್ತಾರೆ. ಕನಿಷ್ಠರನ್ನೂ ಆ ಪದವಿಗೆ ನೇಮಿಸುತ್ತಾರೆ. ಇದು ಎಲ್ಲಾ ಜನರಿಗೆ ತಿಳಿದಿರಬೇಕೆಂಬುದೇ ಈ ತೀರ್ಮಾನ,' ಎಂದು ಸಾರಿದನು.

18 'ಇದೇ ನಾನು ಕಂಡ ಕನಸು. ಬೇಲ್ತೆಶಚ್ಚರನೇ, ನನ್ನ ರಾಜ್ಯದ ಸಕಲ ವಿದ್ವಾಂಸರಲ್ಲಿ ಯಾರಿಂದಲೂ ಇದರ ಅರ್ಥವನ್ನು ಹೇಳಲಾಗಲಿಲ್ಲ. ಅದನ್ನು ನೀನು ತಿಳಿಸು. ಪರಿಶುದ್ಧ ದೇವರ ಆತ್ಮ ನಿನ್ನಲ್ಲಿ ನೆಲೆಸಿರುವುದರಿಂದ ಇದು ನಿನ್ನಿಂದ ಸಾಧ್ಯ'," ಎಂದನು ರಾಜ ನೆಬೂಕದ್ನೆಚ್ಚರನು.

## ದಾನಿಯೇಲನು ಕೊಟ್ಟ ವಿವರ

19 ಇದನ್ನು ಕೇಳಿದ ಬೇಲ್ತೆಶಚ್ಚರನೆಂದು ಹೆಸರುಗೊಂಡಿದ್ದ ದಾನಿಯೇಲನು ತುಸು ಹೊತ್ತು ಸ್ತಬ್ಧನಾದ. ಅವನ ಬುದ್ಧಿಗೆ ಹೊಳೆದ ವಿಷಯ ಅವನಲ್ಲಿ ದಿಗಿಲನ್ನು ಉಂಟುಮಾಡಿತು. ರಾಜನು ಇದನ್ನು ಅರಿತು, "ಬೇಲ್ತೆಶಚ್ಚರನೇ, ನನ್ನ ಕನಸಾಗಲಿ, ಅದರ ಅರ್ಥವಾಗಲಿ ನಿನ್ನನ್ನು ಹೆದರಿಸದಿರಲಿ," ಎಂದು ಧೈರ್ಯ ಹೇಳಿದ. ಆಗ ಬೇಲ್ತೆಶಚ್ಚರನು:

"ನನ್ನೊಡೆಯಾ, ಈ ಕನಸು ನಿನ್ನ ವೈರಿಗಳಿಗೆ ಬರಲಿ! ಅದರ ಅರ್ಥ ನಿನ್ನ ವಿರೋಧಿಗಳಿಗೆ ತಗಲಲಿ! 20ನೀವು ಕಂಡ ಮರವು ಬೆಳೆದು, ಬಲಗೊಂಡು ಆಕಾಶದ ತುದಿಯನ್ನು ಮುಟ್ಟುತ್ತಿತ್ತು. 21ಲೋಕದ ಜನರೆಲ್ಲರಿಗೆ ಕಾಣಿಸುತ್ತಿತ್ತು. ಅಂದವಾದ ಎಲೆಗಳನ್ನೂ ಹುಲುಸಾದ ಹಣ್ಣುಗಳನ್ನೂ ಬಿಡುತ್ತಿತ್ತು. ಎಲ್ಲಕ್ಕೂ ಆಹಾರ ಒದಗಿಸುತ್ತಿತ್ತು. ತನ್ನ ನೆರಳನ್ನು ವನ್ಯಮೃಗಗಳಿಗೆ ಆಶ್ರಯವಾಗಿಯೂ ತನ್ನ ಕೊಂಬೆಗಳನ್ನು ಆಕಾಶ ಪಕ್ಷಿಗಳಿಗೆ ನೆಲೆಯಾಗಿಯೂ ಮಾಡಿತ್ತು. ಕನಸಿನಲ್ಲಿ ನಿಮಗೆ ತೋರಿದ ಆ ಮರವು ನೀವೇ.

22 "ರಾಜರೇ, ನೀವು ಬೆಳೆದು ಬಲಗೊಂಡಿದ್ದೀರಿ. ನಿಮ್ಮ ಕೀರ್ತಿ ವೃದ್ಧಿಯಾಗಿ ಗಗನಕ್ಕೇರಿದೆ. ನಿಮ್ಮ ಆಳ್ವಿಕೆ ಲೋಕದ ಕಟ್ಟಕಡೆಗೂ ವ್ಯಾಪಿಸಿದೆ. 23ಕಾವಲುಗಾರನಾದ ದೂತನು ಆಕಾಶದಿಂದ ಇಳಿದುಬಂದು: 'ಈ ಮರವನ್ನು ಕಡಿದು ಹಾಳುಮಾಡಿ. ಅದರ ಬುಡದ ಮೋಟನ್ನು ನೆಲದಲ್ಲಿ ಉಳಿಸಿ ಹಿತ್ತಾಳೆ ಕಬ್ಬಿಣಗಳ ಪಟ್ಟಿಯನ್ನು ಅದಕ್ಕೆ ಬಿಗಿಯಿರಿ. ಅಡವಿಯ ಹುಲ್ಲು ಅದರ ಸುತ್ತಲು ಬೆಳೆದಿರಲಿ, ಆಕಾಶದ ಇಬ್ಬನಿ ಅದನ್ನು ತೋಯಿಸಲಿ. ಏಳು ವರ್ಷಕಾಲ ಕಳೆಯುವ ತನಕ ಕಾಡುಮೃಗಗಳ ಸಹವಾಸದ ಗತಿ ಬರಲಿ' ಎಂದು ಸಾರುವುದನ್ನು ರಾಜರಾದ ನೀವೇ ನೋಡಿದ್ದೀರಿ."

24 "ರಾಜರೇ, ಕನಸಿನ ತಾತ್ಪರ್ಯ ಇದು: ನನ್ನೊಡೆಯರಾದ ಅರಸರಿಗೆ ಉಂಟಾಗಲಿರುವ ಪರಾತ್ಪರ ದೇವರ ತೀರ್ಪು ಹೀಗಿದೆ – 25ತಾವು ಮಾನವ ಸಮಾಜದಿಂದ ಬಹಿಷ್ಕೃತರಾಗುವಿರಿ. ಕಾಡುಮೃಗಗಳ ನಡುವೆ ವಾಸಮಾಡುವಿರಿ. ದನಕರುಗಳಂತೆ ಹುಲ್ಲು ಮೇಯುವ ಗತಿ ನಿಮ್ಮದಾಗುವುದು. ಆಕಾಶದ ಇಬ್ಬನಿ ನಿಮ್ಮನ್ನು ತೋಯಿಸುವುದು. ಪರಾತ್ಪರ ದೇವರಿಗೆ ಮಾನವರ ರಾಜ್ಯದ ಮೇಲೂ ಅಧಿಕಾರವಿದೆ. ಅದನ್ನು ತಮಗೆ ಬೇಕಾದವರಿಗೆ ಒಪ್ಪಿಸುತ್ತಾರೆ. ಇದು ತಮಗೆ ತಿಳಿದುಬರುವುದರೊಳಗೆ ಏಳು ವರ್ಷ ಕಳೆದಿರುತ್ತದೆ. 26ಆ ಮರದ ಬುಡದ ಮೋಟನ್ನು ಉಳಿಸಿರೆಂದು ಅಪ್ಪಣೆಯಾಗಿದೆ. ಇದರ ತಾತ್ಪರ್ಯವೇನೆಂದರೆ: ಪರಲೋಕದ ದೇವರಿಗೆ ಸರ್ವಾಧಿಕಾರ ಉಂಟೆಂಬುದನ್ನು ತಾವು ಅರಿತುಕೊಂಡ ನಂತರ ನಿಮ್ಮ ರಾಜ್ಯ ನಿಮಗೆ ಸ್ಥಿರವಾಗಿ ದೊರಕುವುದು. 27ಆದಕಾರಣ ಅರಸರೇ, ಈ ನನ್ನ ಬುದ್ಧಿಮಾತು

ತಮಗೆ ಒಪ್ಪಿಗೆಯಾಗಲಿ: ಸದಾಚಾರದ ಮೂಲಕ ನಿಮ್ಮ ಪಾಪಗಳನ್ನು ಅಳಿಸಿಬಿಡಿ. ದೀನದಲಿತರಿಗೆ ದಯೆತೋರಿ. ನಿಮ್ಮ ಅಪರಾಧಗಳನ್ನು ನೀಗಿಸಕೊಳ್ಳಿ. ಇದರಿಂದ ಬಹುಶಃ ನಿಮ್ಮ ನೆಮ್ಮದಿಕಾಲ ಹೆಚ್ಚಾದೀತು," ಎಂದು ಅರಿಕೆ ಮಾಡಿದನು.

28 ಇದೆಲ್ಲವು ನೆಬೂಕದ್ನೆಚ್ಚರನೆಂಬ ರಾಜನಿಗೆ ಸಂಭವಿಸಿದವು. 29ಹನ್ನೆರಡು ತಿಂಗಳು ಕಳೆದ ನಂತರ ಅವನು ಒಂದು ದಿನ ಬಾಬಿಲೋನಿನ ಅರಮನೆಯ ಮೇಲ್ಗಡೆ ತಿರುಗಾಡುತ್ತಿದ್ದನು. 30ಆಗ ಅವನು "ಹಾ, ಬಾಬಿಲೋನ್ ಎಂಥಾ ಮಹಾನಗರ! ಇಗೋ, ನನ್ನ ಶಕ್ತಿ ಸಾಮರ್ಥ್ಯದಿಂದ ನಾನು ಕಟ್ಟಿಸಿರುವ ರಾಜಭವನ! ನನ್ನ ಕೀರ್ತಿ ಪರಾಕ್ರಮವನ್ನು ಇದು ಪ್ರಕಟಿಸುತ್ತಿದೆ!" ಎಂದು ಕೊಚ್ಚಿಕೊಂಡನು.

31 ಈ ಮಾತು ಅವನ ಬಾಯಿಂದ ಹೊರಡುತ್ತಿರುವಾಗಲೆ, "ಎಲೈ ರಾಜ ನೆಬೂಕದ್ನೆಚ್ಚರನೇ, ನಿನ್ನ ವಿಷಯವಾದ ಈ ದೈವೋಕ್ತಿಯನ್ನು ಕೇಳು – 32'ಈ ರಾಜ್ಯ ನಿನ್ನನ್ನು ಬಿಟ್ಟು ತೊಲಗಿದೆ. ನೀನು ಮಾನವ ಸಮಾಜದಿಂದ ಬಹಿಷ್ಕೃತನಾಗುವೆ. ಕಾಡುಮೃಗಗಳ ನಡುವೆ ವಾಸಿಸುವೆ. ದನಗಳಂತೆ ಹುಲ್ಲು ಮೇಯುವ ಗತಿ ನಿನ್ನದಾಗುವುದು. ಪರಾತ್ಪರ ದೇವರಿಗೆ ನರಮಾನವರ ರಾಜ್ಯದ ಮೇಲೆ ಅಧಿಕಾರವಿದೆ. ಆ ರಾಜ್ಯವನ್ನು ತಮಗೆ ಬೇಕಾದವರಿಗೆ ಒಪ್ಪಿಸುತ್ತಾರೆ. ಇದನ್ನು ನೀನು ಗ್ರಹಿಸುವುದರೊಳಗೆ ಏಳು ವರ್ಷ ಕಳೆಯುವುದು,' ಎಂದು ದೈವವಾಣಿಯಾಯಿತು."

33 ಆ ನುಡಿ ಕೂಡಲೆ ನೆರವೇರಿತು. ನೆಬೂಕದ್ನೆಚ್ಚರನು ಸಮಾಜದಿಂದ ಬಹಿಷ್ಕೃತನಾದ. ದನಗಳಂತೆ ಹುಲ್ಲು ಮೇಯುತ್ತಾ ಆಕಾಶದ ಇಬ್ಬನಿಯಿಂದ ನೆನೆಯುತ್ತಾ ಇದ್ದ. ಅವನ ಕೂದಲು ಹದ್ದುಗಳ ರೆಕ್ಕೆಗಳಂತೆಯೂ, ಅವನ ಉಗುರು ಹಕ್ಕಿಗಳ ಉಗುರಿನಂತೆಯೂ ಬೆಳೆದವು.

ನೆಬೂಕದ್ನೆಚ್ಚರನು ದೇವರಿಗೆ ಮಾಡಿದ ಸ್ತುತಿಸ್ತೋತ್ರ

34 ಗುರುತಿಸಲಾಗಿದ್ದ ಕಾಲವು ಕಳೆಯಿತು. ನೆಬೂಕದ್ನೆಚ್ಚರನು, "ನಾನು ಪರಲೋಕದ ಕಡೆಗೆ ಕಣ್ಣೆತ್ತಿ ನೋಡಿದೆ. ನನ್ನ ಬುದ್ಧಿ ಮತ್ತೆ ನನಗೆ ಸ್ವಾಧೀನವಾಯಿತು. ನನ್ನ ಬುದ್ಧಿ ಮತ್ತೆ ನನಗೆ ಸ್ವಾಧೀನವಾಯಿತು. ಆಗ ನಾನು ಪರಾತ್ಪರ ದೇವರನ್ನು ಕೊಂಡಾಡಿದೆ. ಜೀವಸ್ವರೂಪರಾದ ಅವರಿಗೆ ಸ್ತುತಿಸ್ತೋತ್ರಗಳನ್ನು ಸಲ್ಲಿಸಿದೆ:

ಆತನ ಆಳ್ವಿಕೆ ಶಾಶ್ವತ
ಆತನ ರಾಜ್ಯ ತಲತಲಾಂತರಕ್ಕೂ ಸ್ಥಿರ.
35 ಆತನ ದೃಷ್ಟಿಯಲ್ಲಿ ಭೂನಿವಾಸಿಗಳೆಲ್ಲರು ಶೂನ್ಯರು
ಇಹದ ಜನರೂ ಪರದ ದೂತರೂ ಆತನಿಗೆ
ಅಧೀನರು.
ಆತನ ಶಕ್ತಿಯುತ ಹಸ್ತವನ್ನು ಯಾರಿಂದಲೂ
ತಡೆಯಲಾಗದು.
'ನೀನು ಮಾಡುತ್ತಿರುವುದೇನು?'
ಎಂದು ಯಾರೂ ಆತನನ್ನು
ಪ್ರಶ್ನಿಸಲಾರರು.

36 ಅದೇ ಸಮಯದಲ್ಲಿ ನನ್ನ ಬುದ್ಧಿ ನನಗೆ ಮತ್ತೆ ಸ್ವಾಧೀನವಾಯಿತು. ಘನತೆ ಗೌರವಗಳು ನನಗೆ ಮತ್ತೆ ಲಭಿಸಿದವು. ನನ್ನ ರಾಜ್ಯದ ಕೀರ್ತಿ ಬೆಳಗತೊಡಗಿತು. ನನ್ನ ಮಂತ್ರಿಗಳೂ ಪದಾಧಿಕಾರಿಗಳೂ ನನ್ನನ್ನು ಸ್ವಾಗತಿಸಲು ಬಂದರು. ರಾಜ್ಯದಲ್ಲಿ ನಾನು ನೆಲೆಗೊಂಡೆ. ಹಿಂದೆ ಇದ್ದುದಕ್ಕಿಂತಲೂ ಹೆಚ್ಚಿನ ಪ್ರತಿಭೆ ನನ್ನದಾಯಿತು.

37 ನೆಬೂಕದ್ನೆಚ್ಚರನಾದ ನಾನು ಪರಲೋಕ ರಾಜನನ್ನು ಹೊಗಳಿ, ಕೊಂಡಾಡಿ, ಕೀರ್ತಿಸುತ್ತೇನೆ: ಆತನ ಕಾರ್ಯಗಳೆಲ್ಲವು ಸತ್ಯ, ಆತನ ಮಾರ್ಗಗಳೆಲ್ಲವು ನ್ಯಾಯ, ಗರ್ವಿಷ್ಠರನ್ನು ಆತ ತಗ್ಗಿಸಬಲ್ಲ.

## ಗೋಡೆಯ ಮೇಲೆ ಒಗಟಿನ ಬರಹ

**5** ಬೇಲ್ಶಚ್ಚರ ಎಂಬ ಅರಸನು ತನ್ನ ರಾಜ್ಯದ ಪ್ರಮುಖರಲ್ಲಿ ಸಾವಿರ ಮಂದಿಯನ್ನು ಸೇರಿಸಿ ಒಂದು ಔತಣವನ್ನು ಏರ್ಪಡಿಸಿದ. ಆ ಸಾವಿರ ಜನರ ಮುಂದೆ ಅವನೂ ದ್ರಾಕ್ಷಾರಸವನ್ನು ಕುಡಿದ. 2ಹಾಗೆ ಕುಡಿದು ಕೊಂಡಿರುವಾಗ ತಾನೂ ತನ್ನ ಪ್ರಮುಖರೂ ಪತ್ನಿಯರೂ ಉಪಪತ್ನಿಯರೂ ಕುಡಿಯುವುದಕ್ಕಾಗಿ ತನ್ನ ತಂದೆ ನೆಬೂಕದ್ನೆಚ್ಚರನು ಜೆರುಸಲೇಮಿನ ದೇವಾಲಯದ ಗರ್ಭಗುಡಿಯಿಂದ ಸೂರೆಯಾಗಿ ತಂದ 3ಬಂಗಾರದ ಪೂಜಾ ಪಾತ್ರೆಗಳನ್ನು ತರಿಸಿದ. ರಾಜನೂ ಅವನ ಪ್ರಮುಖರೂ ಪತ್ನಿ – ಉಪಪತ್ನಿಯರೂ ಅವುಗಳಲ್ಲಿ ಕುಡಿದರು. 4ಕುಡಿದುಕೊಂಡೇ ಬಂಗಾರ, ಬೆಳ್ಳಿ, ಕಂಚು, ಕಬ್ಬಿಣ, ಮರ ಮತ್ತು ಕಲ್ಲಿನ ತಮ್ಮ ದೇವರುಗಳನ್ನು ಆರಾಧಿಸಿದರು.

5 ಅದೇ ಸಮಯದಲ್ಲಿ ಒಬ್ಬ ಮನುಷ್ಯನ ಕೈಬೆರಳುಗಳು ಕಾಣಿಸಿಕೊಂಡು ದೀಪಸ್ತಂಭದ ಎದುರಿಗೆ ಅರಮನೆಯ ಸುಣ್ಣದ ಗೋಡೆಯ ಮೇಲೆ ಬರೆಯಲು ತೊಡಗಿದವು. ಬರೆಯುತ್ತಿದ್ದ ಆ ಕೈಯನ್ನು ರಾಜನು ನೋಡಿದನು. 6ಅದನ್ನು ಕಂಡದ್ದೆ ಅವನ ಮುಖ ಕಳೆಗುಂದಿತು, ಮನಸ್ಸು ಕಳವಳಗೊಂಡಿತು, ಸೊಂಟದ ಕೀಲು ಸಡಿಲಗೊಂಡಿತು, ಮೊಣಕಾಲುಗಳು ಒಂದಕ್ಕೊಂದು ಬಡಿದುಕೊಂಡವು. 7ಕೂಡಲೆ ರಾಜನು ಗಟ್ಟಿಯಾಗಿ ಕೂಗಿ ಮಂತ್ರವಾದಿ, ಪಂಡಿತ ಹಾಗು ಶಾಕುನಿಕರನ್ನು ಕರೆಯಿಸಿದನು. ಬಾಬಿಲೋನಿನ ಆ ವಿದ್ವಾಂಸರಿಗೆ, "ಯಾವನು ಈ ಬರಹವನ್ನು ಓದಿ ಇದರ ಅರ್ಥವನ್ನು ನನಗೆ ತಿಳಿಸುತ್ತಾನೋ ಅವನಿಗೆ ಕೆನ್ನೀಲಿ ರಾಜವಸ್ತ್ರವನ್ನು ತೊಡಿಸಿ, ಕೊರಳಿಗೆ ಚಿನ್ನದ ಹಾರವನ್ನು ಹಾಕಿಸಿ, ಅವನನ್ನು ರಾಜ್ಯದ ಮೂವರು ಮುಖ್ಯಾಧಿಕಾರಿಗಳಲ್ಲಿ ಒಬ್ಬನನ್ನಾಗಿ ನೇಮಿಸುವೆನು," ಎಂದು ಹೇಳಿದನು.

8 ಆಸ್ಥಾನದ ವಿದ್ವಾಂಸರೆಲ್ಲರು ಬಂದು ಸೇರಿದರು. ಆದರೆ ಆ ಬರಹವನ್ನು ಓದುವುದಕ್ಕಾಗಲಿ, ಅದರ ಅರ್ಥವನ್ನು ರಾಜನಿಗೆ ತಿಳಿಸುವುದಕ್ಕಾಗಲಿ ಅವರಿಂದ ಆಗಲಿಲ್ಲ. 9ಆಗ ರಾಜ ಬೇಲ್ಶಚ್ಚರನು ಬಹಳ ಕಳವಳಗೊಂಡನು. ಅವನ ಮುಖ ಕಳೆಗುಂದಿತು. ಅವನ ಸಾಮಂತರು ದಿಕ್ಕು ತೋಚದವರಾದರು.

10 ರಾಜನೂ ಅವನ ಸಾಮಂತರೂ ಆಡಿದ ಮಾತು ರಾಣಿಗೆ ಮುಟ್ಟಿತು. ಆಕೆ ಔತಣ ಶಾಲೆಗೆ ಬಂದು, "ರಾಜರೇ, ಚಿರಂಜೀವಿಯಾಗಿರಿ! ನಿಮ್ಮ ಮನಸ್ಸು ಕಳವಳಗೊಳ್ಳದಿರಲಿ, ನಿಮ್ಮ ಮುಖ ಕಳೆಗುಂದದಿರಲಿ! ಪರಿಶುದ್ಧ ದೇವರ ಆತ್ಮ ನೆಲೆಸಿರುವ ಒಬ್ಬ ವ್ಯಕ್ತಿ ನಿಮ್ಮ ರಾಜ್ಯದಲ್ಲಿದ್ದಾನೆ. 11ನಿಮ್ಮ ತಂದೆಯ ಕಾಲದಲ್ಲಿ ಬುದ್ಧಿವಂತಿಕೆ, ತಿಳುವಳಿಕೆ, ದೇವರುಗಳಿಗೆ ಸಮಾನವಾದ ಜ್ಞಾನ ಅವನಲ್ಲಿ ಕಂಡುಬಂದುವು. ನಿಮ್ಮ ತಂದೆ ರಾಜ ನೆಬೂಕದ್ನೆಚ್ಚರನು, ಅವನನ್ನು ಜೋಯಿಸರಿಗೂ ಮಂತ್ರವಾದಿಗಳಿಗೂ ಪಂಡಿತರಿಗೂ ಶಾಕುನಿಕರಿಗೂ ಅಧ್ಯಕ್ಷನನ್ನಾಗಿ ನೇಮಿಸಿದ್ದರು. 12ಹೌದು, 'ಬೇಲ್ತೆಶಚ್ಚರ'ನೆಂಬ ಹೆಸರನ್ನು ರಾಜನಿಂದ ಹೊಂದಿದ ಆ ದಾನಿಯೇಲನು ಪರಮ ಬುದ್ಧಿವಂತ, ಜ್ಞಾನಿ, ವಿವೇಕಿ, ಕನಸುಗಳ ಅರ್ಥವನ್ನು ತಿಳಿಸುವ ಜಾಣತನ, ಒಗಟು ಬಿಡಿಸುವ ಚಮತ್ಕಾರ, ಗುಂಜುಗಂಟು ಬಿಚ್ಚುವ ಚಾತುರ್ಯ ಅವನಲ್ಲಿ ತೋರಿಬಂದವು. ಆದ್ದರಿಂದಲೇ ಅವನನ್ನು ಅಧ್ಯಕ್ಷನನ್ನಾಗಿ ನೇಮಿಸಲಾಯಿತು. ದಾನಿಯೇಲನನ್ನು ಈಗಲೇ ಕರೆಯಿಸಿರಿ. ಆತ ಬರಹದ ಅರ್ಥವನ್ನು ವಿವರಿಸುವನು," ಎಂದಳು.

## ದಾನಿಯೇಲನು ಕೊಟ್ಟ ವಿವರ

13 ಅಂತೆಯೇ, ದಾನಿಯೇಲನನ್ನು ರಾಜ ಸನ್ನಿಧಿಗೆ ಬರಮಾಡಲಾಯಿತು. ರಾಜನು ಅವನಿಗೆ: "ರಾಜನಾದ ನನ್ನ ತಂದೆ ಜುದೇಯದಿಂದ ಖೈದಿಯಾಗಿ ತಂದು ಸೆರೆಮಾಡಿದ ಯೆಹೂದ್ಯರಲ್ಲಿ ದಾನಿಯೇಲ್ ಎಂಬುವನು ನೀನೋ? 14ದೇವರ ಆತ್ಮ ನಿನ್ನಲ್ಲಿ ನೆಲೆಸಿದೆಯೆಂದು ನಾನು ಕೇಳಿದ್ದೇನೆ. ನಿನಗೆ ಪರಮಜ್ಞಾನ, ವಿವೇಕ, ಬುದ್ಧಿ, ತೇಜಸ್ಸು ಇದೆಯೆಂದು ನನಗೆ ತಿಳಿದುಬಂದಿದೆ. 15ಈಗ ಈ ಬರಹವನ್ನು ಓದಿ ಇದರ ಅರ್ಥವನ್ನು ನನಗೆ ತಿಳಿಸುವುದಕ್ಕಾಗಿ ವಿದ್ವಾಂಸರನ್ನೂ ಮಂತ್ರವಾದಿಗಳನ್ನೂ ಸಮ್ಮುಖಕ್ಕೆ ಬರಮಾಡಿದೆ. ಅವರು ಇದರ ಅರ್ಥವನ್ನು ವಿವರಿಸಲಾರದೆ ಹೋದರು. 16ನೀನು ಗೂಡಾರ್ಥಗಳನ್ನು ವಿವರಿಸಬಲ್ಲವನೂ ಗುಂಜುಗಂಟುಗಳನ್ನು ಬಿಚ್ಚಬಲ್ಲವನೂ ಎಂಬ ಸಮಾಚಾರ ನನಗೆ ಮುಟ್ಟಿದೆ. ಈ ಬರಹವನ್ನು ಓದಿ, ಇದರ ಅಭಿಪ್ರಾಯವನ್ನು ನನಗೆ ತಿಳಿಸಿದೆಯಾದರೆ ನಿನಗೆ ಕೆನ್ನೀಲಿ ರಾಜವಸ್ತ್ರವನ್ನು ಹೊದಿಸಿ, ಕೊರಳಿಗೆ ಚಿನ್ನದ

ಹಾರವನ್ನು ಹಾಕಿಸಿ, ನಿನ್ನನ್ನು ರಾಜ್ಯದ ಮೂವರು ಮುಖ್ಯಾಧಿಕಾರಿಗಳಲ್ಲಿ ಒಬ್ಬನನ್ನಾಗಿ ನೇಮಿಸುವೆನು," ಎಂದು ಹೇಳಿದನು.

17 ಆಗ ದಾನಿಯೇಲನು ರಾಜನಿಗೆ, "ಅರಸರೇ, ನಿಮ್ಮ ದಾನಗಳು ನಿಮಗೇ ಇರಲಿ. ನಿಮ್ಮ ಬಹುಮಾನಗಳು ಮತ್ತೊಬ್ಬನಿಗೆ ದೊರಕಲಿ. ಆದರೆ ನಾನು ಈ ಬರಹವನ್ನು ಓದಿ ಅದರ ಅರ್ಥವನ್ನು ತಮಗೆ ತಿಳಿಸುವೆನು. 18ಪರಾತ್ಪರ ದೇವರು ನಿಮ್ಮ ತಂದೆಯಾದ ನೆಬೂಕದ್ನೆಚ್ಚರ್ ಅವರಿಗೆ ರಾಜ್ಯ ಮಹತ್ವವನ್ನು ಹಾಗೂ ಮಾನ ಸನ್ಮಾನಗಳನ್ನು ದಯಪಾಲಿಸಿದ್ದರು. 19ಇಂಥ ಮಹತ್ವ ವರದ ನಿಮಿತ್ತ ಸಕಲ ದೇಶ–ಕುಲ–ಭಾಷೆಗಳವರು ಅವರ ಮುಂದೆ ಭಯದಿಂದ ನಡುಗುತ್ತಿದ್ದರು. ತಮಗೆ ಇಷ್ಟಬಂದ ಹಾಗೆ ಒಬ್ಬನನ್ನು ಬದುಕಿಸಿದರು, ಇನ್ನೊಬ್ಬನನ್ನು ಕೊಲ್ಲಿಸಿದರು. ಮನಸ್ಸಿಗೆ ಬಂದ ಹಾಗೆ ಒಬ್ಬನನ್ನು ಮೇಲೇರಿಸಿದರು, ಇನ್ನೊಬ್ಬನನ್ನು ಕೆಳಕ್ಕಿಳಿಸಿದರು, 20ಹಾಗೆ ಅವರ ಎದೆ ಗರ್ವದಿಂದ ಉಬ್ಬಿಹೋಯಿತು. ಮನಸ್ಸಿಗೆ ಸೊಕ್ಕೇರಿ ಹೋಯಿತು. ಅವರನ್ನೂ ರಾಜಾಸ್ಥಾನದಿಂದ ತಳ್ಳಲಾಯಿತು. ಮಾನ ಕಳೆದುಹೋಯಿತು. 21ಸಮಾಜದಿಂದ ಬಹಿಷ್ಕೃತರಾಗಿ, ಮೃಗಬುದ್ಧಿಯುಳ್ಳವರಾಗಿ, ಕಾಡುಕತ್ತೆಗಳ ನಡುವೆ ವಾಸಮಾಡಬೇಕಾಯಿತು. ಪರಾತ್ಪರ ದೇವರಿಗೆ ನರಮಾನವರ ರಾಜ್ಯದ ಮೇಲೆ ಅಧಿಕಾರವಿದೆ. ಅದನ್ನು ತಮಗೆ ಇಷ್ಟಬಂದವರಿಗೆ ಒಪ್ಪಿಸುತ್ತಾರೆ ಎಂಬುದನ್ನು ಅವರು ಗ್ರಹಿಸುವ ತನಕ ದನಗಳಂತೆ ಹುಲ್ಲುಮೇಯುವ ಗತಿ ಅವರದಾಯಿತು. ಆಕಾಶದ ಇಬ್ಬನಿ ಅವನ ಮೈಯನ್ನು ತೋಯಿಸುತ್ತಿತ್ತು."

22 "ಬೇಲ್ಶಚ್ಚರರೇ, ಅವರ ಕುಮಾರರಾದ ತಾವು ಇದನ್ನೆಲ್ಲ ತಿಳಿದುಕೊಂಡಿದ್ದರೂ ದೀನ ಮನಸ್ಕರಾಗದೆ ಇದ್ದೀರಿ. 23ಪರಲೋಕದ ಒಡೆಯನಿಗೆ ವಿರುದ್ಧವಾಗಿ ನಿಮ್ಮನ್ನೆ ಹೆಚ್ಚಿಸಿಕೊಂಡಿದ್ದೀರಿ. ದೇವಾಲಯದಿಂದ ಪವಿತ್ರ ಪೂಜಾಪಾತ್ರೆಗಳನ್ನು ಇಲ್ಲಿಗೆ ತಂದಿದ್ದೀರಿ. ನೀವೂ ನಿಮ್ಮ ರಾಜ್ಯದ ಪ್ರಮುಖರೂ ಪತ್ನಿ–ಉಪಪತ್ನಿಯರೂ ಅವುಗಳಲ್ಲಿ ದ್ರಾಕ್ಷಾರಸವನ್ನೂ ಕುಡಿದಿದ್ದೀರಿ. ಬುದ್ಧಿ, ಕಣ್ಣು, ಕಿವಿ ಇಲ್ಲದೆ ಬೆಳ್ಳಿಬಂಗಾರಗಳ, ಕಂಚು ಕಬ್ಬಿಣಗಳ, ಮರ ಕಲ್ಲುಗಳ ದೇವರುಗಳನ್ನೂ ಆರಾಧಿಸಿದ್ದೀರಿ. ನಿಮ್ಮ ಪ್ರಾಣ ಯಾರ ಕೈಯಲ್ಲಿದೆಯೋ ನಿಮ್ಮ ಸ್ಥಿತಿಗತಿಗಳು ಯಾರ ಅಧೀನದಲ್ಲಿದೆಯೋ ಆ ದೇವರನ್ನು ಮಾತ್ರ ಗೌರವಿಸದೆ ಇದ್ದೀರಿ. 24ಹೀಗಿರಲು, ಆ ಕೈಬೆರಳು ದೇವರ ಸನ್ನಿಧಿಯಿಂದ ಬಂದು ಬರೆದಿದೆ."

25 "ಬರೆದಿರುವ ಮಾತುಗಳು ಇವು:
"ಮೆನೇ, ಮೆನೇ, ತೆಕೇಲ್, ಉಫರ್ಸಿನ್." 26ಇದರ ಅರ್ಥ ಹೀಗಿದೆ: "ಮೆನೇ" ಎಂದರೆ, ದೇವರು ನಿನ್ನ ಆಳ್ವಿಕೆಯ ಕಾಲಾವಧಿಯನ್ನು ಲೆಕ್ಕಿಸಿ ಕೊನೆಗಾಣಿಸಿದ್ದಾರೆ. 27'ತೆಕೇಲ್' ಎಂದರೆ ನಿನ್ನನ್ನು ತಕ್ಕಡಿಯಲ್ಲಿ ಹಾಕಿ ನೋಡಲು ನಿನ್ನ ತೂಕ ಕಡಿಮೆಯಾಗಿ ಕಂಡುಬಂದಿದೆ. 28'ಫರ್ಸಿನ್' ಎಂದರೆ ನಿನ್ನ ರಾಜ್ಯವನ್ನು ವಿಭಾಗಮಾಡಿ ಮೇದ್ಯರಿಗೂ ಪರ್ಷಿಯದವರಿಗೂ ಕೊಡಲಾಗಿದೆ," ಎಂದು ಅರಿಕೆಮಾಡಿದನು.

29 ತಕ್ಷಣವೇ ಬೇಲ್ಶಚ್ಚರನ ಆಜ್ಞೆಯ ಮೇರೆಗೆ ದಾನಿಯೇಲನಿಗೆ ಕೆನ್ನೀಲಿ ರಾಜವಸ್ತ್ರವನ್ನು ಹೊದಿಸಿದರು. ಅವನ ಕೊರಳಿಗೆ ಚಿನ್ನದ ಹಾರವನ್ನು ಹಾಕಿದರು. ರಾಜ್ಯದ ಮೂವರು ಮುಖ್ಯಾಧಿಕಾರಿಗಳಲ್ಲಿ ದಾನಿಯೇಲನು ಒಬ್ಬನಾದನು ಎಂದು ಪ್ರಕಟಿಸಿದರು. 30ಅದೇ ರಾತ್ರಿ ಬಾಬಿಲೋನಿನ ರಾಜ ಬೇಲ್ಶಚ್ಚರನು ಕೊಲ್ಲಲ್ಪಟ್ಟನು. 31ಸುಮಾರು 62 ವಯಸ್ಸಿನ ಮೇದ್ಯನಾದ ದಾರ್ಯವೆಷನು ರಾಜ್ಯವನ್ನು ವಹಿಸಿಕೊಂಡನು.

## ಸಿಂಹಗಳ ಗವಿಯಲ್ಲೂ ಸಂರಕ್ಷಿತ

**6** ರಾಜ್ಯಾಡಳಿತ ನಿರ್ವಹಣೆಗಾಗಿ ದಾರ್ಯಾವೆಷನು ನೂರಿಪ್ಪತ್ತು ಮಂದಿ ಪ್ರಾಂತ್ಯಾಧಿಪತಿಗಳನ್ನು ಆಯಾಯ ಪ್ರಾಂತ್ಯಗಳ ಮೇಲೆ ನೇಮಿಸಲು ತೀರ್ಮಾನಿಸಿದನು. 2ಇವರ ಮೇಲ್ವಿಚಾರಣೆಗಾಗಿಯೂ ತನ್ನ ಹಿತಾಸಕ್ತಿಯ ದೃಷ್ಟಿಯಿಂದಲೂ ಮೂವರು ಮುಖ್ಯಾಧಿಕಾರಿಗಳನ್ನು ನೇಮಿಸಲು ನಿಶ್ಚಯಿಸಿದನು. ಈ ಮೂವರು ಮುಖ್ಯಸ್ಥರಲ್ಲಿ ದಾನಿಯೇಲನು ಒಬ್ಬನು. 3ಈತ ಪರಮಜ್ಞಾನಿ. ಮಿಕ್ಕ ಮುಖ್ಯಾಧಿಕಾರಿಗಳಿಗಿಂತಲೂ ಅಧಿಪತಿ ಗಳಿಗಿಂತಲೂ ಹೆಚ್ಚು ಸಮರ್ಥನು. ಇವನನ್ನು ರಾಜನು ಸಮಸ್ತ ರಾಜ್ಯದ ಮೇಲ್ವಿಚಾರಕನನ್ನಾಗಿ ನೇಮಿಸಲು ಉದ್ದೇಶಿಸಿದ್ದನು. 4ಹೀಗಿರಲು ಮುಖ್ಯಾಧಿಕಾರಿಗಳು ಮತ್ತು ಪ್ರಾಂತ್ಯಾಧಿಪತಿಗಳು ರಾಜ್ಯಾಡಳಿತದ ವಿಷಯವಾಗಿ ದಾನಿಯೇಲನ ಮೇಲೆ ತಪ್ಪು ಹೊರಿಸುವುದಕ್ಕೆ ಸಂದರ್ಭ ಹುಡುಕುತ್ತಿದ್ದರು. ಆದರೆ ತಪ್ಪು

ಹೊರಿಸುವ ಯಾವ ಸಂದರ್ಭವೂ ದೊರಕಲಿಲ್ಲ. ಅವನಲ್ಲಿ ಯಾವ ತಪ್ಪನ್ನೂ ಕಾಣಲಾರದೆ ಹೋದರು. ಅವನು ಅಷ್ಟು ನಂಬಿಕಸ್ತನಾಗಿದ್ದನು! ಅವನಲ್ಲಿ ಯಾವ ಅಕ್ರಮವಾಗಲಿ, ಆಲಸ್ಯವಾಗಲಿ ಕಾಣಸಿಗಲಿಲ್ಲ. 5ಆಗ ಆ ಅಧಿಕಾರಿಗಳು, "ಈ ದಾನಿಯೇಲನ ಮೇಲೆ ತಪ್ಪು ಹೊರಿಸಬೇಕಾದರೆ ಇವನ ದೇವರ ಹಾಗೂ ಧರ್ಮದ ಮೂಲಕವೇ ಹೊರತು ಇನ್ನಾವುದರಲ್ಲೂ ನಮಗೆ ಅವಕಾಶ ದೊರಕದು," ಎಂದುಕೊಂಡರು.

6 ಬಳಿಕ ಆ ಮುಖ್ಯಾಧಿಕಾರಿಗಳೂ ಪ್ರಾಂತ್ಯಾಧಿಪತಿಗಳೂ ರಾಜನ ಸಮ್ಮುಖದಲ್ಲಿ ಕೂಡಿಬಂದು ಅವನಿಗೆ, "ದಾರ್ಯಾವೆಷ ರಾಜರೇ, ಚಿರಂಜೀವಿಯಾಗಿರಿ! 7ರಾಜ್ಯದ ಸಕಲ ಮುಖ್ಯಾಧಿಕಾರಿ, ನಾಯಕ, ಪ್ರಾಂತ್ಯಾಧಿಪತಿ, ಮಂತ್ರಿ, ಸಂಸ್ಥಾನಾಧ್ಯಕ್ಷರು ಇವರೆಲ್ಲರ ಅಭಿಪ್ರಾಯದ ಪ್ರಕಾರ ತಾವು ಒಂದು ಶಾಸನವನ್ನು ಹೊರಡಿಸಬೇಕು. ಯಾವನೂ ಮೂವತ್ತು ದಿನಗಳ ತನಕ ರಾಜರಾದ ತಮಗೆ ಹೊರತು ಬೇರೆ ಯಾವ ದೇವರಿಗಾಗಲಿ, ಮನುಷ್ಯನಿಗಾಗಲಿ ಪ್ರಾರ್ಥನೆ ಮಾಡಬಾರದು; ಮಾಡಿದರೆ ಸಿಂಹಗಳ ಗವಿಗೆ ಹಾಕಲಾಗುವುದು ಎಂದು ರಾಜಾಜ್ಞಾರೂಪವಾಗಿ ನಿಷೇಧಿಸುವುದು ಒಳ್ಳೆಯದು. 8ರಾಜರೇ, ಈ ಶಾಸನಕ್ಕೆ ನೀವು ಇದೀಗಲೇ ಹಸ್ತಾಕ್ಷರಗಳಿಂದ ರುಜುಹಾಕಬೇಕು. ಆಗ ಅದು ಮೇದ್ಯದ ಮತ್ತು ಪರ್ಷಿಯದ ಧರ್ಮ ವಿಧಿಗಳಂತೆ ಎಂದಿಗೂ ರದ್ದಾಗದೆ ಊರ್ಜಿತವಾಗುವುದು," ಎಂದು ವಿನಂತಿಸಿದರು. 9ಅಂತೆಯೇ ರಾಜನಾದ ದಾರ್ಯಾವೆಷನು ರುಜುಹಾಕಿದನು. 10ಶಾಸನಕ್ಕೆ ರುಜುವಾದ ವಿಷಯ ದಾನಿಯೇಲನಿಗೆ ತಿಳಿಯಿತು. ಆತ ತನ್ನ ಮನೆಗೆ ಹೊರಟು ಹೋದನು. ಅಲ್ಲಿ ತನ್ನ ಮಹಡಿಯ ಕೊಠಡಿಯಲ್ಲಿನ ಕಿಟಕಿಗಳು ಜೆರುಸಲೇಮಿನ ಕಡೆಗೆ ತೆರೆದಿದ್ದವು. ವಾಡಿಕೆಯ ಪ್ರಕಾರ ದಿನಕ್ಕೆ ಮೂರಾವರ್ತಿ ಅಲ್ಲಿ ತನ್ನ ದೇವರಿಗೆ ಮೊಣಕಾಲೂರಿ ಪ್ರಾರ್ಥಿಸಿ ಸ್ತೋತ್ರ ಸಲ್ಲಿಸುತ್ತಿದ್ದನು.

11 ದಾನಿಯೇಲನ ಆ ವಿರೋಧಿಗಳು ಗುಂಪಾಗಿ ಕೂಡಿಬಂದರು. ಆತ ತನ್ನ ದೇವರಿಗೆ ಅಭಿಮುಖವಾಗಿ ಪ್ರಾರ್ಥಿಸಿ ವಿಜ್ಞಾಪಿಸುವುದನ್ನು ಕಂಡರು. 12ಕೂಡಲೆ ಆಸ್ಥಾನಕ್ಕೆ ಬಂದು ರಾಜಾಜ್ಞೆಯ ಪ್ರಸ್ತಾಪವನ್ನೆತ್ತಿ, "ರಾಜರೇ, ಯಾರೂ ಮೂವತ್ತು ದಿನಗಳ ತನಕ ತಮಗೆ ಹೊರತು ಬೇರೆ ಯಾವ ದೇವರಿಗಾಗಲಿ ಮನುಷ್ಯನಿಗಾಗಲಿ ಪ್ರಾರ್ಥನೆ ಮಾಡಕೂಡದು. ಮಾಡಿದರೆ ಅಂಥವನನ್ನು ಸಿಂಹಗಳ ಗವಿಯಲ್ಲಿ ಹಾಕಲಾಗುವುದು ಎಂಬ ಶಾಸನಕ್ಕೆ ನೀವು ರುಜುಹಾಕಿದಿರಲ್ಲವೆ?" ಎಂದು ಕೇಳಿದರು. ಅದಕ್ಕೆ ರಾಜನು, "ಹೌದು, ಮೇದ್ಯರ ಹಾಗು ಪರ್ಷಿಯರ ಧರ್ಮವಿಧಿಗಳಂತೆ ಅದು ಸ್ಥಿರವಾದ ನಿಬಂಧನೆ," ಎಂದು ಉತ್ತರಕೊಟ್ಟನು. 13ಆಗ ಅವರು ರಾಜಸನ್ನಿಧಿಯಲ್ಲಿ, "ರಾಜರೇ, ಜುದೇಯದಿಂದ ಸೆರೆಯಾಳುಗಳಾಗಿ ತಂದವರಲ್ಲಿ ಒಬ್ಬನಾದ ಆ ದಾನಿಯೇಲನು ನಿಮ್ಮನ್ನಾಗಲಿ, ನಿಮ್ಮ ಹಸ್ತಾಕ್ಷರದ ರುಜುವಿರುವ ಶಾಸನವನ್ನಾಗಲಿ ಮಾನ್ಯಮಾಡುತ್ತಿಲ್ಲ," ಬದಲಿಗೆ ದಿನಕ್ಕೆ ಮೂರಾವರ್ತಿ ಪ್ರಾರ್ಥನೆ ಮಾಡುತ್ತಿದ್ದಾನೆ," ಎಂದು ದೂರಿತ್ತರು. 14ಆದರೆ ರಾಜನು ಈ ಮಾತುಗಳನ್ನು ಕೇಳಿ ಬಹಳ ವ್ಯಸನಗೊಂಡನು. ದಾನಿಯೇಲನನ್ನು ಈ ಇಕ್ಕಟ್ಟಿನಿಂದ ತಪ್ಪಿಸಲು ಮನಸ್ಸು ಮಾಡಿಕೊಂಡನು. ಆದರೆ ಹೇಗೆ ರಕ್ಷಿಸುವುದೆಂದು ಸೂರ್ಯಾಸ್ತಮದವರೆಗೂ ಆಲೋಚಿಸುತ್ತಾ ಇದ್ದನು. 15ಇದನ್ನು ಅರಿತುಕೊಂಡ ಆ ಅಧಿಕಾರಿಗಳು ರಾಜಸನ್ನಿಧಿಗೆ ಮತ್ತೆ ಕೂಡಿಬಂದು, "ಪ್ರಭೂ, ರಾಜರು ವಿಧಿಸಿದ ಯಾವ ನಿಬಂಧನೆಯಾಗಲಿ, ಶಾಸನವಾಗಲಿ ರದ್ದಾಗಬಾರದು ಎಂಬ ಧರ್ಮಸೂತ್ರ ಮೇದ್ಯರಲ್ಲೂ ಪರ್ಷಿಯರಲ್ಲೂ ಉಂಟೆಂಬುದು ತಮಗೆ ತಿಳಿದಿರಬೇಕು," ಎಂದರು. 16ಈ ಕಾರಣ ರಾಜನು ಅಪ್ಪಣೆ ಕೊಡಲೇಬೇಕಾಯಿತು. ಕೂಡಲೆ ಅವರು ದಾನಿಯೇಲನನ್ನು ತಂದು ಸಿಂಹಗಳ ಗವಿಯಲ್ಲಿ ಹಾಕಿಯೇಬಿಟ್ಟರು. ಆಗ ರಾಜನು ದಾನಿಯೇಲನಿಗೆ, "ನೀನು ದಿನನಿತ್ಯವೂ ಆರಾಧಿಸುವ ದೇವರು ನಿನ್ನನ್ನು ಉದ್ಧರಿಸಲಿ!" ಎಂದು ಹರಸಿದನು.

17 ಆ ಅಧಿಕಾರಿಗಳಾದರೋ ಒಂದು ಬಂಡೆಯನ್ನು ತಂದು ಆ ಗವಿಯ ಬಾಯನ್ನು ಮುಚ್ಚಿದರು. ದಾನಿಯೇಲನ ಈ ಗತಿಯನ್ನು ಯಾರೂ ಬದಲಾಯಿಸಲಾಗದಂತೆ ರಾಜನ ಮತ್ತು ಅವನ ಮುಖಂಡರ ಮುದ್ರೆಯನ್ನು ಅದಕ್ಕೆ ಒತ್ತಿ ಮೊಹರು ಮಾಡಲಾಯಿತು. 18ಬಳಿಕ ರಾಜನು ಅರಮನೆಗೆ ಹಿಂದಿರುಗಿದನು. ಆ ರಾತ್ರಿಯೆಲ್ಲಾ ಉಪವಾಸವಿದ್ದನು. ವಾದ್ಯವಿನೋದಾವಳಿ ಯಾವುದನ್ನೂ ಹತ್ತಿರಬರಲು ಬಿಡಲಿಲ್ಲ. ನಿದ್ರೆ ಅವನ ಕಣ್ಣುಗಳಿಂದ ಮಾಯವಾಯಿತು.

19 ಮಾರನೆಯ ದಿನ ಬೆಳಿಗ್ಗೆ ರಾಜನು ಉದಯದಲ್ಲೇ ಎದ್ದು ಸಿಂಹಗಳ ಗವಿಯ ಬಳಿಗೆ ವೇಗವಾಗಿ ಹೋದನು. 20ದಾನಿಯೇಲನಿದ್ದ ಗವಿಯ ಸಮೀಪಕ್ಕೆ ಬಂದು, ದುಃಖ ಧ್ವನಿಯಿಂದ ದಾನಿಯೇಲನನ್ನು

ಕೂಗಿ, “ದಾನಿಯೇಲನೇ, ಜೀವಸ್ವರೂಪನಾದ ದೇವರ ದಾಸನೇ, ನೀನು ದಿನನಿತ್ಯವೂ ಆರಾಧಿಸುವ ನಿನ್ನ ದೇವರಿಗೆ ನಿನ್ನನ್ನು ಸಿಂಹಗಳಿಂದ ಉದ್ಧರಿಸಲು ಸಾಧ್ಯವಾಯಿತೋ?” ಎಂದು ಕೇಳಿದನು.

21 ಆಗ ದಾನಿಯೇಲನು ರಾಜನಿಗೆ, “ಅರಸರೇ, ಚಿರಂಜೀವಿಯಾಗಿರಿ! 22ನನ್ನ ದೇವರು ತಮ್ಮ
ದೂತನನ್ನು ಕಳಿಸಿ, ಸಿಂಹಗಳ ಬಾಯನ್ನು ಬಂಧಿಸಿದರು. ಅವುಗಳಿಂದ ನನಗೆ ಯಾವ ಹಾನಿಯೂ ಆಗಲಿಲ್ಲ. ಏಕೆಂದರೆ ಆ ದೇವರ ದೃಷ್ಟಿಯಲ್ಲಿ ನಾನು ನಿರ್ಮಲನು. ರಾಜರಾದ ತಮಗೂ ನಾನು ಯಾವ ದ್ರೋಹವನ್ನೂ ಮಾಡಲಿಲ್ಲ,” ಎಂದು ಹೇಳಿದನು.

23 ರಾಜನು ಇದನ್ನು ಕೇಳಿ ಬಹಳ ಸಂತೋಷಪಟ್ಟನು. ದಾನಿಯೇಲನನ್ನು ಗವಿಯೊಳಗಿಂದ ಮೇಲಕ್ಕೆತ್ತಬೇಕೆಂದು ಅಪ್ಪಣೆಮಾಡಿದನು. ಅಂತೆಯೇ ಅವನನ್ನು ಮೇಲಕ್ಕೆತ್ತಲಾಯಿತು. ಆತನು ತನ್ನ ದೇವರಲ್ಲಿ ದೃಢವಾದ ವಿಶ್ವಾಸವಿಟ್ಟ ಕಾರಣ ಅವನಿಗೆ ಯಾವ ಹಾನಿಯೂ ಆಗಿರಲಿಲ್ಲ. 24ಅನಂತರ ರಾಜನು
ಆಜ್ಞಾಪಿಸಲು ದಾನಿಯೇಲನ ಮೇಲೆ ದೂರು ಹೊರಿಸಿದವರನ್ನು ಮಡದಿಮಕ್ಕಳ ಸಮೇತ ತಂದು ಸಿಂಹಗಳ ಗವಿಯಲ್ಲಿ ಹಾಕಿಬಿಟ್ಟರು. ಅವರು ಗವಿಯ ತಳಮುಟ್ಟುವುದರೊಳಗೆ ಸಿಂಹಗಳ ಅವರ ಮೇಲೆ ಹಾರಿ ಅವರ ಎಲುಬುಗಳನ್ನೆಲ್ಲ ಚೂರು ಚೂರು ಮಾಡಿದವು.

25 ಇದಾದಮೇಲೆ ರಾಜ ದಾರ್ಯಾವೆಷನು ಜಗದಲ್ಲಿ ವಾಸಿಸುವ ಸಕಲ ದೇಶ-ಕುಲ-ಭಾಷೆಗಳವರಿಗೆ ಈ ಪ್ರಸಿದ್ಧ ಪತ್ರವನ್ನು ಬರೆಯಿಸಿದನು:

“ನಿಮಗೆ ಹೆಚ್ಚೆಚ್ಚು ಸುಖಶಾಂತಿ ಲಭಿಸಲಿ!” 26ನನ್ನ ರಾಜ್ಯದ ಪ್ರಜೆಗಳೆಲ್ಲರಿಗೆ ನಾನು
ಆಜ್ಞಾಪಿಸುವುದೇನೆಂದರೆ:

ನೀವೆಲ್ಲರು ದಾನಿಯೇಲನ ದೇವರ ಮುಂದೆ
ಭಯಭಕ್ತಿಯಿಂದ ನಡೆದುಕೊಳ್ಳತಕ್ಕದ್ದು.
ಏಕೆಂದರೆ ಆತನೇ ಜೀವಸ್ವರೂಪನಾದ ಸನಾತನ ದೇವರು !
ಆತನ ರಾಜ್ಯ ಎಂದೆಂದಿಗೂ ಅಳಿಯದು
ಆತನ ಆಳ್ವಿಕೆ ಶಾಶ್ವತವಾದುದು !
27 ಆತ ಉದ್ಧರಿಸುವಂಥವನು, ರಕ್ಷಿಸುವಂಥವನು
ಭೂಮ್ಯಾಕಾಶಗಳಲ್ಲಿ ಅದ್ಭುತ
ಮಹತ್ವಗಳನ್ನು ನಡೆಸುವಂಥವನು !
ಆತನೇ ದಾನಿಯೇಲನನ್ನು ಸಿಂಹಗಳ
ಬಾಯಿಂದ ತಪ್ಪಿಸಿದವನು !

28 ಹೀಗೆ ಈ ದಾನಿಯೇಲನು ದಾರ್ಯಾವೆಷನ ಆಳ್ವಿಕೆಯಲ್ಲೂ ಪರ್ಷಿಯಾನಾದ ಸೈರೆಷನ ಆಳ್ವಿಕೆಯಲ್ಲೂ ಪ್ರವರ್ಧಿಸುತ್ತಾ ಬಾಳಿದನು.

## ದಾನಿಯೇಲನು ಕಂಡ ಕನಸುಗಳು

(7.1–12.13)

**7** ಬಾಬಿಲೋನಿನ ಅರಸನಾದ ಬೇಲ್ಶಚ್ಚರನ ಆಳ್ವಿಕೆಯ ಮೊದಲನೆಯ ವರ್ಷದಲ್ಲಿ ದಾನಿಯೇಲನು ಹಾಸಿಗೆಯ ಮೇಲೆ ಮಲಗಿದ್ದಾಗ ಒಂದು ಕನಸು ಕಂಡನು. ಅವನ ಮನಸ್ಸಿಗೆ ಒಂದು ದೃಶ್ಯಕಾಣಿಸಿತು. ಕೂಡಲೆ ಅವನು ಆ ಕನಸನ್ನೂ ಅದರ ಮುಖ್ಯಾಂಶಗಳನ್ನೂ ಬರೆದಿಟ್ಟನು.

2 ಅದರ ಸಾರಾಂಶ ಇದು: ನಾನು ರಾತ್ರಿ ಕಂಡ ಕನಸಿನಲ್ಲಿ ನಾಲ್ಕು ದಿಕ್ಕುಗಳಿಂದಲೂ ಗಾಳಿ
ಮಹಾಸಾಗರದ ಮೇಲೆ ರಭಸವಾಗಿ ಬೀಸಿ ಬಡಿಯುತ್ತಿತ್ತು. 3ವಿಲಕ್ಷಣವಾದ ನಾಲ್ಕು ದೊಡ್ಡ ಮೃಗಗಳು ಆ
ಸಾಗರದಿಂದ ಹೊರಗೆ ಬಂದವು. 4ಮೊದಲು ಕಾಣಿಸಿದ ಮೃಗ ಸಿಂಹದ ಹಾಗಿತ್ತು. ಆದರೆ ಅದಕ್ಕೆ ಹದ್ದಿನಂಥ
ರೆಕ್ಕೆಗಳಿದ್ದವು. ನಾನು ನೋಡುತ್ತಿರುವಾಗಲೆ ಆ ರೆಕ್ಕೆಗಳು ಕೀಳಲ್ಪಟ್ಟವು. ಆ ಮೃಗವನ್ನು ನೆಲದಿಂದ ಮೇಲಕ್ಕೆತ್ತಿ ಮನುಷ್ಯನ ಹಾಗೆ ಎರಡು ಕಾಲುಗಳ ಮೇಲೆ ನಿಲ್ಲಿಸಲಾಯಿತು. ಅದಕ್ಕೆ ಮನುಷ್ಯನ ಹೃದಯಕೊಡಲಾಯಿತು.

5 ಬಳಿಕ ಎರಡನೆಯ ಇನ್ನೊಂದು ಮೃಗವನ್ನು ಕಂಡೆ. ಅದು ಕರಡಿಯ ಹಾಗಿತ್ತು. ಒಂದು ಹೆಗಲನ್ನು ಮೇಲಕ್ಕೆ ಎತ್ತಿಕೊಂಡಿತ್ತು. ತನ್ನ ಬಾಯಲ್ಲಿನ ಹಲ್ಲುಗಳ ನಡುವೆ ಮೂರು ಪಕ್ಕೆಲುಬುಗಳನ್ನು ಕಚ್ಚಿಕೊಂಡಿತ್ತು. "ನೀನೆದ್ದು ಬೇಕಾದಷ್ಟು ಮಾಂಸವನ್ನು ತಿನ್ನು," ಎಂದು ಅದಕ್ಕೆ ಹೇಳಲಾಯಿತು.

6 ಅನಂತರ ನಾನು ನೋಡುತ್ತಿರುವಾಗಲೆ ಚಿರತೆಯ ಹಾಗಿದ್ದ ಮತ್ತೊಂದು ಮೃಗ ಕಾಣಿಸಿತು. ಅದರ ಪಕ್ಕಗಳಲ್ಲಿ ಪಕ್ಷಿಯ ರೆಕ್ಕೆಗಳಂತಿರುವ ನಾಲ್ಕು ರೆಕ್ಕೆಗಳಿದ್ದವು. ಆ ಮೃಗಕ್ಕೆ ನಾಲ್ಕು ತಲೆಗಳಿದ್ದವು. ಅದಕ್ಕೆ ದೊರೆತನ ಕೊಡಲಾಯಿತು.

7 ಇದಾದ ಬಳಿಕ ಆ ರಾತ್ರಿ ಕನಸಿನಲ್ಲಿ ಕಾಣಿಸಿಕೊಂಡ ನಾಲ್ಕನೇ ಮೃಗ ಭಯಂಕರವಾಗಿತ್ತು. ಹದರಿಸುವಂಥದಾಗಿತ್ತು. ಅಧಿಕ ಬಲವುಳ್ಳದ್ದಾಗಿತ್ತು. ಅದಕ್ಕೆ ಕಬ್ಬಿಣದ ದೊಡ್ಡ ಹಲ್ಲುಗಳಿದ್ದವು. ಅದು ತನ್ನ ಬಲಿಯನ್ನು ತುಂಡುತುಂಡಾಗಿಸಿ ಕಬಳಿಸುತ್ತಿತ್ತು. ಮಿಕ್ಕದ್ದನ್ನು ಕಾಲುಗಳಿಂದ ತುಳಿಯುತ್ತಾ ಇತ್ತು. ಅದು ಮುಂಚಿನ ಮೃಗಗಳಿಗಿಂತ ವಿಲಕ್ಷಣವಾಗಿತ್ತು. ಅದಕ್ಕೆ ಹತ್ತು ಕೊಂಬುಗಳಿದ್ದವು. 8ನಾನು ಆ ಕೊಂಬುಗಳನ್ನು ಗಮನಿಸುತ್ತಿರುವಾಗಲೆ ಅವುಗಳ ನಡುವೆ ಇಗೋ ಇನ್ನೊಂದು ಚಿಕ್ಕ ಕೊಂಬು ಮೊಳೆಯಿತು. ಅದಕ್ಕೆ ಎಡೆಮಾಡಿಕೊಡಲು ಮುಂಚಿನ ಕೊಂಬುಗಳಲ್ಲಿ ಮೂರನ್ನು ಬೇರುಸಹಿತ ಕೀಳಲಾಯಿತು. ಆಶ್ಚರ್ಯವೆಂದರೆ, ಆ ಕೊಂಬಿನಲ್ಲಿ ಮನುಷ್ಯನ ಕಣ್ಣುಗಳಂತಿರುವ ಕಣ್ಣುಗಳಿದ್ದವು. ಬಡಾಯಿ ಕೊಚ್ಚಿಕೊಳ್ಳುವ ಬಾಯೂ ಇತ್ತು.

### ಶಾಶ್ವತ ಜೀವಿಯಾದ ನರಪುತ್ರನ ದರ್ಶನ

9 ನಾನು ನೋಡುತ್ತಿದ್ದ ಹಾಗೆ: ಸಿಂಹಾಸನಗಳನ್ನು ಹಾಕಲಾಯಿತು. ಮಹಾವೃದ್ಧನೊಬ್ಬನು ಆಸೀನನಾದನು. ಆತನ ಉಡುಪು ಬೆಳ್ಳಗಿತ್ತು ಹಿಮದಂತೆ. ಆತನ ತಲೆಗೂದಲಿತ್ತು ನಿರ್ಮಲವಾದ ಬಿಳಿಯ ಉಣ್ಣೆಯಂತೆ. ಆತನ ಸಿಂಹಾಸನ ಅಗ್ನಿಜ್ವಾಲೆಗಳು. ಧಗಧಗಿಸುವ ಬೆಂಕಿ ಅದರ ಚಕ್ರಗಳು. 10ಆ ಸಿಂಹಾಸನದ ಸಮ್ಮುಖದಿಂದ ಪ್ರಜ್ವಲ ಪ್ರವಾಹವೊಂದು ಉಕ್ಕಿ ಹರಿದು ಬಂದಿತು. ಲಕ್ಷೋಪಲಕ್ಷ ದೂತರು ಆತನಿಗೆ ಸೇವೆ ಸಲ್ಲಿಸುತ್ತಿದ್ದರು. ಕೋಟ್ಯಾನುಕೋಟಿ ಕಿಂಕರರು ಆತನ ಮುಂದೆ ನಿಂತಿದ್ದರು. ನ್ಯಾಯಸಭೆಯವರು ತೀರ್ಪು ನೀಡಲು ಕುಳಿತುಕೊಂಡರು. ಪಟ್ಟಿ ಪುಸ್ತಕಗಳನ್ನು ತೆರೆಯಲಾಯಿತು.

11 ನಾನು ನೋಡುತ್ತಾ ಇದ್ದೆ: ಆ ಕಿರುಕೊಂಬು ಬಡಾಯಿಕೊಚ್ಚಿಕೊಂಡ ನಿಮಿತ್ತ ಆ ಕೊಂಬಿನ ಮೃಗವನ್ನು ಕೊಂದು ಅದರ ಹೆಣವನ್ನು ಉರಿಯುವ ಬೆಂಕಿಗೆ ಹಾಕಿ ನಾಶಮಾಡಿದರು. 12ಮಿಕ್ಕ ಮೃಗಗಳ ದೊರೆತನವನ್ನು ತೆಗೆದುಬಿಟ್ಟರು. ಆದರೆ ಕೆಲವು ಕಾಲದ ಮಟ್ಟಿಗೆ, ತಕ್ಕ ಸಮಯ ಬರುವ ತನಕ, ಅವುಗಳ ಜೀವಾವಧಿಯನ್ನು ಉಳಿಸಿದರು.

13 ನಾನು ಕಂಡ ರಾತ್ರಿಯ ಕನಸಿನಲ್ಲಿ ನರಪುತ್ರನಂತಿರುವವನು ಆಕಾಶದ ಮೇಘಗಳೊಂದಿಗೆ ಬಂದು ಆ ಮಹಾವೃದ್ಧನನ್ನು ಸಮೀಪಿಸಿದನು. ಅವನನ್ನು ಆತನ ಸನ್ನಿಧಿಗೆ ತಂದರು. 14ಸಕಲ ರಾಷ್ಟ್ರ-ಕುಲ-ಭಾಷೆಗಳವರು ಅವನಿಗೆ ಸೇವೆ ಸಲ್ಲಿಸಲೆಂದು ಅವನಿಗೆ ದೊರೆತನ, ಘನತೆ, ರಾಜ್ಯತ್ವ ಇವುಗಳನ್ನು ಕೊಡಲಾಯಿತು. ಅವನ ಆಳ್ವಿಕೆಗೆ ಅಂತ್ಯವಿಲ್ಲ, ಅದು ಶಾಶ್ವತವಾದುದು, ಅವನ ರಾಜ್ಯ ಎಂದಿಗೂ ಅಳಿಯದು!

### ಆ ದರ್ಶನದ ಅರ್ಥ

15 ದಾನಿಯೇಲನಾದ ನನ್ನ ಮನ ಒಳಗೇ ವ್ಯಥೆಗೊಂಡಿತು. ನನ್ನ ಮನಸ್ಸಿನಲ್ಲಿ ತೋಚಿದ ದರ್ಶನಗಳು ನನ್ನನ್ನು ಕಳವಳಪಡಿಸಿದವು. 16ಹತ್ತಿರದಲ್ಲೆ ನಿಂತಿದ್ದವರಲ್ಲಿ ಒಬ್ಬನ ಬಳಿಗೆ ಹೋಗಿ ಇವುಗಳ ಸರಿಯಾದ ಅರ್ಥ ಏನೆಂದು ವಿಚಾರಿಸಿದೆ. 17ಅವನು ನನಗೆ: "ಆ ನಾಲ್ಕು ದೊಡ್ಡ ಮೃಗಗಳು ಲೋಕಸಾಗರಗಳಿಂದ ಏರತಕ್ಕ ನಾಲ್ಕು ರಾಜ್ಯಗಳು. 18ಆದರೆ ರಾಜ್ಯಾಧಿಕಾರ ಲಭಿಸುವುದು ಮಹೋನ್ನತರ ಪವಿತ್ರ ಪ್ರಜೆಗೆ. ಅದನ್ನು ತಲತಲಾಂತರಕ್ಕೂ ಶಾಶ್ವತವಾಗಿ ಅನುಭವಿಸುವವರು ಅವರೇ," ಎಂದು ಆ ವಿಷಯಗಳ ತಾತ್ಪರ್ಯವನ್ನು ವಿವರಿಸಿ ತಿಳಿಸಿದನು.

19 ಅದಾದ ಮೇಲೆ ಇತರ ಮೃಗಗಳಿಗಿಂತ ವಿಲಕ್ಷಣವಾಗಿಯೂ ಅತಿಭಯಂಕರವಾಗಿಯೂ ಕಬ್ಬಿಣದ ಹಲ್ಲು, ಕಂಚಿನ ಉಗುರು ಉಳ್ಳದ್ದಾಗಿಯೂ ತನ್ನ ಬಲಿಯನ್ನು ತುಂಡುತುಂಡಾಗಿಸಿ ಕಬಳಿಸುತ್ತಿದ್ದ

ಹಾಗು ಮಿಕ್ಕದ್ದನ್ನು ಕಾಲಿನಿಂದ ತುಳಿಯುತ್ತಿದ್ದ ಈ ನಾಲ್ಕನೆಯ ಮೃಗದ ವಿಷಯವನ್ನು ತಿಳಿದುಕೊಳ್ಳಲು ಬಯಸಿದೆ.

20 ಅದರ ತಲೆಯ ಮೇಲಿದ್ದ ಹತ್ತು ಕೊಂಬುಗಳ ವಿಷಯವಾಗಿಯೂ, 21ನಾನು ನೋಡುತ್ತಿದ್ದ ಹಾಗೆ ಯಾವ ಕೊಂಬು ಮೊಳೆತು ಮೂರು ಕೊಂಬುಗಳನ್ನು ಬೀಳಿಸಿ, ತನ್ನಲ್ಲೆ ಕಣ್ಣುಳ್ಳದ್ದಾಗಿ ಬಡಾಯಿ ಕೊಚ್ಚಿಕೊಳ್ಳುವ ಬಾಯುಳ್ಳದ್ದಾಗಿ, ಮಿಕ್ಕ ಕೊಂಬುಗಳಿಗಿಂತ ಭಯಂಕರವಾಗಿ ಕಾಣಿಸುತ್ತಾ ಇತ್ತೋ, ಆ ಕೊಂಬಿನ ವಿಷಯವಾಗಿ ಸತ್ಯಾರ್ಥವನ್ನೂ ತಿಳಿದುಕೊಳ್ಳಬೇಕೆಂದು ವಿಚಾರಿಸಿದೆ. 22ಆ ಕೊಂಬು ಪವಿತ್ರ ಪ್ರಜೆಯೊಂದಿಗೆ ಯುದ್ಧಮಾಡುತ್ತಿತ್ತು. ಮಹಾವೃದ್ಧನು ಬಂದು ಮಹೋನ್ನತರ ಆ ಪವಿತ್ರ ಪ್ರಜೆಗೆ ನ್ಯಾಯ ತೀರಿಸಿ ಅವರಿಗೆ ರಾಜ್ಯವನ್ನು ದೊರಕಿಸುವ ತನಕ ಅವರನ್ನು ಗೆಲ್ಲುತ್ತಾ ಬಂದಿತ್ತು.

23 ಆಗ ಅವನು ನನಗೆ ಕೊಟ್ಟ ವಿವರ ಇದು: "ಆ ನಾಲ್ಕನೆಯ ಮೃಗ ಲೋಕದಲ್ಲಿ ತಲೆಯೆತ್ತುವ ನಾಲ್ಕನೆಯ ರಾಜ್ಯ. ಅದು ಮಿಕ್ಕ ರಾಜ್ಯಗಳಿಗಿಂತ ವಿಲಕ್ಷಣವಾದುದು. ಲೋಕವನ್ನೇ ಕಾಲಿನಿಂದ ತುಳಿದು ಚೂರುಚೂರು ಮಾಡಿ ಕಬಳಿಸುವುದು. 24ಆ ಹತ್ತು ಕೊಂಬುಗಳು ಅದೇ ರಾಜ್ಯವನ್ನು ಆಳುವ ಹತ್ತು ಮಂದಿ ಅರಸರು. ಅವರ ತರುವಾಯ ಮತ್ತೊಬ್ಬನು ತಲೆದೋರುವನು. ಅವನು ಮುಂಚಿನ ಅರಸರಿಗಿಂತ ವಿಲಕ್ಷಣವಾಗಿರುವನು. ಆ ಮೂವರು ಅರಸರನ್ನು ಸದೆಬಡಿದುಬಿಡುವನು. 25ಅವನು ಮಹೋನ್ನತ ದೇವರಿಗೆ ವಿರುದ್ಧವಾಗಿ ಕೊಚ್ಚಿಕೊಳ್ಳುವನು. ಮಹೋನ್ನತರ ಪವಿತ್ರ ಪ್ರಜೆಯನ್ನು (ಸಂತರನ್ನು) ಶೋಷಣೆಗೆ ಗುರಿಮಾಡುವನು. ಆ ಪ್ರಜೆ ಅವನಿಗೆ ಮೂರುವರೆ ವರ್ಷ ಅಧೀನರಾಗಿರುವರು. 26ಆದರೆ (ದೇವರ) ನ್ಯಾಯಸಭೆ ತೀರ್ಪಿತ್ತು, ಅವನ ದೊರೆತನವನ್ನು ಕಿತ್ತು, ವಿನಾಶಮಾಡಿ, ಕೊನೆಗಾಣಿಸಿಬಿಡುವುದು. 27ರಾಜ್ಯಭಾರವೂ ದೊರೆತನವೂ ಸಮಸ್ತ ಲೋಕದಲ್ಲಿನ ರಾಜ್ಯಗಳ ಮಹಿಮೆಯೂ ಮಹೋನ್ನತರ ಭಕ್ತ ಜನರಿಗೆ ಕೊಡಲಾಗುವುದು. ಅವರ ರಾಜ್ಯ ಶಾಶ್ವತ ರಾಜ್ಯ. ಎಲ್ಲ ದೇಶಾಧಿಪತಿಗಳೂ ಅವರಿಗೆ ಅಧೀನರಾಗಿ ಸೇವೆ ಮಾಡುವರು," ಎಂದು ಹೇಳಿದನು.

28 ಇಲ್ಲಿಗೆ ಆ ಕನಸಿನ ವಿವರ ಮುಗಿಯಿತು. ದಾನಿಯೇಲನಾದ ನಾನು ನನ್ನ ಆಲೋಚನೆಗಳಿಂದ ಬಹಳ ಕಳವಳಗೊಂಡೆ. ನನ್ನ ಮುಖ ಬಾಡಿತು. ಆದರೂ ನಡೆದ ಸಂಗತಿಯನ್ನು ಮನಸ್ಸಿನಲ್ಲೇ ಇಟ್ಟುಕೊಂಡೆ.

### ಟಗರು-ಹೋತಗಳನ್ನು ಕುರಿತ ಕನಸು

**8** ಮೊದಲು ನನಗೆ ಕಾಣಿಸಿದ ಕನಸಲ್ಲದೆ, ಅರಸ ಬೇಲ್ಶಚ್ಚರನ ಆಳ್ವಿಕೆಯ ಮೂರನೇ ವರ್ಷದಲ್ಲಿ ದಾನಿಯೇಲನಾದ ನನಗೆ ಇನ್ನೊಂದು ಕನಸು ಕಾಣಿಸಿತು. 2ಈ ಕನಸಿನಲ್ಲಿ ಏಲಾಮ್ ಸಂಸ್ಥಾನದ ಶೂಷನ್ ಕೋಟೆಯಲ್ಲಿ ನಾನಿದ್ದೆ. ಊಲಾ ಕಾಲುವೆಯ ದಡದ ಮೇಲೆ ನಾನು ನಿಂತುಕೊಂಡಿದ್ದ ಹಾಗೆ ತೋರಿತು. 3ಕಣ್ಣೆತ್ತಿ ನೋಡಿದಾಗ ಎರಡು ಕೊಂಬಿನ ಒಂದು ಟಗರು ಕಾಲುವೆಯ ಹತ್ತಿರ ನಿಂತಿದ್ದು ಕಾಣಿಸಿತು. ಅದರ ಎರಡು ಕೊಂಬುಗಳು ಉದ್ದವಾಗಿದ್ದರೂ ಒಂದಕ್ಕಿಂತ ಒಂದು ದೊಡ್ಡದಾಗಿತ್ತು. ಆ ದೊಡ್ಡದು ಮೊಳೆತದ್ದು ಚಿಕ್ಕ ಕೊಂಬು ಮೊಳೆತ ಮೇಲೆ. 4ನಾನು ನೋಡುತ್ತಿದ್ದ ಹಾಗೆ ಆ ಟಗರು ಪಶ್ಚಿಮಕ್ಕೂ ಉತ್ತರಕ್ಕೂ ದಕ್ಷಿಣಕ್ಕೂ ಹಾದಾಡುತ್ತಿತ್ತು. ಯಾವ ಪ್ರಾಣಿಯೂ ಅದರ ಎದುರಿಗೆ ನಿಲ್ಲಲಾರದೆ ಹೋಯಿತು. ಅದರ ಕೈಯಿಂದ ಬಿಡಿಸಲು ಯಾವ ಮೃಗಕ್ಕೂ ಶಕ್ತಿಯಿರಲಿಲ್ಲ. ಅದು ಇಷ್ಟ ಬಂದಂತೆ ನಡೆದು ತನ್ನ ಶಕ್ತಿಯನ್ನು ಹೆಚ್ಚಿಸಿಕೊಂಡಿತ್ತು.

5 ನಾನು ಅದನ್ನು ಗಮನಿಸುತ್ತಿರುವಾಗಲೇ ಹೋತವೊಂದು ಪಶ್ಚಿಮದಿಂದ ಹೊರಟು ಬಂದಿತು. ಅದು ಜಗವೆಲ್ಲವನ್ನು ದಾಟಿಕೊಂಡು ನೆಲವನ್ನು ಸೋಕದೆ, ಅಲ್ಲಿಗೆ ಧಾವಿಸಿತು. ಅದರ ಕಣ್ಣುಗಳ ನಡುವೆ ವಿಶೇಷವಾದ ಒಂದು ಕೊಂಬಿತ್ತು. 6ನಾನು ಕಾಲುವೆಯ ಹತ್ತಿರ ಕಂಡ ಎರಡು ಕೊಂಬಿನ ಟಗರಿನ ಬಳಿಗೆ ಆ ಹೋತ ಓಡಿತು. ಪರಾಕ್ರಮದಿಂದ ಉಬ್ಬಿ, ರೋಷಗೊಂಡು, ಅದರ ಮೇಲೆ ಬೀಳಬೇಕೆಂದು ದೌಡಾಯಿಸಿತು. 7ಆ ಟಗರನ್ನು ಸಮೀಪಿಸುವುದನ್ನು ನಾನು ಗಮನಿಸಿದೆ. ಟಗರಿನ ವಿರುದ್ಧ ಮಹಾರೌದ್ರದಿಂದ ಉರಿಯುತ್ತಾ ಅದರ ಮೇಲೆ ಎರಗಿ ಅದರ ಎರಡು ಕೊಂಬುಗಳನ್ನು ಮುರಿದು ಬಿಟ್ಟಿತು.

ಅದನ್ನು ಎದುರಿಸುವ ಶಕ್ತಿ ಯಾವುದೂ ಆ ಟಗರಿಗೆ ಇರಲಿಲ್ಲ. ಹೋತ ಟಗರನ್ನು ನೆಲಕ್ಕೆ ಕೆಡವಿ ತುಳಿದುಹಾಕಿತು. ಅದರ ಕೈಯಿಂದ ಟಗರನ್ನು ಬಿಡಿಸುವ ಪ್ರಾಣಿ ಯಾವುದೂ ಇರಲಿಲ್ಲ.

8 ಆ ಹೋತಕ್ಕೆ ಅತ್ಯಧಿಕ ಹುಮ್ಮಸ್ಸು ಬಂದಿತು. ಆದರೆ ಅದು ಪ್ರಾಬಲ್ಯಕ್ಕೆ ಬರುವಾಗಲೇ ಅದರ ದೊಡ್ಡ ಕೊಂಬು ಮುರಿದು ಹೋಯಿತು. ಅದರ ಸ್ಥಾನದಲ್ಲಿ ನಾಲ್ಕು ಪ್ರಸಿದ್ಧ ಕೊಂಬುಗಳು ಮೊಳೆತು ಚತುರ್ದಿಕ್ಕುಗಳಿಗೂ ಚಾಚಿಕೊಂಡವು.
9ಅವುಗಳೊಳಗೆ ಒಂದರಲ್ಲಿ ಒಂದು ಚಿಕ್ಕ ಕೊಂಬು ಮೊಳೆತು, ಬಹುದೊಡ್ಡದಾಗಿ ಬೆಳೆದು, ದಕ್ಷಿಣದ ಕಡೆಗೂ ಪೂರ್ವದ ಕಡೆಗೂ ಚೆಲುವಿನ ನಾಡಾದ ಪಾಲೆಸ್ತೀನಿನ ಕಡೆಗೂ ಪ್ರಬಲಗೊಂಡಿತು.
10ಅದು ನಕ್ಷತ್ರ ಗಣದ ಮೇಲೆ ಕೈಮಾಡುವಷ್ಟು ಹೆಚ್ಚಿ ಆ ಗಣದ ಕೆಲವು ನಕ್ಷತ್ರಗಳನ್ನೂ ನೆಲಕ್ಕೆ ಕೆಡವಿ ತುಳಿದು ಬಿಟ್ಟಿತು.
11ಅದು ಮಾತ್ರವಲ್ಲ, ಆ ನಕ್ಷತ್ರ ಗಣದ ಅಧಿಪತಿಯನ್ನೇ ಎದುರಿಸುವಷ್ಟು ಉಬ್ಬಿಹೋಗಿ ಅನುದಿನದ ಬಲಿಯರ್ಪಣೆ ಆತನಿಗೆ ಸಲ್ಲದಂತೆ ಮಾಡಿತು.
12ಆತನ ಪವಿತ್ರಾಲಯವನ್ನು ಕೆಡವಿತು. ಅನುದಿನದ ಬಲಿಯರ್ಪಣೆಯನ್ನು ಅಡಗಿಸುವುದಕ್ಕಾಗಿ ನೀಚತನದಿಂದ ಒಂದು ಸೈನ್ಯವನ್ನೆಬ್ಬಿಸಿತು. ಸತ್ಯಧರ್ಮವನ್ನು ನೆಲಕ್ಕೆ ದೊಬ್ಬಿತು. ತನ್ನ ಇಷ್ಟಾರ್ಥವನ್ನು ಈಡೇರಿಸಿಕೊಂಡು ವೃದ್ಧಿಗೆ ಬಂದಿತು.

13 ಆಗ ಒಬ್ಬ ದೇವದೂತನು ಮಾತಾಡುವುದು ನನಗೆ ಕೇಳಿಸಿತು. ಮಾತಾಡುವವನನ್ನು ಮತ್ತೊಬ್ಬ ದೇವದೂತನು ಸಂಬೋಧಿಸಿ: "ಅನುದಿನದ ಬಲಿಯರ್ಪಣೆಯನ್ನು ನಿಲ್ಲಿಸುವುದು, ಭಯಂಕರವಾದ ದೇವದ್ರೋಹ ಮಾಡುವುದು, ಪವಿತ್ರಾಲಯವನ್ನೂ ದೇವಭಕ್ತಗಣವನ್ನೂ ತುಳಿಯುವುದೂ–ಕನಸಿನ ಇಂಥಾ ಕಾರ್ಯಗಳು ಎಷ್ಟು ಕಾಲ ನಡೆಯುವುವು?" ಎಂದು ಪ್ರಶ್ನೆಮಾಡಿದನು.
14ಅವನು ಇವನಿಗೆ, "ಉದಯಾಸ್ತಮಾನಗಳ ಎರಡು ಸಾವಿರದ ಮುನ್ನೂರರವರೆಗೆ ನಡೆಯುವುವು. ಅನಂತರ ಪವಿತ್ರಾಲಯಕ್ಕೆ ಪುನಃ ನ್ಯಾಯಸ್ಥಾಪನೆ ಆಗುವುದು," ಎಂದು ಹೇಳಿದನು.

## ಗಬ್ರಿಯೇಲ್ ದೂತನು ಕೊಟ್ಟ ವಿವರ

15 ದಾನಿಯೇಲನಾದ ನಾನು ಈ ಕನಸನ್ನು ಕಂಡು ಅದನ್ನು ಗ್ರಹಿಸಲು ಪ್ರಯತ್ನಿಸುತ್ತಿರುವಾಗ ತಟ್ಟನೆ ಮನುಷ್ಯ ರೂಪಹೊಂದಿದ ಒಬ್ಬನು ನನ್ನೆದುರಿಗೆ ನಿಂತನು.
16ಆಗ, "ಗ್ರಬಿಯೇಲನೇ, ಕನಸಿನ ಅರ್ಥವನ್ನು ಇವನಿಗೆ ತಿಳಿಯಪಡಿಸು," ಎಂದು ಮನುಷ್ಯ ಧ್ವನಿಯಂಥ ಒಂದು ವಾಣಿ ಊಲಾ ಕಾಲುವೆಯ ನಡುವೆ ನನಗೆ ಕೇಳಿಸಿತು.
17ಅದರಂತೆ ಅವನು ನನ್ನ ಹತ್ತಿರಕ್ಕೆ ಬಂದನು. ನಾನು ಭಯಭ್ರಾಂತನಾಗಿ ಅಡ್ಡಬಿದ್ದೆ. ನನಗೆ ಅವನು, "ನರಪುತ್ರನೇ, ಇದು ಅಂತ್ಯಕಾಲದಲ್ಲಿ ನೆರವೇರುವ ಕನಸು ಎಂಬುದು ನಿನಗೆ ಮನದಟ್ಟಾಗಿರಲಿ;" ಎಂದು ಹೇಳಿದನು.
18ಅವನು ನನ್ನೊಡನೆ ಮಾತಾಡುತ್ತಿರುವಾಗ ನಾನು ಮೈ ಮರೆತು ಅಧೋಮುಖವಾಗಿ ಬಿದ್ದಿದ್ದೆ. ಆಗ ಅವನು ನನ್ನನ್ನು ಮುಟ್ಟಿ, ನಿಲ್ಲಿಸಿ ನನಗೆ:
19 "ದೇವರು ತಮ್ಮ ಕೋಪವನ್ನು ತೀರಿಸುವ ಮುಂದಿನ ಕಾಲದಲ್ಲಿ ನಡೆಯತಕ್ಕದ್ದನ್ನು ನಿನಗೆ ತಿಳಿಸುತ್ತೇನೆ ಕೇಳು – ಅದು ನಿಯಮಿತ ಅಂತ್ಯ ಕಾಲಕ್ಕೆ ಸಂಬಂಧಪಟ್ಟದ್ದು."

20 "ನೀನು ನೋಡಿದ ಎರಡು ಕೊಂಬಿನ ಟಗರು ಮೇದ್ಯದ ಮತ್ತು ಪರ್ಷಿಯದ ರಾಜ್ಯ.
21ಆ ಹೋತ ಗ್ರೀಕ್ ರಾಜ್ಯ. ಅದರ ಕಣ್ಣುಗಳ ನಡುವಣ ದೊಡ್ಡ ಕೊಂಬು ಆ ರಾಜ್ಯದ ಮೊದಲನೆಯ ರಾಜ.
22ಆ ಕೊಂಬು ಮುರಿದು ಹೋದ ಮೇಲೆ ಅದರ ಸ್ಥಾನದಲ್ಲಿ ನಾಲ್ಕು ಕೊಂಬುಗಳು ಎದ್ದಂತೆಯೆ ಆ ಜನಾಂಗದಿಂದ ನಾಲ್ಕು ರಾಜ್ಯಗಳು ಏಳುವುವು. ಆದರೆ ಮೊದಲನೇ ರಾಜನಿಗೆ ಇದ್ದಷ್ಟು ಶಕ್ತಿ ಅವುಗಳಿಗೆ ಇರುವುದಿಲ್ಲ.

23 ಆ ರಾಜ್ಯಗಳ ಕಡೆಯಕಾಲ ಬಂದಾಗ, ಅಧರ್ಮಿಗಳ ಅಪರಾಧ ಭರ್ತಿಯಾದಾಗ, ಕ್ರೂರ ಮುಖನೂ ಕುತಂತ್ರ ವಚನ ನಿಪುಣನೂ ಆದ ಒಬ್ಬ ರಾಜನು ತಲೆದೋರುವನು.
24ಅವನು ಪ್ರಬಲನಾಗುವನು, ಆದರೆ ಸ್ವಬಲದಿಂದಲ್ಲ. ಅತ್ಯಧಿಕವಾಗಿ ಹಾಳುಮಾಡಿ, ಅಭಿವೃದ್ಧಿಯಾಗುವನು. ತನ್ನ ಇಷ್ಟಾರ್ಥವನ್ನು ತೀರಿಸಿಕೊಳ್ಳುವನು. ಬಲಿಷ್ಠರನ್ನೂ ದೇವಜನರನ್ನೂ ಧ್ವಂಸಮಾಡುವನು.
25ಯುಕ್ತಿಯಿಂದಲೆ ತನ್ನ ಕಪಟತನವನ್ನು ಸಿದ್ಧಿಗೆತರುವನು, ಮನದಲ್ಲೆ ಉಬ್ಬಿಕೊಂಡು ನೆಮ್ಮದಿಯಾಗಿರುವ ಬಹುಜನರನ್ನು ನಾಶ ಪಡಿಸುವನು. ರಾಜಾಧಿರಾಜನಿಗೂ ವಿರುದ್ಧವಾಗಿ ಏಳುವನು, ಆದರೂ ಯಾರ ಕೈಯೂ ಸೋಕದೆ

ಹಾಳಾಗುವನು. 26ಕನಸಿನಲ್ಲಿ ತಿಳಿಸಲಾದ ಉದಯಾಸ್ತಮಾನಗಳ ವಿಷಯ ನಿಜವೇ ಸರಿ. ಆದರೆ ಆ ಕನಸು ಗುಟ್ಟಾಗಿರಲಿ. ಅದು ಬಹು ದೂರದ ಕಾಲದ್ದು," ಎಂದು ಹೇಳಿದನು.

27 ದಾನಿಯೇಲನಾದ ನಾನು ಮೂರ್ಛೆಗೊಂಡೆ. ಕೆಲವು ದಿವಸ ಕಾಯಿಲೆ ಬಿದ್ದೆ. ಆಮೇಲೆ ಎದ್ದು ರಾಜಕಾರ್ಯವನ್ನು ಆರಂಭಿಸಿದೆ. ಆದರೂ ಆ ಕನಸಿಗೆ ಬೆಚ್ಚಿಬೆರಗಾದೆ. ಅದರ ಅರ್ಥವನ್ನು ಗ್ರಹಿಸಿಕೊಳ್ಳಲಾಗಲಿಲ್ಲ.

**ದಾನಿಯೇಲನು ತನ್ನ ಜನರಿಗಾಗಿ ಮಾಡಿದ ಪ್ರಾರ್ಥನೆ**

**9** ಅದು, ದಾರ್ಯಾವೆಷನ ಆಳ್ವಿಕೆಯ ಮೊದಲನೆಯ ವರ್ಷ. ಈತನು ಅಹಷ್ವೇರೋಷನ ಮಗ, ಮೇದ್ಯ ವಂಶದವನು ಹಾಗು ಬಾಬಿಲೋನಿನ ರಾಜ್ಯದ ದೊರೆ. 2ದಾನಿಯೇಲನಾದ ನಾನು ಪವಿತ್ರಗ್ರಂಥಗಳನ್ನು ಪರೀಕ್ಷಿಸಿ, ಸರ್ವೇಶ್ವರಸ್ವಾಮಿ ಪ್ರವಾದಿ ಯೆರೆಮೀಯನಿಗೆ ದಯಪಾಲಿಸಿದ ವಾಕ್ಯಾನುಸಾರ ಜೆರುಸಲೇಮ್ ಪಾಳುಬಿದ್ದಿರಬೇಕಾದ ಪೂರ್ಣಕಾಲಾವಧಿ ಎಪ್ಪತ್ತು ವರ್ಷಗಳೆಂದು ತಿಳಿದುಕೊಂಡೆ. 3ಉಪವಾಸವಿದ್ದು, ಗೋಣಿತಟ್ಟು ಸುತ್ತಿಕೊಂಡು, ಬೂದಿ ಬಳಿದುಕೊಂಡು, ಸರ್ವೇಶ್ವರನಾದ ದೇವರ ಕಡೆಗೆ ಮುಖವೆತ್ತಿ, ಪ್ರಾರ್ಥನೆ – ವಿಜ್ಞಾಪನೆಗಳಲ್ಲಿ ನಿರತನಾದೆ. 4ಪಾಪವನ್ನು ಅರಿಕೆಮಾಡಿ ನನ್ನ ದೇವರಾದ ಸರ್ವೇಶ್ವರನಿಗೆ ಹೀಗೆಂದು ಬಿನ್ನವಿಸಿದೆ:

"ಹೇ ಸರ್ವೇಶ್ವರಾ, ಮಹೋನ್ನತರೂ ಭಯಭಕ್ತಿಗೆ ಪಾತ್ರರೂ ಆದ ದೇವರೇ, ನಿಮ್ಮನ್ನು ಪ್ರೀತಿಸಿ, ನಿಮ್ಮ ಆಜ್ಞೆಗಳನ್ನು ಅನುಸರಿಸುವವರಿಗೆ ನೀವು ಮಾಡಿದ ವಾಗ್ದಾನಗಳನ್ನು ಪ್ರೀತಿಯಿಂದ ನೆರವೇರಿಸುತ್ತೀರಿ.

5 "ನಾವು ಪಾಪಾಪರಾಧಗಳನ್ನು ಮಾಡಿ, ಕೆಟ್ಟವರಾಗಿ ನಡೆದಿದ್ದೇವೆ; ನಿಮಗೆ ವಿರುದ್ಧ ತಿರುಗಿಬಿದ್ದು, ನಿಮ್ಮ ಆಜ್ಞಾವಿಧಿಗಳನ್ನು ತೊರೆದು ಬಿಟ್ಟಿದ್ದೇವೆ. 6ಅರಸರಿಗೆ, ಒಡೆಯರಿಗೆ, ಹಿರಿಯರಿಗೆ ಹಾಗು ಜನಸಾಮಾನ್ಯರಿಗೆ ನಿಮ್ಮ ದಾಸರಾದ ಪ್ರವಾದಿಗಳು ನಿಮ್ಮ ಹೆಸರಿನಲ್ಲಿ ನುಡಿದ ಮಾತುಗಳಿಗೆ ನಾವು ಕಿವಿಗೊಡಲೇ ಇಲ್ಲ. 7ಸರ್ವೇಶ್ವರಾ, ನೀವು ಸತ್ಯಸ್ವರೂಪಿ. ನಾವೋ ಲಜ್ಜೆಗೆಟ್ಟವರು. ಹೌದು, ಯೆಹೂದ್ಯರು ಹಾಗು ಜೆರುಸಲೇಮಿನ ನಿವಾಸಿಗಳು ಈಗಾಗಲೆ ನಿಮಗೆ ವಿರುದ್ಧ ಮಾಡಿದ ದ್ರೋಹದ ನಿಮಿತ್ತ ನಿಮ್ಮಿಂದ ದೇಶವಿದೇಶಗಳಿಗೆ ತಳ್ಳಲ್ಪಟ್ಟಿದ್ದಾರೆ. ದೂರದ ದೇಶಗಳಿಗೂ ಹತ್ತಿರದ ನಾಡುಗಳಿಗೂ ಚದರಿಹೋಗಿರುವ ಎಲ್ಲ ಇಸ್ರಯೇಲರು ನಾಚಿಕೆಗೆ ಈಡಾಗಿದ್ದಾರೆ. 8ಸ್ವಾಮೀ, ನಿಮಗೆ ವಿರುದ್ಧ ಪಾಪಮಾಡಿದ್ದರಿಂದ ನಾವೂ ನಮ್ಮ ಅರಸರೂ ಒಡೆಯರೂ ಹಿರಿಯರೂ ನಾಚಿಕೆಗೆ ಗುರಿಯಾಗಿದ್ದೇವೆ. 9ನಮ್ಮ ದೇವರಾದ ಸರ್ವೇಶ್ವರ, ನಮ್ಮನ್ನು ಕರುಣಿಸುವವರೂ ಕ್ಷಮಿಸುವವರೂ ಆಗಿದ್ದಾರೆ. ಆದರೆ ನಾವು ಅವರಿಗೆ ವಿರುದ್ಧ ತಿರುಗಿಬಿದ್ದೆವು. 10ನಮ್ಮ ದೇವರಾದ ಸರ್ವೇಶ್ವರನ ಮಾತನ್ನು ಕೇಳಲಿಲ್ಲ. ಅವರ ದಾಸರಾದ ಪ್ರವಾದಿಗಳ ಮುಖಾಂತರ ನಮಗೆ ಗೊತ್ತುಮಾಡಿದ ಸನ್ಮಾರ್ಗದಲ್ಲಿ ನಾವು ನಡೆಯಲಿಲ್ಲ. 11ಇಸ್ರಯೇಲರೆಲ್ಲರು ನಿಮ್ಮ ಧರ್ಮಶಾಸ್ತ್ರವನ್ನು ಮೀರಿ ನಿಮ್ಮ ಮಾತನ್ನು ಕೇಳಲೊಲ್ಲದೆ ಓರೆಯಾಗಿ ಹೋದರು. ಆದಕಾರಣ ನಿಮ್ಮ ಶಾಪದ ಕೇಡುಗಳನ್ನೂ ದೇವರ ದಾಸನಾದ ಮೋಶೆಯ ಧರ್ಮಶಾಸ್ತ್ರದಲ್ಲಿ ನೀವು ಆಣೆಯಿಟ್ಟು ಪ್ರಕಟಿಸಿದ ವಿಪತ್ತುಗಳನ್ನೂ ನಮ್ಮ ಮೇಲೆ ಸುರಿಯಲಾಗಿದೆ. ನಾವು ದ್ರೋಹಿಗಳೇ ಸರಿ. 12ನಮ್ಮ ದೇವರು ನಮ್ಮ ಮೇಲೆ ದೊಡ್ಡ ಕೇಡನ್ನು ಬರಮಾಡಿದ್ದಾರೆ. ನಮ್ಮನ್ನೂ ನಮ್ಮನ್ನಾಳುವ ಅಧಿಪತಿಗಳನ್ನೂ ಖಂಡಿಸಿ ಹೇಳಿದ ಮಾತುಗಳನ್ನು ನೆರವೇರಿಸಿದ್ದಾರೆ. ಜೆರುಸಲೇಮಿಗೆ ಆದಂಥ ಕೇಡು ವಿಶ್ವದಲ್ಲಿ ಎಂದೂ ಆಗಲಿಲ್ಲ. 13ಮೋಶೆಯ ಧರ್ಮಶಾಸ್ತ್ರದಲ್ಲಿ ಬರೆದಿರುವಂತೆಯೇ ಈ ವಿಪತ್ತೆಲ್ಲಾ ನಮ್ಮ ಮೇಲೆ ಬಂದಿದೆ. ಆದರೂ ನಾವು ನಮ್ಮ ಧರ್ಮಮಾರ್ಗಗಳನ್ನು ತೊರೆದುಬಿಟ್ಟಿದ್ದೇವೆ. ನಿಮ್ಮ ಸತ್ಯೋಪದೇಶವನ್ನು ಗ್ರಹಿಸಿ ನಡೆಯುವಂತೆ ನಮ್ಮ ದೇವರಾದ ಸರ್ವೇಶ್ವರನೆಂಬ ನಿಮ್ಮ ದಯೆಯನ್ನು ಬೇಡಿಕೊಳ್ಳಲಿಲ್ಲ. 14ಆದಕಾರಣ ಸರ್ವೇಶ್ವರ ಈ ಕೇಡನ್ನು ಸಕಾಲಕ್ಕೆ ನಮ್ಮ ಮೇಲೆ ಬರಮಾಡಿದ್ದಾರೆ. ನಮ್ಮ ದೇವರಾದ ಸರ್ವೇಶ್ವರ ತಾವು ಮಾಡುವ ಸಕಲ ಕಾರ್ಯಗಳಲ್ಲೂ ನ್ಯಾಯಸ್ವರೂಪರು. ನಾವೋ ಅವರ ಮಾತನ್ನು ಕೇಳಲಿಲ್ಲ.

15 "ಸರ್ವೇಶ್ವರಾ, ನಮ್ಮ ದೇವರೇ, ನೀವು ನಿಮ್ಮ ಭುಜ ಪರಾಕ್ರಮವನ್ನು ತೋರಿಸಿ, ನಿಮ್ಮ ಜನರನ್ನು ಈಜಿಪ್ಟಿನಿಂದ ಪಾರುಮಾಡಿ, ಇಂದಿನವರೆಗೂ ಸುಪ್ರಸಿದ್ಧವಾದ ಹೆಸರನ್ನು ಪಡೆದುಕೊಂಡವರಾಗಿದ್ದೀರಿ. ಈಗ

ಚಿತ್ತೈಸಿ. ನಾವು ಪಾಪಮಾಡಿ ಕೆಟ್ಟವರಾಗಿ ನಡೆದಿದ್ದೇವೆ. 16ಸರ್ವೇಶ್ವರಾ, ನಿಮ್ಮ ಸಮಸ್ತ ಧರ್ಮಕಾರ್ಯಗಳಿಗೆ ಅನುಸಾರವಾಗಿ ನಿಮ್ಮ ನಗರವೂ ನಿಮ್ಮ ಪವಿತ್ರ ಪರ್ವತವೂ ಆದ ಜೆರುಸಲೇಮ್ ಮೇಲೆ ನಿಮಗಿರುವ ಕೋಪವನ್ನೂ ರೋಷಾಗ್ನಿಯನ್ನೂ ದಯಮಾಡಿ ತೊಲಗಿಸಿಬಿಡಿ. ನಮ್ಮ ಮತ್ತು ನಮ್ಮ ಪೂರ್ವಜರ ಪಾಪಾಪರಾಧಗಳ ನಿಮಿತ್ತ ಜೆರುಸಲೇಮ್ ಮತ್ತು ನಿಮ್ಮ ಜನತೆ ನೆರೆ ಹೊರೆಯವರೆಲ್ಲರ ನಿಂದೆಗೆ ಗುರಿಯಾಗಿವೆ. 17ಓ ನಮ್ಮ ದೇವರೇ, ನಿಮ್ಮ ದಾಸನ ಪ್ರಾರ್ಥನೆ ವಿಜ್ಞಾಪನೆಗಳನ್ನು ಈಗ ಆಲಿಸಿರಿ. ಹಾಳಾಗಿರುವ ನಿಮ್ಮ ಪವಿತ್ರಾಲಯವನ್ನು ಸರ್ವೇಶ್ವರ ಎಂಬ ನಿಮ್ಮ ಹೆಸರಿನ ನಿಮಿತ್ತವೇ ಪ್ರಸನ್ನ ಮುಖದಿಂದ ನೋಡಿ. 18ನನ್ನ ದೇವರೇ, ಕಿವಿಗೊಟ್ಟು ಕೇಳಿ. ಕಣ್ಣುತೆರೆದು ನಮ್ಮ ಹಾಳು ಪ್ರದೇಶಗಳನ್ನೂ ನಿಮ್ಮ ಹೆಸರುಗೊಂಡಿರುವ ನಗರವನ್ನೂ ನೋಡಿ. ನಾವು ಸದ್ಧರ್ಮಿಗಳೇನೂ ಅಲ್ಲ. ನಿಮ್ಮ ಮಹಾಕೃಪೆಯನ್ನೇ ನಂಬಿಕೊಂಡು ಈ ಬಿನ್ನಹಗಳನ್ನು ನಿಮ್ಮ ಮುಂದೆ ಅರಿಕೆ ಮಾಡುತ್ತಿದ್ದೇವೆ. 19ಸ್ವಾಮೀ, ಕೇಳಿ; ಸ್ವಾಮೀ, ಕ್ಷಮಿಸಿ; ಸ್ವಾಮೀ, ಆಲಿಸಿ ಕಾರ್ಯವನ್ನು ಸಾಧಿಸಿ ತಡಮಾಡಬೇಡಿ. ನನ್ನ ದೇವರೇ, ನಿಮ್ಮ ಜನತೆ ಹಾಗು ನಿಮ್ಮ ನಗರ ನಿಮ್ಮ ಹೆಸರಿನವುಗಳು. ಆದಕಾರಣ, ನಿಮ್ಮ ಹೆಸರನ್ನು ಕಾಪಾಡಿಕೊಳ್ಳಿ."

20 ನಾನು ಬಾಯಿಬಿಟ್ಟು ಬೇಡಿಕೊಂಡೆ. ನನ್ನ ಮತ್ತು ನನ್ನ ಜನರಾದ ಇಸ್ರಯೇಲರ ಪಾಪವನ್ನು ಅರಿಕೆಮಾಡುತ್ತಾ ನನ್ನ ದೇವರ ಪವಿತ್ರ ಪರ್ವತದ ವಿಷಯವಾಗಿ ದೇವರಾದ ಸರ್ವೇಶ್ವರನಿಗೆ ಬಿನ್ನವಿಸಿದೆ. 21ಹೀಗೆ ಪ್ರಾರ್ಥನೆ ಮಾಡುತ್ತಿರುವಾಗಲೇ, ಮೊದಲು ನನ್ನ ಕನಸಿನಲ್ಲಿ ಕಂಡ ಗಬ್ರಿಯೇಲೆಂಬ ವ್ಯಕ್ತಿ ಅಸುರುಸುರಾಗಿ ಹಾರಿ ಬಂದು, ಸಂಧ್ಯಾನೈವೇದ್ಯ ಸಮಯದಲ್ಲಿ ನನ್ನನ್ನು ಸೇರಿ, ನನ್ನೊಂದಿಗೆ ಮಾತಾಡಿ, ಹೀಗೆಂದು ಉಪದೇಶ ಮಾಡಿದನು: 22"ದಾನಿಯೇಲನೇ, ನಿನಗೆ ಜ್ಞಾನಬೋಧೆ ಮಾಡಲು ಈಗ ಬಂದಿದ್ದೇನೆ; 23ನಿನ್ನ ವಿಜ್ಞಾಪನೆಯ ಆರಂಭದಲ್ಲೇ ದೇವರ ಅಪ್ಪಣೆಯಾಯಿತು. ಅದನ್ನು ನಿನಗೆ ತಿಳಿಸಲು ಇಲ್ಲಿಗೆ ಬಂದಿದ್ದೇನೆ. ನೀನು ದೇವರಿಗೆ ಅತಿ ಪ್ರಿಯನು. ಈ ದೈವೋಕ್ತಿಯನ್ನು ಆಲೋಚಿಸು; ಈ ದರ್ಶನವನ್ನು ಗ್ರಹಿಸಿಕೊ:

24"ಅಧರ್ಮವನ್ನು ಕೊನೆಗಾಣಿಸುವುದಕ್ಕೆ ಪಾಪಗಳನ್ನು ತೀರಿಸುವುದಕ್ಕೆ, ಅಪರಾಧವನ್ನು ನಿವಾರಿಸುವುದಕ್ಕೆ, ಸನಾತನ ಧರ್ಮವನ್ನು ಸ್ಥಾಪಿಸುವುದಕ್ಕೆ, ದರ್ಶನವನ್ನೂ ಪ್ರವಾದಿಯ ನುಡಿಯನ್ನೂ ಮುದ್ರೆಹಾಕಿ ಯಥಾರ್ಥಮಾಡುವುದಕ್ಕೆ, ಅತಿಪರಿಶುದ್ಧವಾದುವನ್ನು ಅಭಿಷೇಕಿಸುವುದಕ್ಕೆ ನಿನ್ನ ಜನಕ್ಕೂ ನಿನ್ನ ಪವಿತ್ರ ನಗರಕ್ಕೂ ಏಳೆಪ್ಪತ್ತು ವರ್ಷಗಳು ಕಳೆಯಬೇಕೆಂದು ನಿಷ್ಕರ್ಷೆಯಾಗಿದೆ. 25ಇದನ್ನು ತಿಳಿದು ಮನದಟ್ಟು ಮಾಡಿಕೊ. 'ಹಿಂದಿರುಗಿ ಜೆರುಸಲೇಮನ್ನು ಪುನರ್ ನಿರ್ಮಿಸಿ' ಎಂಬ ದೈವೋಕ್ತಿ ಹೊರಡುವಂದಿನಿಂದ ಪ್ರಭುವಾಗಿ ಅಭಿಷಿಕ್ತನಾದವನು ಬರುವುದರೊಳಗೆ ಏಳು ಸಾರಿ ಏಳು ವರ್ಷಗಳು ಕಳೆಯಬೇಕು. ಅದು ಪುನಃ ಬೀದಿ ಚೌಕಗಳಿಂದಲೂ ಕೋಟೆಕೊತ್ತಲುಗಳಿಂದಲೂ ಕಟ್ಟಲ್ಪಟ್ಟು ಏಳು ಸಾರಿ ಅರವತ್ತೆರಡು ವರ್ಷಗಳು ಇರುವುದು. ಆ ಕಾಲವು ಬಹು ಕಷ್ಟಕರವಾದ ಕಾಲವಾಗಿರುವುದು. 26ಆ ಏಳುಸಾರಿ ಅರವತ್ತೆರಡು ವರ್ಷಗಳು ಮುಗಿದ ಮೇಲೆ ಅಭಿಷಿಕ್ತನನ್ನು ಅನ್ಯಾಯವಾಗಿ ಕೊಲ್ಲುವರು. ದಂಡೆತ್ತಿಬರುವ ರಾಜನ ಜನರು ನಗರವನ್ನೂ ಪವಿತ್ರಾಲಯವನ್ನೂ ಹಾಳುಮಾಡುವರು. ಪ್ರಳಯದಿಂದಲೋ ಎಂಬಂತೆ ನಗರವು ನಾಶವಾಗುವುದು. ಅಂತ್ಯದವರೆಗೆ ಯುದ್ಧವೂ ನಿಶ್ಚಿತ ವಿನಾಶವೂ ಸಂಭವಿಸುವುವು. 27ಆ ರಾಜನು ಏಳು ವರ್ಷಗಳ ಮಟ್ಟಿಗೆ ಬಹು ಜನರೊಂದಿಗೆ ದೃಢವಾದ ಒಡಂಬಡಿಕೆಯನ್ನು ಮಾಡಿಕೊಳ್ಳುವನು. ಈ ಅವಧಿಯ ಅರ್ಧಭಾಗದಲ್ಲಿ ಬಲಿ ನೈವೇದ್ಯಗಳನ್ನು ನಿಲ್ಲಿಸಿಬಿಡುವನು. ದೇವಾಲಯದ ರೆಕ್ಕೆಯ ಮೇಲೆ ಅಸಹ್ಯವಾದುದನ್ನು ಸ್ಥಾಪಿಸಲಾಗುವುದು. ಅವನ್ನು ಅಲ್ಲಿ ಇಟ್ಟು ಅಶುದ್ಧಗೊಳಿಸಿದ ಘಾತುಕನು ನಿಶ್ಚಿತ ಪ್ರಳಯದಲ್ಲಿ ಮುಳುಗುವ ತನಕ ಅವು ಅಲ್ಲೇ ಇರುವುವು."

### ಮಹಾದರ್ಶನ

**10** ಪರ್ಷಿಯದ ರಾಜನಾದ ಸೈರೆಷನ ಆಳ್ವಿಕೆಯ ಮೂರನೇ ವರ್ಷದಲ್ಲಿ ಬೇಲ್ತೆಶಚ್ಚೆರನೆಂಬ ದಾನಿಯೇಲನಿಗೆ ಒಂದು ಸಂಗತಿ ಪ್ರಕಟವಾಯಿತು. ಅದು ಮಹಾ ಹೋರಾಟದ ಸಂಗತಿ, ಸತ್ಯವಾದ ಸಂಗತಿ. ಅದರ ಅರ್ಥವನ್ನು ತಾನು ಕಂಡ ದರ್ಶನದಿಂದ ಮನದಟ್ಟು ಮಾಡಿಕೊಂಡನು.

2 ಆ ದಿನಗಳಲ್ಲಿ ದಾನಿಯೇಲನಾದ ನಾನು ಮೂರು ವಾರ ಒಂದು ವ್ರತವನ್ನು ಕೈಗೊಂಡಿದ್ದೆ. 3ಆ ಮೂರು ವಾರ ಮುಗಿಯುವ ತನಕ ನಾನು ಯಾವ ರುಚಿಪದಾರ್ಥವನ್ನೂ ತಿನ್ನಲಿಲ್ಲ. ಮಾಂಸವನ್ನಾಗಲಿ, ದ್ರಾಕ್ಷಾರಸವನ್ನಾಗಲಿ ಬಾಯಲ್ಲಿ ಇಡಲಿಲ್ಲ. ಎಣ್ಣೆಯನ್ನೂ ಹಚ್ಚಿಕೊಳ್ಳಲಿಲ್ಲ.

4 ಮೊದಲನೆಯ ತಿಂಗಳಿನ ಇಪ್ಪತ್ನಾಲ್ಕನೆಯ ದಿನದಲ್ಲಿ ನಾನು ಟೈಗ್ರಿಸ್ ಎಂಬ ಮಹಾನದಿಯ ದಡದ ಮೇಲೆ ನಿಂತಿದ್ದೆ. 5ಕಣ್ಣೆತ್ತಿ ನೋಡಲು, ನಾರುಬಟ್ಟೆಯನ್ನು ಹೊದ್ದುಕೊಂಡಿದ್ದ, ಊಫಜಿನ ಬಂಗಾರದ ಪಟ್ಟಿಯನ್ನು ಸೊಂಟಕ್ಕೆ ಬಿಗಿದುಕೊಂಡಿದ್ದ, ಒಬ್ಬ ವ್ಯಕ್ತಿ ನನಗೆ ಕಾಣಿಸಿದ. 6ಅವನ ಶರೀರ ಸುವರ್ಣರತ್ನದ ಹಾಗೆ ಕಂಗೊಳಿಸಿತು. ಅವನ ಮುಖ ಮಿಂಚಿನಂತೆ ಹೊಳೆಯಿತು. ಅವನ ಕಣ್ಣುಗಳು ಉರಿಯುವ ಪಂಜುಗಳೋಪಾದಿಯಲ್ಲಿ ಫಳಫಳಿಸಿದವು. ಅವನ ಕೈಕಾಲುಗಳು ಬೆಳಗಿದ ಕಂಚಿನ ಹಾಗೆ ಥಳಿಥಳಿಸಿದವು. ಅವನ ಮಾತಿನ ಶಬ್ದ ಜನಸಂದಣಿಯ ಕೋಲಾಹಲದಂತಿತ್ತು.

7 ಆ ದರ್ಶನವನ್ನು ಕಂಡವನು ದಾನಿಯೇಲನಾದ ನಾನೊಬ್ಬನೇ. ನನ್ನೊಂದಿಗೆ ಇದ್ದವರು ಅದನ್ನು ಕಾಣಲಿಲ್ಲ. ಅವರು ಭಯಭ್ರಾಂತರಾಗಿ ಓಡಿಹೋಗಿ ಅವಿತುಕೊಂಡರು. 8ನಾನು ಒಂಟಿಯಾಗಿ ಉಳಿದು ಆ ಅದ್ಭುತವನ್ನು ಕಂಡೆ. ನನ್ನ ಶಕ್ತಿಯೆಲ್ಲಾ ಕರಗಿಹೋಯಿತು. ನನ್ನ ಗಾಂಭೀರ್ಯ ಅಳಿಯಿತು. ನಾನು ನಿತ್ರಾಣನಾದೆ. 9ಆದರೂ ಅವನು ಮಾತಾಡುವ ಶಬ್ದ ಕೇಳಿಸಿತು. ಅದು ನನ್ನ ಕಿವಿಗೆ ಬಿದ್ದಾಗ ನಾನು ಮೈಮರೆತು ಅಧೋಮುಖವಾಗಿ ಅಡ್ಡಬಿದ್ದೆ. 10ಆಗ ಯಾರದೋ ಕೈ ನನ್ನನ್ನು ಮುಟ್ಟಿದಂತಾಯಿತು. ನಾನು ಗಡಗಡನೆ ನಡುಗುತ್ತಾ ಅಂಗೈಗಳನ್ನೂ ಮೊಣಕಾಲುಗಳನ್ನೂ ಊರಿ ನಿಲ್ಲುವಂತೆ ಮಾಡಿತು.

11 ಆಗ ಅವನು ನನಗೆ, "ಅತಿಪ್ರಿಯ ದಾನಿಯೇಲನೇ, ನಾನು ನುಡಿಯುವ ಮಾತುಗಳನ್ನು ಗ್ರಹಿಸು. ಎದ್ದು ನಿಂತುಕೋ. ನಾನು ನಿನ್ನ ಬಳಿಗೆ ಕಳುಹಿಸಲ್ಪಟ್ಟವನು," ಎಂದನು.

12 ಆಮೇಲೆ ಅವನು ನನಗೆ, "ದಾನಿಯೇಲನೇ, ಭಯಪಡಬೇಡ! ಏಕೆಂದರೆ ನೀನು ನಿನ್ನ ದೇವರ ಮುಂದೆ ವಿನಮ್ರಪೂರ್ವಕವಾಗಿ (ದೈವಸಂಕಲ್ಪವನ್ನು) ಅರ್ಥಮಾಡಿಕೊಳ್ಳಲು ಪ್ರಯತ್ನಿಸಿದ ಮೊದಲನೆಯ ದಿನದಲ್ಲೇ ನಿನ್ನ ಪ್ರಾರ್ಥನೆ ದೇವರಿಗೆ ಮುಟ್ಟಿತು. ಆ ಪ್ರಾರ್ಥನೆಯ ನಿಮಿತ್ತವೇ ನಾನು ಬಂದಿದ್ದೇನೆ. 13ಪರ್ಷಿಯ ರಾಜ್ಯದ ಕಾವಲುದೂತನು ಇಪ್ಪತ್ತೊಂದು ದಿನ ನನ್ನನ್ನು ಎದುರಿಸಿ ನಿಂತನು. ಆದರೆ ಪ್ರಧಾನ ದೂತರಲ್ಲಿ ಒಬ್ಬನಾದ ಮಿಕಾಯೇಲನು ನನ್ನ ಸಹಾಯಕ್ಕೆ ಬಂದನು. ಅಲ್ಲಿನ ಪರ್ಷಿಯ ರಾಜರ ಸಂಗಡ ಹೋರಾಡಲು ಅವನನ್ನು ಬಿಟ್ಟು ಬಂದಿದ್ದೇನೆ. 14ಅಂತ್ಯಕಾಲದಲ್ಲಿ ನಿನ್ನ ಜನರಿಗೆ ಬರಲಿರುವ ಗತಿಯನ್ನು ನಿನಗೆ ತಿಳಿಸುವುದಕ್ಕೋಸ್ಕರ ಬಂದೆ. ಆ ಕಾಲದ ಸಂಗತಿಯನ್ನು ವ್ಯಕ್ತಪಡಿಸುವ ಇನ್ನೊಂದು ದರ್ಶನವಿದೆ," ಎಂದು ಹೇಳಿದನು.

15 ಅವನು ಈ ಮಾತನ್ನು ನನಗೆ ಹೇಳಿದ ಕೂಡಲೆ ನಾನು ಮುಖವನ್ನು ತಗ್ಗಿಸಿಕೊಂಡು ನಿಶ್ಶಬ್ದನಾದೆ. 16ಆಗ ನರರೂಪ ಹೊಂದಿದ್ದ ಒಬ್ಬನು ನನ್ನ ತುಟಿಗಳನ್ನು ಮುಟ್ಟಿದ. ನಾನು ಬಾಯಿತೆರೆದು ನನ್ನ ಮುಂದೆ ನಿಂತಿದ್ದವನಿಗೆ, "ಎನ್ನೊಡೆಯಾ, ಈ ದರ್ಶನದಿಂದ ವೇದನೆಗಳು ನನ್ನನ್ನು ಆಕ್ರಮಿಸಿವೆ, ನಾನು ನಿತ್ರಾಣನಾಗಿದ್ದೇನೆ. 17ನನ್ನೊಡೆಯನ ದಾಸನಾದ ನನ್ನಂಥವನು ಎನ್ನೊಡೆಯರಾದ ತಮ್ಮಂಥವರ ಸಂಗಡ ಹೇಗೆ ಮಾತಾಡಬಹುದು? ಈಗ ಶಕ್ತಿಯನ್ನೆಲ್ಲಾ ಕಳೆದುಕೊಂಡಿದ್ದೇನೆ; ನನ್ನಲ್ಲಿ ಉಸಿರೇ ಇಲ್ಲವಾಗಿದೆ," ಎಂದು ಹೇಳಿದೆ.

18 ಮನುಷ್ಯರೂಪ ಹೊಂದಿದ್ದ ಆ ವ್ಯಕ್ತಿ ಪುನಃ ನನ್ನನ್ನು ಮುಟ್ಟಿ ಬಲಪಡಿಸಿದ. 19ಬಳಿಕ ಆ ವ್ಯಕ್ತಿ ನನಗೆ, "ಅತಿಪ್ರಿಯನೇ, ಭಯಪಡಬೇಡ. ನಿನಗೆ ಶಾಂತಿ ಸಮಾಧಾನವಿರಲಿ! ಧೈರ್ಯತಂದುಕೊ! ಧೈರ್ಯತಂದುಕೊ!" ಎಂದು ಹೇಳಿದ. ಅವನ ಈ ಮಾತನ್ನು ಕೇಳಿದ ಕೂಡಲೆ ನಾನು ಧೈರ್ಯದಿಂದ, "ಎನ್ನೊಡೆಯಾ, ಮಾತಾಡು. ನನಗೆ ಧೈರ್ಯತುಂಬಿರುವೆ," ಎಂದು ಅರಿಕೆಮಾಡಿದೆ.

20 ಅವನು ನನಗೆ ಹೀಗೆಂದು ಹೇಳಿದ: "ನಾನು ನಿನ್ನ ಬಳಿಗೆ ಏಕೆ ಬಂದೆನೆಂಬುದು ನಿನಗೆ ಗೊತ್ತಲ್ಲವೇ? ಈಗ ನಾನು ಪರ್ಷಿಯ ರಾಜ್ಯದ ಕಾವಲುದೂತನೊಂದಿಗೆ ಹೋರಾಡಲು ಹಿಂದಿರುಗಬೇಕು. ನಾನು ಆ ಹೋರಾಟವನ್ನು ತೀರಿಸಿದ ಕೂಡಲೆ ಗ್ರೀಕ್ ರಾಜ್ಯದ ಕಾವಲುದೂತನು ಎದುರು ಬೀಳುವನು. 21ಸತ್ಯಗ್ರಂಥದಲ್ಲಿ ಲಿಖಿತವಾದುದನ್ನು ಈಗ ನಿನಗೆ ತಿಳಿಸುತ್ತೇನೆ. ಇವರಿಬ್ಬರೊಂದಿಗೆ ಹೋರಾಡುವಲ್ಲಿ ನಿಮ್ಮ ಕಾವಲುದೂತನಾದ ಮಿಕಾಯೇಲನ ಹೊರತು ನನಗೆ ಬೆಂಬಲಿಗರಾಗ ತಕ್ಕವರು ಇನ್ನಾರೂ ಇಲ್ಲ.

**11** “ಮೇದ್ಯನಾದ ದಾರ್ಯಾವೆಷನ ಆಳ್ವಿಕೆಯ ಮೊದಲನೆಯ ವರ್ಷದಲ್ಲಿ ನಾನೇ ಮಿಕಾಯೇಲನಿಗೆ
ಬೆಂಬಲಕೊಟ್ಟು ಆಶ್ರಯನಾಗಿ ನಿಂತೆ.
2 “ಈಗ ಸತ್ಯಾಂಶವನ್ನು ತಿಳಿಸುತ್ತೇನೆ, ಕೇಳು: ಪರ್ಷಿಯ ದೇಶದಲ್ಲಿ ಇನ್ನೂ ಮೂವರು ರಾಜರು
ಏಳುವರು. ನಾಲ್ಕನೆಯ ರಾಜನು ಎಲ್ಲರಿಗಿಂತಲೂ ಅಧಿಕ ಧನವಂತನಾಗಿರುವನು. ಅವನು ತನ್ನ ಧನದಿಂದ
ಪ್ರಬಲನಾಗಿ ಗ್ರೀಕ್ ರಾಜ್ಯಕ್ಕೆ ವಿರುದ್ಧ ತನ್ನ ಬಲವನ್ನೆಲ್ಲ ಪ್ರಯೋಗಿಸುವನು.
3 “ಅನಂತರ ಪರಾಕ್ರಮಶಾಲಿಯಾದ ಒಬ್ಬ ರಾಜನು ಎದ್ದು ಮಹಾಪ್ರಭುತ್ವದಿಂದ ಆಳುತ್ತಾ ತನ್ನ
ಇಷ್ಟಾರ್ಥಗಳನ್ನು ಸಾಧಿಸಿಕೊಳ್ಳುವನು. 4ಆದರೆ ಅವನು ತಲೆಯೆತ್ತಿದ ಮೇಲೆ ಅವನ ರಾಜ್ಯ ಒಡೆದು ನಾಲ್ಕು
ದಿಕ್ಕುಗಳಿಗೂ ಸೀಳಿ ಹೋಗುವುದು. ಅದು ಅವನ ಸಂತತಿಗೆ ಭಾಗವಾಗದು. ಅವನ ಆಳ್ವಿಕೆಯಲ್ಲಿ ಪ್ರಬಲವಾಗಿ
ಇದ್ದಂತೆ ಅದು ಇನ್ನು ಪ್ರಬಲವಾಗದು.
5 “ದಕ್ಷಿಣ ದಿಕ್ಕಿನ ರಾಜನು ಮತ್ತು ಅವನ ದಳವಾಯಿಗಳಲ್ಲಿ ಒಬ್ಬನು ಶಕ್ತಿಶಾಲಿಗಳಾಗುವರು.
ದಳವಾಯಿ ರಾಜನಿಗಿಂತ ಶಕ್ತಿಶಾಲಿಯಾಗಿ ಪ್ರಭುತ್ವಕ್ಕೆ ಬರುವನು. ಅವನ ರಾಜ್ಯ ದೊಡ್ಡ ರಾಜ್ಯವಾಗುವುದು.
6ಕೆಲವು ವರ್ಷಗಳಾದ ಮೇಲೆ ಅವರು ಒಪ್ಪಂದ ಮಾಡಿಕೊಳ್ಳುವರು. ಇದನ್ನು ದೃಢಪಡಿಸಿಕೊಳ್ಳಲು ಆ
ದಕ್ಷಿಣ ರಾಜನ ಕುಮಾರಿ ಉತ್ತರ ದಿಕ್ಕಿನ ರಾಜನನ್ನು ಸೇರುವಳು. ಆದರೂ ತನ್ನ ಸಂಬಂಧವನ್ನು
ಉಳಿಸಿಕೊಳ್ಳನು. ಅವನೂ ಅವನ ಸಂತಾನವೂ ನಿಲ್ಲವು. ಅವಳು, ಅವಳನ್ನು ಕರೆತಂದವರು, ಪಡೆದವನು,
ಕರೆದುಕೊಂಡವನು ಇವರೆಲ್ಲರೂ ಅಂದು ನಾಶಕ್ಕೀಡಾಗುವರು. 7ಅನಂತರ ಅವಳು ಹುಟ್ಟಿದ ಬುಡದಿಂದ
ಒಡೆದ ಸಸಿಯೊಂದು ಅದರ ಸ್ಥಾನದಲ್ಲಿ ನಿಲ್ಲುವುದು. ಉತ್ತರ ರಾಜನ ಸೈನ್ಯಕ್ಕೆ ವಿರುದ್ಧವಾಗಿ ಹೊರಟು,
ಅವನ ದುರ್ಗದೊಳಗೆ ನುಗ್ಗಿ, ಅಲ್ಲಿನವರಿಗೆ ಮಾಡುವಷ್ಟೂ ಮಾಡಿ ಗೆಲ್ಲುವನು. 8ಅವರ ದೇವರುಗಳನ್ನೂ
ಎರಕದ ಬೊಂಬೆಗಳನ್ನೂ ಒಳ್ಳೊಳ್ಳೆ ಬೆಳ್ಳಿ ಬಂಗಾರದ ಪಾತ್ರೆಗಳನ್ನೂ ಸೂರೆಮಾಡಿಕೊಂಡು ಈಜಿಪ್ಟಿಗೆ
ಹಿಂದಿರುಗುವನು. ಕೆಲವು ವರ್ಷಗಳ ತನಕ ಉತ್ತರ ರಾಜನ ಗೊಡವೆಗೆ ಹೋಗನು. 9ಬಳಿಕ ಉತ್ತರ
ರಾಜನು ದಕ್ಷಿಣ ರಾಜನ ರಾಜ್ಯದ ಮೇಲೆ ದಾಳಿಮಾಡುವನು. ಆದರೆ ಅವನು ಸ್ವದೇಶಕ್ಕೆ
ಹಿಂದಿರುಗಬೇಕಾಗುವುದು.
10 “ಆಮೇಲೆ ಉತ್ತರ ರಾಜನ ಮಕ್ಕಳು ಯುದ್ಧಸನ್ನಾಹ ಮಾಡಿ ಮಹಾವ್ಯೂಹವಾದ ದೊಡ್ಡ
ಸೈನ್ಯವನ್ನು ಕೂಡಿಸುವರು. ಆ ಸೈನ್ಯ ಬೆಳೆದು ತುಂಬಿತುಳುಕುವ ಪ್ರವಾಹದಂತೆ ಹಬ್ಬಿಕೊಳ್ಳುವುದು. ಅವರು
ಮತ್ತೆ ಯುದ್ಧಕ್ಕೆ ಹೊರಟು ದಕ್ಷಿಣರಾಜನ ದುರ್ಗದವರೆಗೆ ನುಗ್ಗುವರು. 11ಆಗ ದಕ್ಷಿಣರಾಜನು
ಕ್ರೋಧದಿಂದುರಿಯುತ್ತಾ ಹೊರಟು ಬಂದು ಉತ್ತರ ರಾಜನ ಸಂಗಡ ಯುದ್ಧ ಮಾಡುವನು. ಉತ್ತರ
ರಾಜನು ಮಹಾವ್ಯೂಹವನ್ನು ಕಟ್ಟಿದರೂ ಅದೆಲ್ಲವು ದಕ್ಷಿಣ ರಾಜನ ಕೈವಶವಾಗುವುದು. 12ಇದರಿಂದಾಗಿ
ಅವನು ಗರ್ವಿಷ್ಠನಾಗುವನು. ಲಕ್ಷಾಂತರ ಸೈನಿಕರನ್ನು ಸದೆಬಡಿದಿದ್ದರೂ ಪ್ರಾಬಲ್ಯಕ್ಕೆ ಬಾರನು.
13 “ತರುವಾಯ ಉತ್ತರ ರಾಜನು ಹಿಂದಿನ ದಂಡಿಗಿಂತ ದೊಡ್ಡ ದಂಡನ್ನು ಮತ್ತೆ ಕೂಡಿಸಿಕೊಂಡು
ಬಹಳ ವರ್ಷಗಳು ಕಳೆದನಂತರ ಮಹಾಸೈನ್ಯಸಮೇತ ಅಧಿಕ ಸನ್ನಾಹದಿಂದ ಬರುವನು. 14ಆ ಕಾಲದಲ್ಲಿ
ಅನೇಕರು ದಕ್ಷಿಣ ರಾಜನಿಗೆ ಎದುರು ನಿಲ್ಲುವರು. ಇದಲ್ಲದೆ, ನಿನ್ನ ಸ್ವಂತ ಜನರಲ್ಲಿ ಹಿಂಸಾಪ್ರಿಯರು ಆ
ದರ್ಶನವನ್ನು ನಿಜವಾಗಿಸಬೇಕೆಂದು ದಂಗೆ ಏಳುವರು. ಆದರೆ ಸೋತುಹೋಗುವರು. 15ಉತ್ತರ ರಾಜನು
ಬಂದು, ಮುತ್ತಿಗೆ ಹಾಕಿ, ಕೋಟೆ ಕೊತ್ತಲದ ನಗರವನ್ನು ಹಿಡಿಯುವನು, ದಕ್ಷಿಣದ ಭುಜಬಲವು ಅವನನ್ನು
ನಿಲ್ಲಿಸಲಾರದು. ಎದುರಿಸುವ ಯಾವ ಶಕ್ತಿಯೂ ಇರದು. 16ದಕ್ಷಿಣದ ರಾಜನಿಗೆ ವಿರುದ್ಧ ಬರುವವನು
ಇಚ್ಛಾನುಸಾರ ವರ್ತಿಸುವನು. ಅವನನ್ನು ಎದುರಿಸಬಲ್ಲವನು ಒಬ್ಬನೂ ಇರನು. ಆ ‘ಚೆಲುವಿನ ನಾಡನ್ನೂ’
ಗೆದ್ದು ಅದನ್ನು ಪೂರ್ತಿಯಾಗಿ ತನ್ನ ಕೈ ಹಿಡಿತದಲ್ಲಿ ಇಟ್ಟುಕೊಳ್ಳುವನು.
17 “ಉತ್ತರದ ರಾಜನು ದಕ್ಷಿಣರಾಜನ ಮೇಲೆ ಬೀಳಬೇಕೆಂದು ನಿರ್ಧರಿಸಿ ತನ್ನ ರಾಜ್ಯದ ಸಮಸ್ತ
ಶಕ್ತಿಸಮೇತನಾಗಿ ಹೊರಟು ಅವನ ಸಂಗಡ ಒಪ್ಪಂದ ಮಾಡಿಕೊಳ್ಳುವನು. ಅವನ ರಾಜ್ಯದ ಹಾನಿಗಾಗಿಯೆ
ಹೆಣ್ಣನ್ನು ಕೊಡುವನು. ಆದರೆ ಈ ಉಪಾಯ ಫಲಿಸದು. ಅದರಿಂದ ತನಗೂ ಅನುಕೂಲವಾಗದು.

18ಆಮೇಲೆ ಅವನು ಕರಾವಳಿಯ ನಾಡುಗಳ ಕಡೆಗೆ ಕಣ್ಣಿಟ್ಟು ಅಲ್ಲಿಯ ಅನೇಕ ನಾಡುಗಳನ್ನು ಆಕ್ರಮಿಸುವನು. ಆದರೆ ದಳವಾಯಿ ಒಬ್ಬನು ಅವನ ಅಟ್ಟಹಾಸವನ್ನು ತಡೆಗಟ್ಟುವನು. ಅವನು ಮಾಡುವ ಹಾನಿ ಅವನಿಗೇ ತಗಲುವಂತೆ ಮಾಡುವನು. 19ಬಳಿಕ ರಾಜನು ಸ್ವದೇಶದ ದುರ್ಗಗಳ ಕಡೆಗೆ ಹಿಂದಿರುಗುವನು. ಆದರೆ ಎಡವಿಬಿದ್ದು ಅಳಿದು ಹೋಗುವನು.

20 "ಅವನ ಸ್ಥಾನದಲ್ಲಿ ಮತ್ತೊಬ್ಬನು ರಾಜ್ಯವಾಳುವನು. ಇವನು ರಾಜ್ಯದಲ್ಲಿನ ಶಿರೋಮಣಿಯಂಥ ನಾಡನ್ನೆಲ್ಲ ದೋಚಿಕೊಳ್ಳಬಲ್ಲ ಉದ್ಯೋಗಿಯನ್ನು ನೇಮಿಸುವನು. ಆದರೆ ಕೆಲವೇ ದಿನಗಳಲ್ಲಿ ಅವನು ಕದನದಿಂದ ಅಲ್ಲ, ಕೋಪದಿಂದ ಅಲ್ಲ, ಹಾಗೆಯೇ ಮಡಿದು ಹೋಗುವನು.

### ಸಿರಿಯಾದ ದುಷ್ಟ ರಾಜ

21 "ಅವನ ಸ್ಥಾನದಲ್ಲಿ ನೀಚನೊಬ್ಬನು ಏಳುವನು. ಅವನು ರಾಜಪದವಿಗೆ ಹಕ್ಕುದಾರನಲ್ಲ. ಆದರೂ ನೆಮ್ಮದಿಯ ಕಾಲದಲ್ಲಿ ನಯವಾದ ನುಡಿಗಳಿಂದ ರಾಜ್ಯವನ್ನು ಪಡೆದುಕೊಳ್ಳುವನು. 22ಅವನನ್ನು ಎದುರಿಸುವ ದೊಡ್ಡ ದೊಡ್ಡ ಸೈನ್ಯಗಳು ಹಾಗು ದೇವರ ಪ್ರಧಾನ ಯಾಜಕನು ಅವನ ಸೈನ್ಯ ಪ್ರವಾಹಕ್ಕೆ ಸಿಕ್ಕಿ ಅದರಲ್ಲಿ ಮುಳುಗಿ ನಾಶವಾಗುವರು. 23ಅವನ ಸಂಗಡ ಒಪ್ಪಂದ ಮಾಡಿಕೊಂಡವನಿಗೆ ಕೂಡಲೆ ಮೋಸ ಮಾಡುವನು. ಕೊಂಚ ಜನರ ಸಹಾಯದಿಂದಲೆ ಏಳಿಗೆಯಾಗಿ ಬಲಗೊಳ್ಳುವನು. 24ನೆಮ್ಮದಿಯ ಕಾಲದಲ್ಲಿ ಸಂಸ್ಥಾನದ ಫಲವತ್ತಾದ ಪ್ರದೇಶಗಳ ಮೇಲೆ ದಾಳಿಮಾಡುವನು. ತಂದೆತಾತಂದಿರು ಮಾಡದಂಥ ಕಾರ್ಯಗಳನ್ನು ಮಾಡುವನು. ಸೂರೆ-ಸುಲಿಗೆ-ಕೊಳ್ಳೆ ಹೊಡೆದವುಗಳನ್ನು ತನ್ನವರಿಗೆ ಚೆಲ್ಲಿ ಬಿಡುವನು. ಕೋಟೆಗಳನ್ನು ಹಿಡಿಯುವ ಕುತಂತ್ರಗಳನ್ನು ಕೊನೆಯವರೆಗೂ ಮುಂದುವರೆಸುವನು.

25 "ಅವನು ಧೈರ್ಯತಂದುಕೊಂಡು, ದೊಡ್ಡ ದಂಡೆತ್ತಿ, ದಕ್ಷಿಣರಾಜನಿಗೆ ವಿರುದ್ಧ ತನ್ನ ರಾಜ್ಯದ ಶಕ್ತಿಯನ್ನೆಲ್ಲ ಕೂಡಿಸುವನು. ದಕ್ಷಿಣ ರಾಜನಾದರೋ ಅತ್ಯಧಿಕ ಬಲವುಳ್ಳ ಮಹಾಸೈನ್ಯ ಸಮೇತನಾಗಿ ಯುದ್ಧಕ್ಕೆ ಹೊರಡುವನು. ಆದರೆ ಜಯಗಳಿಸನು. ಕುಯುಕ್ತಿಗಳಿಗೆ ಗುರಿಯಾಗಿ ಸೋಲನ್ನು ಅಪ್ಪಬೇಕಾಗುವುದು. 26ಅವನ ಮೃಷ್ಟಾನ್ನ ತಿಂದವರೇ ಅವನಿಗೆ ಎರಡು ಬಗೆಯುವರು. ಅವನ ಸೈನ್ಯವು ಕೊಚ್ಚಿಕೊಂಡು ಹೋಗುವುದು. ಬಹುಜನರು ಹತರಾಗಿ ಬೀಳುವರು. 27ಆ ಇಬ್ಬರು ರಾಜರು ಪರಸ್ಪರ ಕೇಡಿನ ಮನಸ್ಸು ಉಳ್ಳವರಾಗಿ ಸಹಪಂಕ್ತಿಯಲ್ಲಿ ಕುಳಿತಿದ್ದರೂ ಸುಳ್ಳುಪೊಳ್ಳು ಮಾತಾಡಿಕೊಳ್ಳುವರು. ಆದರೆ ನಿಶ್ಚಿತಕಾಲ ಬರುವ ತನಕ ಅವರಿಂದ ಏನೂ ಸಾಧಿಸಲಾಗದು. 28ಅನಂತರ ಉತ್ತರದ ಆ ನೀಚ ರಾಜನು ಬಹು ಆಸ್ತಿಯನ್ನು ಕೊಳ್ಳೆಹೊಡೆದು ಸ್ವದೇಶಕ್ಕೆ ಹಿಂತಿರುಗುವನು. ಅವನ ಮನಸ್ಸು ಪವಿತ್ರ ಒಡಂಬಡಿಕೆಗೆ ವಿರುದ್ಧವಾಗಿರುವುದು. ಇಷ್ಟ ಬಂದ ಹಾಗೆ ವರ್ತಿಸಿ ಮತ್ತೆ ಸ್ವದೇಶವನ್ನು ಸೇರುವನು.

29 "ನಿಶ್ಚಿತ ಕಾಲದಲ್ಲಿ ಪುನಃ ದಕ್ಷಿಣ ದೇಶದ ಮೇಲೆ ದಾಳಿಮಾಡುವನು. ಆದರೆ ಮೊದಲು ಆದಂತೆಯೇ ಎರಡನೇಯ ಸಲ ಆಗದು. 30ಅವನಿಗೆ ವಿರುದ್ಧವಾಗಿ ರೋಮಿನ ಹಡಗುಗಳು ಬರಲು ಅವನು ಎದೆಗುಂದಿ ಹಿಂದಿರುಗುವನು. ಪವಿತ್ರ ಒಡಂಬಡಿಕೆಯ ವಿರುದ್ಧ ಮತ್ಸರಗೊಂಡು ಸಾಧ್ಯವಾದಷ್ಟೂ ಹಾನಿಮಾಡುವನು. ಸ್ವದೇಶಕ್ಕೆ ಹಿಂದಿರುಗಿ ಪವಿತ್ರ ಒಡಂಬಡಿಕೆಯನ್ನು ತೊರೆದವರಿಗೆ ಆದರ ತೋರುವನು. 31ಅವನು ಕೂಡಿಸುವ ಸೈನ್ಯವು ಆಶ್ರಯದುರ್ಗವಾದ ಪವಿತ್ರಾಲಯವನ್ನು ಹೊಲೆಗೆಡಿಸುವುದು. ಅನುದಿನದ ಬಲಿಯನ್ನು ನಿಲ್ಲಿಸುವುದು. ವಿನಾಶಕರ ವಿಕಟ ಮೂರ್ತಿಯನ್ನು ಪ್ರತಿಷ್ಠಾಪಿಸುವುದು. 32ಒಡಂಬಡಿಕೆಯ ದ್ರೋಹಿಗಳು ಅವನ ನಯನುಡಿಗೆ ಮಾರುಹೋಗುವರು. ತಮ್ಮ ದೇವರನ್ನು ಅರಿತವರೋ ದೃಢಚಿತ್ತರಾಗಿ ಕೃತಾರ್ಥರಾಗುವರು. 33ಜನರಲ್ಲಿನ ಬುದ್ಧಿವಂತ ನಾಯಕರು ಅನೇಕರಿಗೆ ಬುದ್ಧಿಹೇಳುವರು. ಕೆಲಕಾಲ ಅವರು ಕತ್ತಿ-ಬೆಂಕಿ-ಸೆರೆ-ಸೂರೆಗಳಿಗೆ ತುತ್ತಾಗುವರು. 34ಹೀಗಾಗುವಾಗ ಅವರಿಗೆ ಅಲ್ಪಸ್ವಲ್ಪ ಸಹಾಯ ದೊರೆಯುವುದು. ಆ ಬಳಿಕ ಬಹುಮಂದಿ ನಯನವಿರಾದ ಮಾತುಗಳನ್ನಾಡುತ್ತಾ ಅವರನ್ನು ಸೇರಿಕೊಳ್ಳುವರು. 35ಅಂತ್ಯಕಾಲದವರೆಗೆ ಬುದ್ಧಿವಂತ ನಾಯಕರಲ್ಲಿ ಕೆಲವರು ಸಾವಿಗೆ ತುತ್ತಾಗುವರು. ಇದರಿಂದ ಜನರು ಶೋಧಿಸಲ್ಪಟ್ಟು, ಶುದ್ಧಿಹೊಂದಿ ಶುಭ್ರರಾಗುವರು. ಅಂತ್ಯವು ಕ್ಲುಪ್ತಕಾಲದಲ್ಲೇ ಬರುವುದು.

36 "(ಉತ್ತರದ) ರಾಜನು ಮನಸ್ಸು ಬಂದ ಹಾಗೆ ನಡೆದು ತಾನು ಎಲ್ಲ ದೇವರುಗಳಿಗಿಂತಲೂ ದೊಡ್ಡವನೆಂದು ತನ್ನನ್ನೇ ಹೆಚ್ಚಿಸಿಕೊಂಡು ಗರ್ವಿಷ್ಠನಾಗುವನು. ದೇವಾಧಿದೇವರನ್ನು ಅತಿಯಾಗಿ

ದೂಷಿಸುವನು. ನಿಮ್ಮ ಮೇಲಿನ ದೈವಕೋಪ ತೀರುವ ತನಕ ಅವನು ವೃದ್ಧಿಯಾಗುವನು. ದೈವಸಂಕಲ್ಪ
ನೆರವೇರಲೇಬೇಕು. 37ಅವನು ತನ್ನ ಪೂರ್ವಜರ ದೇವರನ್ನಾಗಲಿ, ಮಹಿಳೆಯರು ಮೋಹಿಸುವ
ದೇವರನ್ನಾಗಲಿ, ಯಾವ ದೇವರನ್ನೇ ಆಗಲಿ, ಲಕ್ಷಿಸನು. ಎಲ್ಲ ದೇವರುಗಳಿಗಿಂತ ತನ್ನನ್ನೇ ಹೆಚ್ಚಿಸಿಕೊಳ್ಳುವನು.
38ಕುಲದೇವರಿಗೆ ಬದಲಾಗಿ ದುರ್ಗದೇವರನ್ನು ಘನಪಡಿಸುವನು. ಪೂರ್ವಜರಿಗೆ ತಿಳಿಯದ ದೇವರನ್ನು
ಬೆಳ್ಳಿಬಂಗಾರದಿಂದಲೂ ರತ್ನಗಳಿಂದಲೂ ಅಮೂಲ್ಯ ಕೊಡುಗೆಗಳಿಂದಲೂ ಗೌರವಿಸುವನು. 39ಅನ್ಯದೇವರ
ಸಹಾಯದಿಂದ ಬಲವಾದ ಕೋಟೆಗಳನ್ನು ಆಕ್ರಮಿಸುವನು. ತನಗೆ ಮೆಚ್ಚುಗೆಯಾದವರನ್ನು ಹೆಚ್ಚಾಗಿ
ಸತ್ಕರಿಸುವನು. ಅವರನ್ನು ಬಹು ಜನರ ಮೇಲೆ ಅಧಿಕಾರಿಗಳನ್ನಾಗಿ ನೇಮಿಸುವನು. ಹಣಕ್ಕಾಗಿ ದೇಶವನ್ನೇ
ಹಂಚಿಬಿಡುವನು.

### ಅಂತ್ಯದ ಕಾಲ

40 "ಅಂತ್ಯಕಾಲದಲ್ಲಿ ದಕ್ಷಿಣರಾಜನು ಉತ್ತರ ರಾಜನ ಮೇಲೆ ಬೀಳುವನು. ಆದರೆ ಉತ್ತರ ರಾಜನು
ರಥಾಶ್ವಬಲಗಳಿಂದಲೂ ಬಹು ನಾವೆಗಳಿಂದಲೂ ಕೂಡಿದವನಾಗಿ ದಕ್ಷಿಣ ರಾಜನ ಮೇಲೆ ಧಾಳಿಮಾಡಿ
ನಾಡುನಾಡುಗಳನ್ನು ನುಗ್ಗಿ, ಪ್ರವಾಹದಂತೆ ಹರಡಿಕೊಳ್ಳುವನು. 41ಆ 'ಚೆಲುವಿನ ನಾಡಿಗೂ' ನುಗ್ಗುವನು.
ಅನೇಕ ಸೀಮೆಗಳು ಅವನಿಂದ ನಾಶವಾಗುವುವು. ಆದರೆ ಎದೋಮ್ಯರು, ಮೋವಾಬ್ಯರು, ಅಮ್ಮೋನಿನ
ಹೆಚ್ಚಿನ ಭಾಗದವರು ಅವನ ಕೈಯಿಂದ ತಪ್ಪಿಸಿಕೊಳ್ಳುವರು. 42ಬೇರೆ ದೇಶಗಳ ಮೇಲೂ ಕೈಮಾಡುವನು:
ಈಜಿಪ್ಟ್ ದೇಶವು ಅವನ ಕೈಯಿಂದ ತಪ್ಪಿಸಿಕೊಳ್ಳದು. 43ಬೆಳ್ಳಿ ಬಂಗಾರಗಳ ನಿಧಿನಿಕ್ಷೇಪಗಳನ್ನು ಹಾಗು
ಈಜಿಪ್ಟಿನ ಒಳ್ಳೊಳ್ಳೆಯ ವಸ್ತುಗಳೆಲ್ಲವನ್ನು ವಶಮಾಡಿಕೊಳ್ಳುವನು. ಲಿಬ್ಯ ಮತ್ತು ಸುಡಾನಿನವರು ಅವನನ್ನು
ಹಿಂಬಾಲಿಸುವರು. 44ಹೀಗಿರಲು ಪೂರ್ವದಿಂದ ಮತ್ತು ಉತ್ತರದಿಂದ ಬರುವ ಸುದ್ದಿ ಅವನನ್ನು
ಬಾಧಿಸುವುದು. ಅವನು ಅತಿರೋಷಗೊಂಡು ಬಹುಜನರನ್ನು ಧ್ವಂಸಿಸಿ ನಿರ್ನಾಮಮಾಡಲು ಹೊರಡುವನು.
45ಕಡಲಿಗೂ ಚೆಲುವಿನ ಪರಿಶುದ್ಧ ಪರ್ವತಕ್ಕೂ ನಡುವೆ ಅರಮನೆಯಂಥ ಗುಡಾರವನ್ನು ಹಾಕಿಸುವನು.
ಆದರೂ ಸಹಾಯಕ್ಕೆ ಯಾರೂ ಇಲ್ಲದವನಾಗಿ ಸಾಯುವನು.

**12** "ಆ ಕಾಲದಲ್ಲಿ ನಿನ್ನ ಜನರ ಪಕ್ಷ ವಹಿಸುವ ಮಹಾದೂತನಾದ ಮಿಕಾಯೇಲನು ಕಾಣಿಸಿಕೊಳ್ಳುವನು.
ಮೊತ್ತ ಮೊದಲು, ಮಾನವ ಜನಾಂಗ ಉಂಟಾದಂದಿನಿಂದ ಅಂದಿನವರೆಗೆ ಸಂಭವಿಸದ ಘೋರ ಸಂಕಟ
ಉಂಟಾಗುವುದು. ಆಗ ನಿನ್ನ ಜನರಲ್ಲಿ ಯಾರ ಯಾರ ಹೆಸರುಗಳು ಜೀವ ಬಾಧ್ಯರ ಪಟ್ಟಿಯಲ್ಲಿ
ಇರುವುದೋ ಅವರೆಲ್ಲರು ಜೀವೋದ್ಧಾರವನ್ನು ಪಡೆಯುವರು. 2ಸತ್ತು ಧೂಳಿ ಮಣ್ಣಿನಲ್ಲಿ 'ದೀರ್ಘನಿದ್ರೆ'
ಮಾಡುತ್ತಿರುವ ಅನೇಕರು ಏಳುವರು, ಎಚ್ಚೆತ್ತವರಲ್ಲಿ ಕೆಲವರು ನಿತ್ಯ ಜೀವವನ್ನು ಅನುಭವಿಸುವರು; ಕೆಲವರು
ತಿರಸ್ಕೃತರಾಗಿ ನಿತ್ಯ ನಿಂದನೆಗೆ ಗುರಿಯಾಗುವರು. 3ಬುದ್ಧಿವಂತರು ತೇಜೋಮಯವಾದ
ಆಕಾಶಮಂಡಲದಂತೆ ಪ್ರಕಾಶಿಸುವರು. ಜನರನ್ನು ಸದ್ಧರ್ಮಿಗಳನ್ನಾಗಿ ಮಾಡುವವರು
ಯುಗಯುಗಾಂತರಕ್ಕೂ ನಕ್ಷತ್ರಗಳಂತೆ ಹೊಳೆಯುವರು.

4 "ದಾನಿಯೇಲನೇ, ನೀನು ಈ ಮಾತುಗಳನ್ನು ಮುಚ್ಚಿಡು; ಇವುಗಳನ್ನು ಬರೆಯುವ ಗ್ರಂಥಕ್ಕೆ
ಮುದ್ರೆಹಾಕು; ಅಂತ್ಯ ಕಾಲದವರೆಗೆ ಮರೆಯಾಗಿರಲಿ. ಬಹು ಜನರು ಅತ್ತಿತ್ತ ಅಲೆದಾಡುವರು (ಸತ್ಯಕ್ಕಾಗಿ).
ಅಧರ್ಮ ಹೆಚ್ಚುತ್ತಿರುವುದು."

5 ಕೂಡಲೆ ದಾನಿಯೇಲನಾದ ನಾನು ಮತ್ತೆ ಇಬ್ಬರು ವ್ಯಕ್ತಿಗಳನ್ನು ಕಂಡೆ. ಅವರಲ್ಲಿ ಒಬ್ಬನು ನದಿಯ
ಈ ದಡದಲ್ಲಿ, ಇನ್ನೊಬ್ಬನು ಆ ದಡದಲ್ಲಿ ನಿಂತಿದ್ದರು. 6ಇವರಲ್ಲಿ ಒಬ್ಬನು, ನದಿಯ ನೀರಿನ ಮೇಲ್ಗಡೆ
ನಾರಿನ ಹೊದಿಕೆಯನ್ನು ಹೊದ್ದು ನಿಂತಿದ್ದ ದೂತನನ್ನು ನೋಡಿ, "ಈ ಆಶ್ಚರ್ಯ ಕಾರ್ಯಗಳು ನೆರವೇರಲು
ಎಷ್ಟು ಕಾಲ ಹಿಡಿಯುವುದು?" ಎಂದು ಕೇಳಿದನು. 7ಆ ದೂತ ಎಡ ಬಲಗೈಗಳನ್ನು ಆಕಾಶದ ಕಡೆಗೆ
ಎತ್ತಿಕೊಂಡು, "ಶಾಶ್ವತ ಜೀವಸ್ವರೂಪನಾಣೆ, ಒಂದು ಯುಗ, ಎರಡು ಯುಗ, ಮತ್ತು ಅರ್ಧ ಯುಗ
ಕಳೆಯಬೇಕು. ದೇವಜನರಿಗಾಗುವ ಹಿಂಸೆಬಾಧೆಗಳು ಸಂಪೂರ್ಣವಾಗಿ ನಿಂತಮೇಲೆ ಈ ಕಾರ್ಯಗಳೆಲ್ಲ

ಮುಕ್ತಾಯವಾಗುವುವು," ಎಂಬುದಾಗಿ ನನ್ನ ಕಿವಿಗೆ ಬೀಳುವಂತೆ ಹೇಳಿದನು. 8ನನಗೆ ಅದು ಕೇಳಿಸಿತ್ತಾದರೂ
ಅರ್ಥವಾಗಲಿಲ್ಲ. ಆಗ ನಾನು, "ಎನ್ನೊಡೆಯಾ, ಈ ಕಾರ್ಯಗಳ ಪರಿಣಾಮವೇನು?" ಎಂದು
ಪ್ರಶ್ನೆಮಾಡಿದೆ. 9ಅವನು, "ದಾನಿಯೇಲನೇ ಹೋಗು; ಈ ಮಾತುಗಳು ಅಂತ್ಯ ಕಾಲದವರೆಗೂ ಮುಚ್ಚಲ್ಪಟ್ಟು
ಮುದ್ರಿತವಾಗಿವೆ. 10ಅನೇಕರು ತಮ್ಮನ್ನು ಶುದ್ಧೀಕರಿಸಿ, ಶುಭ್ರ ಮಾಡಿಕೊಂಡು ಶೋಧಿತರಾಗುವರು. ದುಷ್ಟರು
ದುಷ್ಟರಾಗಿಯೇ ನಡೆಯುವರು. ಅವರಲ್ಲಿ ಯಾರಿಗೂ ವಿವೇಕವಿರದು. ಬುದ್ಧಿವಂತರಿಗೆ ವಿವೇಕವಿರುವುದು.
11ಅನುದಿನದ ಬಲಿ ನಿಂತು ಹೋಗುವುದು. 'ವಿನಾಶಕರ ವಿಕಟ ಮೂರ್ತಿ' ಪ್ರತಿಷ್ಠಿತವಾದ ಮೇಲೆ 1290
ದಿನಗಳು ಕಳೆಯಬೇಕು. 12 1335 ದಿನಗಳ ಮಟ್ಟಿಗೆ ವಿಶ್ವಾಸದಿಂದ ಕಾದಿರುವವರು ಧನ್ಯರು! 13ನೀನು
ಹೋಗಿ ಅಂತ್ಯದವರೆಗೆ ವಿಶ್ವಾಸದಿಂದಿರು. ನೀನು 'ದೀರ್ಘನಿದ್ರೆ'ಯನ್ನು ಹೊಂದಿ, ನಿನಗೆ ನಿರ್ಧರಿಸಲಾದ
ಸ್ಥಾನವನ್ನು ಪಡೆಯಲು ಯುಗಸಮಾಪ್ತಿಯಲ್ಲಿ ಎದ್ದುಬರುವೆ," ಎಂದು ಹೇಳಿದನು.

# ಅಜರ್ಯನ ಗೀತೆ ಹಾಗು ಮೂವರು ಯುವಕರ ಕೀರ್ತನೆ

## ಮುನ್ನುಡಿ

ಗ್ರೀಕ್ ಮೂಲದಲ್ಲಿರುವ ಪ್ರವಾದಿ ದಾನಿಯೇಲನ ಗ್ರಂಥಕ್ಕೆ ಸೇರ್ಪಡೆಯಾದ ಮೂರು ಮುಖ್ಯ ಭಾಗಗಳಲ್ಲಿ, "ಅಜರ್ಯನ ಗೀತೆ ಹಾಗು ಮೂವರು ಯುವಕರ ಕೀರ್ತನೆ" ಎಂಬುದು ಒಂದು ಭಾಗ– (ದಾನಿ. 3.24–89). ಅರಸ ನೆಬೂಕದ್ನೆಚ್ಚರನ ಆಜ್ಞೆಯ ಮೇರೆಗೆ ಅಜರ್ಯ ಮತ್ತು ಅವನ ಸಂಗಡಿಗರನ್ನು ಧಗಧಗನೆ ಉರಿಯುವ ಆವಿಗೆಯಲ್ಲಿ ಹಾಕಿದಾಗ, ಅವರು ಸುಟ್ಟುಹೋಗದೆ, ಸರ್ವೇಶ್ವರನ ಗುಣಗಾನ ಮಾಡುತ್ತಾ ಬೆಂಕಿಯ ನಡುವೆ ತಿರುಗಾಡುತ್ತಿದ್ದರು. ಆಗ ಅವರು ಮಾಡಿದ ದೈವಸ್ತುತಿಯನ್ನೇ ಈ ಗ್ರಂಥದ ರೂಪದಲ್ಲಿ ಕೊಡಲಾಗಿದೆ.

### ಪರಿವಿಡಿ

| | | | | |
|---|---|---|---|---|
| ಅಜರ್ಯನ ಗೀತೆ | – | 1 | – | 22 |
| ಬೆಂಕಿಯ ಆವಿಗೆಯ ವಿವರಣೆ | – | 23 | – | 27 |
| ಮೂವರು ಯುವಕರ ಕೀರ್ತನೆ | – | 28 | – | 68 |

### ಅಜರ್ಯನ ಗೀತೆ ಹಾಗು ಮೂವರು ಯುವಕರ ಕೀರ್ತನೆ

**1** ಹನನ್ಯ, ಮಿಶಾಯೇಲ್ ಹಾಗು ಅಜರ್ಯ ಎಂಬವರು ದೇವರನ್ನು ಸ್ತುತಿಸುತ್ತಾ ಸರ್ವೇಶ್ವರನ ಗುಣಗಾನ
ಮಾಡುತ್ತಾ ಬೆಂಕಿಯ ನಡುವೆ ತಿರುಗಾಡುತ್ತಿದ್ದರು. 2ಆಗ ಅಜರ್ಯನು ಬೆಂಕಿಯ ನಡುವೆ ನಿಂತುಕೊಂಡು
ಗಟ್ಟಿಯಾಗಿ ಕೂಗಿ ಹೀಗೆಂದು ಪ್ರಾರ್ಥನೆ ಮಾಡಿದ:

3 ನಮ್ಮ ಪೂರ್ವಜರ ದೇವರಾದ
ಹೇ, ಸರ್ವೇಶ್ವರಾ,
ನೀವು ಸ್ತುತ್ಯಾರ್ಹರು, ವಂದನೀಯರು
ನಿಮ್ಮ ನಾಮ ಸದಾ – ಸರ್ವದಾ

ಮಹಿಮಾಯುತ.
4 ನೀವು ನಮಗೆ ಗೈದವುಗಳೆಲ್ಲ
ಧರ್ಮಸಮ್ಮತವಾದುವು
ನಿಮ್ಮ ಕಾರ್ಯ, ಸತ್ಯ, ನಿಮ್ಮ ಮಾರ್ಗ,
ನ್ಯಾಯ; ನಿಮ್ಮ ತೀರ್ಪು, ಯಥಾರ್ಥ.
5 ನೀವು ನಮ್ಮ ಮೇಲೂ
ನಮ್ಮ ಪೂರ್ವಜರ ಶ್ರೀನಗರವಾದ
ಜೆರುಸಲೇಮಿನ ಮೇಲೂ
ಬರಮಾಡಿರುವುದೆಲ್ಲ ಸರಿಯಾದುವು.
ನಮ್ಮ ಪಾಪದ ನಿಮಿತ್ತ,
ಸತ್ಯ ಹಾಗೂ ನ್ಯಾಯವಾದುದನ್ನೆ
ಬರಮಾಡಿದ್ದೀರಿ!
6 ಏಕೆಂದರೆ ನಿಮಗೆ ವಿಮುಖರಾಗಿ ಪಾಪ
ಮಾಡಿದೆವು,
ದ್ರೋಹಗೈದೆವು, ಎಲ್ಲ ವಿಷಯದಲ್ಲೂ
ತಪ್ಪುಮಾಡಿದೆವು.
7 ನಿಮ್ಮ ಆಜ್ಞೆಗಳನ್ನು ಆಲಿಸಲಿಲ್ಲ, ಪಾಲಿಸಲಿಲ್ಲ
ನಮ್ಮ ಒಳಿತಿಗಾಗಿ ಕಟ್ಟಳೆಯಿಟ್ಟವುಗಳನ್ನು
ನಡೆಸಲಿಲ್ಲ.
8 ನೀವು ನಮ್ಮ ಮೇಲೆ ಬರಮಾಡಿರುವುದೆಲ್ಲವೂ
ನಮಗೆ ವಿಧಿಸಿದ ಪ್ರತಿಯೊಂದು ಶಿಕ್ಷೆಯೂ
ಯಥಾರ್ಥವಾಗಿಯೇ ಇವೆ.
9 ಧರ್ಮಹೀನರಾದ ವೈರಿಗಳ ಕೈಗೆ
ಅತ್ಯಂತ ನಾಸ್ತಿಕರಾದವರ ಕೈಗೆ
ನಮ್ಮನ್ನು ಒಪ್ಪಿಸಿಬಿಟ್ಟಿದ್ದೀರಿ.
ಜಗದಲ್ಲೇ ದುಷ್ಟನೂ ಅನೀತಿವಂತನೂ
ಆದವನ ಕೈಗೆ ನಮ್ಮನ್ನು ಕೊಟ್ಟಿದ್ದೀರಿ.
10 ನಿಮ್ಮ ಶರಣರೂ ಭಕ್ತರೂ ಆದ ನಮಗೆ
ನಾಚಿಕೆ, ನಿಂದೆ, ಅವಮಾನಗಳು ಕವಿದಿವೆ,
ನಾವೀಗ ಬಾಯಿ ಮುಚ್ಚಿಕೊಳ್ಳಬೇಕಾಗಿದೆ.
11 ಆದರೂ ನಿಮ್ಮ ನಾಮದ ಪ್ರಯುಕ್ತ
ನಮ್ಮನ್ನು ಎಂದೆಂದಿಗೂ ತ್ಯಜಿಸಬೇಡಿ,
ನಿಮ್ಮ ಒಡಂಬಡಿಕೆಯನ್ನು ರದ್ದುಗೊಳಿಸಬೇಡಿ.
12 ನಿಮ್ಮ ಮಿತ್ರ ಅಬ್ರಹಾಮನ ನಿಮಿತ್ತ
ನಿಮ್ಮ ದಾಸ ಇಸಾಕನ,
ನಿಮ್ಮ ಭಕ್ತ ಯಕೋಬನ ಪ್ರಯುಕ್ತ
ನಿಮ್ಮ ಕೃಪೆ ನಮ್ಮನ್ನು ಬಿಟ್ಟಗಲದಿರಲಿ.
13 ಇವರಿಗೆ, "ನಿಮ್ಮ ಸಂತಾನವನ್ನು ಆಕಾಶದ
ನಕ್ಷತ್ರಗಳಂತೆ
ಸಮುದ್ರ ತೀರದ ಮರಳಿನಂತೆ

ಅಸಂಖ್ಯವಾಗಿಸುವೆ"
ಎಂದು ನೀವು ವಾಗ್ದಾನ ಮಾಡಿದಿರಲ್ಲವೆ?
14 ಒಡೆಯಾ, ಉಳಿದ ರಾಷ್ಟ್ರಗಳಿಗಿಂತ ನಾವು
ಕನಿಷ್ಠರಾಗಿಬಿಟ್ಟೆವು,
ನಮ್ಮ ಪಾಪಗಳ ಕಾರಣ
ಜಗದಲ್ಲಿನ ಹೀನಸ್ಥಿತಿಗೆ ಇಳಿದುಬಿಟ್ಟೆವು.
15 ನಮಗೀಗ ರಾಜರಿಲ್ಲ, ಪ್ರವಾದಿಗಳಿಲ್ಲ,
ನಾಯಕರಿಲ್ಲ;
ಹೋಮವಿಲ್ಲ, ಬಲಿದಾನವಿಲ್ಲ,
ನೈವೇದ್ಯವಿಲ್ಲ, ಧೂಪವಿಲ್ಲ.
ಕಾಣಿಕೆಯನ್ನರ್ಪಿಸಿ ನಿಮ್ಮ ಕೃಪೆ ಪಡೆಯಲು
ಸ್ಥಳವೂ ಇಲ್ಲ;
16 ಆದರೂ ಪಶ್ಚಾತ್ತಾಪದ ಹೃದಯ, ದೀನಮನ
ನಿಮಗೆ ಅಂಗೀಕೃತವಾಗಲಿ.
17 ಹೋತಹೋರಿಗಳ, ಸಾವಿರಾರು ಕೊಬ್ಬಿದ
ಕುರಿಮರಿಗಳ ದಹನಬಲಿದಾನದಂತೆ
ನಮ್ಮೀ ಅಂತರಂಗದ ಬಲಿ ನಿಮಗಿಂದು
ಅಂಗೀಕೃತವಾಗಲಿ.
ಪೂರ್ಣ ಹೃದಯದಿಂದ ನಾವು ನಿಮ್ಮನ್ನು
ಹಿಂಬಾಲಿಸುವಂತೆ ಅನುಗ್ರಹಿಸಿರಿ.
ಏಕೆಂದರೆ ನಿಮ್ಮಲ್ಲಿ ನಂಬಿಕೆಯಿಡುವವರಿಗೆ
ಆಶಾಭಂಗವಾಗುವುದಿಲ್ಲ.
18 ಪೂರ್ಣ ಹೃದಯದಿಂದ ನಿಮ್ಮನ್ನೀಗ
ಹಿಂಬಾಲಿಸುತ್ತೇವೆ
ನಿಮ್ಮಲ್ಲಿ ಭಯಭಕ್ತಿಯಿಡುತ್ತೇವೆ
ನಿಮ್ಮ ಸನ್ನಿಧಿಯನ್ನು ಮತ್ತೆ ಅರಸುತ್ತೇವೆ.
19 ನಮ್ಮನ್ನು ನಿರಾಶೆಗೊಳಿಸಬೇಡಿ
ನಿಮ್ಮ ಸೈರಣೆಗೆ ತಕ್ಕಂತೆ, ನಿಮ್ಮ ಕೃಪಾತಿಶಯದ
ಪ್ರಕಾರ
ನಮ್ಮ ಸಂಗಡ ವರ್ತಿಸಿ.
20 ಸರ್ವೇಶ್ವರಾ, ನಿಮ್ಮ ಮಹತ್ಕಾರ್ಯಗಳ
ಮೂಲಕ ನಮ್ಮನ್ನು ಬಿಡುಗಡೆಮಾಡಿ
ನಿಮ್ಮ ಹೆಸರಿಗೆ ಹೊಸ ಕೀರ್ತಿ ಬರುವಂತೆ ಮಾಡಿ
ನಿಮ್ಮ ದಾಸರಾದ ನಮಗೆ ಕೇಡು –
ಬಗೆಯುವರೆಲ್ಲರು
ವಿಸ್ಮಯಗೊಳ್ಳುವಂತೆ ಮಾಡಿ.
21 ಅವರು ತಮ್ಮ ಶಕ್ತಿಸಾಮರ್ಥ್ಯವನ್ನು ಕುರಿತು
ನಾಚಿಕೆಪಡಲಿ
ಅವರ ಬಲ ಕುಂದಿಹೋಗಲಿ.
22 ನೀವೇ ಅದ್ವಿತೀಯ ದೇವರು

ವಿಶ್ವವ್ಯಾಪ್ತ ಮಹಿಮೆಯುಳ್ಳ ಸರ್ವೇಶ್ವರ
ಎಂಬುದನ್ನು ಅವರು ಅರಿತುಕೊಳ್ಳಲಿ.

23 ಅವರನ್ನು ಆವಿಗೆಯೊಳಗೆ ಹಾಕಿದ ಅರಸನ ಸೇವಕರು ಬೆಂಕಿಗೆ ಕಲ್ಲೆಣ್ಣೆ, ರಾಳ, ಸೆಣಬು,
ಚಕ್ಕೆಗಳನ್ನು ಹಾಕಿ ಅದು ಹೆಚ್ಚುಹೆಚ್ಚಾಗಿ ಉರಿಯುವಂತೆ ಮಾಡುವುದನ್ನು ನಿಲ್ಲಿಸಲಿಲ್ಲ. 24ಆದುದರಿಂದ
ಜ್ವಾಲೆ ಆವಿಗೆಯ ಮೇಲೆ ನಾಲ್ವತ್ತೊಂಬತ್ತು ಮೊಳ ಮೇಲಕ್ಕೇರಿತ್ತು. 25ಅದು ಹರಡಿಕೊಂಡು ಆವಿಗೆಯ
ಸುತ್ತಲಿದ್ದ ಬಾಬಿಲೋನಿಯರನ್ನೆಲ್ಲ ಸುಟ್ಟು ಭಸ್ಮಮಾಡಿತು. 26ಆದರೆ ಸರ್ವೇಶ್ವರನ ದೂತನು ಆವಿಗೆಯೊಳಗೆ
ಇಳಿದು ಬಂದು, ಅಜರ್ಯ ಮತ್ತು ಅವನ ಸಂಗಡಿಗರ ಪಕ್ಕದಲ್ಲೇ ಹೊರಗೆ ಹೊಡೆದು ಅದರ ನಡುವೆ
ತಣ್ಣಗಿರುವ ಸಿಳ್ಳುಗಾಳಿ ಬೀಸುವಂತೆ ಮಾಡಿದನು. ಈ ಕಾರಣ ಬೆಂಕಿಯ ಉರಿ ಅವರನ್ನು ಸೋಂಕಲಿಲ್ಲ;
ಅವರಿಗೆ ಯಾವ ಹಾನಿಯಾಗಲಿ, ಕಷ್ಟವಾಗಲಿ ಉಂಟಾಗಲಿಲ್ಲ.

**ಮೂವರು ಯುವಕರ ಕೀರ್ತನೆ**

28 ಆ ಮೂವರು ಯುವಕರು ಆವಿಗೆಯಿಂದಲೆ ದೇವರ ಗುಣಗಾನ ಮಾಡುತ್ತಾ, ಹೊಗಳುತ್ತಾ ಹೀಗೆಂದು ಸ್ತುತಿಸಿದರು:

29 ನಮ್ಮ ಪೂರ್ವಜರ ದೇವರಾದ ಸರ್ವೇಶ್ವರಾ,
ನೀವು ಪರಮಪೂಜ್ಯರು, ಎಂದೆಂದಿಗೂ
ಮಹೋನ್ನತರು.
30 ಮಹಿಮಾಯುತವಾದ ನಿಮ್ಮ ನಾಮ
ಸ್ತುತ್ಯಾರ್ಹವಾದುದು,
ಪರಮಪೂಜ್ಯವಾದುದು, ಎಂದೆಂದಿಗೂ
ಮಹಾ ಘನತರವಾದುದು.
31 ಪರಮ ವೈಭವದಿಂದ ಕೂಡಿದ ಮಂದಿರದಲ್ಲಿ
ನೀವು ಸ್ತುತಿಸ್ತೋತ್ರಕ್ಕೆ ಪಾತ್ರರು:
ನೀವು ಪರಮಪೂಜ್ಯರು, ಎಂದೆಂದಿಗೂ
ಮಹೋನ್ನತರು.
32 ಸಾಗರಾಧಿಗಳನ್ನು ಸಮೀಕ್ಷಿಸುವ ನಿಮಗೆ
ಸ್ತೋತ್ರ!
ಕೆರೂಬಿಗಳ ಮೇಲೆ ಆಸೀನರಾಗಿರುವ ನಿಮಗೆ
ಸ್ತೋತ್ರ!
ನೀವು ಪರಮ ಪೂಜ್ಯರು, ಎಂದೆಂದಿಗೂ
ಮಹೋನ್ನತರು.
33 ನಿಮ್ಮ ಸಾಮ್ರಾಜ್ಯದ ಸಿಂಹಾಸನದ
ಮೇಲೆ ಮಂಡಿಸಿರುವ ನಿಮಗೆ ಸ್ತೋತ್ರ:
ನೀವು ಪರಮ ಪೂಜ್ಯರು, ಎಂದೆಂದಿಗೂ
ಮಹೋನ್ನತರು.
34 ಗಗನ ಮಂಡಲದಲ್ಲಿ ಸ್ತೋತ್ರಪಾತ್ರರು: ನೀವು
ಸ್ತುತ್ಯರು, ಎಂದೆಂದಿಗೂ ಮಹಿಮಾನ್ವಿತರು.
35 ಸರ್ವೇಶ್ವರನ ಸಕಲ ಸೃಷ್ಟಿಗಳೇ,
ಸರ್ವೇಶ್ವರನನ್ನು ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
36 ದೇವರ ದಿವ್ಯದೂತರೇ, ಸರ್ವೇಶ್ವರನನ್ನು

ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
37 ಆಕಾಶಗಳೇ, ಸರ್ವೇಶ್ವರನನ್ನು ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
38 ಆಕಾಶದ ಮೇಲಿರುವ ಸಕಲ ಜಲರಾಶಿಗಳೇ,
ಸರ್ವೇಶ್ವರನನ್ನು ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
39 ಸರ್ವೇಶ್ವರನ ಸಕಲ ಶಕ್ತಿಗಳೇ,
ಸರ್ವೇಶ್ವರನನ್ನು ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
40 ಸೂರ್ಯಚಂದ್ರರೇ, ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
41 ಆಕಾಶಮಂಡಲದಲ್ಲಿರುವ ನಕ್ಷತ್ರಗಳೇ,
ಸರ್ವೇಶ್ವರನನ್ನು ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
42 ಮಳೆಮಂಜುಗಳೇ, ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
43 ಗಾಳಿಬಿರುಗಾಳಿಗಳೇ, ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
44 ಬೆಂಕಿ ಝಳಗಳೇ, ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
45 ಶೀತೋಷ್ಣಗಳೇ, ಸರ್ವೇಶ್ವರನನ್ನು ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
46 ಇಬ್ಬನಿ, ಹಿಮಪಾತಳೇ, ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
47 ಚಳಿ ಬೇಸಿಗೆಗಳೇ, ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
48 ಮಂಜು ಹಿಮಗಡ್ಡೆಗಳೇ, ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
49 ಹಗಲು ಇರುಳುಗಳೇ, ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
50 ಬೆಳಕು ಕತ್ತಲುಗಳೇ, ಸರ್ವೇಶ್ವರನನ್ನು

ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
51 ಮಿಂಚು ಮೋಡಗಳೇ, ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
52 ಧರಣಿಮಂಡಲವು ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
53 ಬೆಟ್ಟಗುಡ್ಡಗಳೇ, ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
54 ಇಳೆಯಲ್ಲಿ ಬೆಳೆಯುವ ಎಲ್ಲಾ ಗಿಡಮರಗಳೇ,
ಸರ್ವೇಶ್ವರನನ್ನು ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
55 ಕಡಲು ಹೊಳೆಗಳೇ, ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
56 ಬುಗ್ಗೆ ಚಿಲುಮೆಗಳೇ, ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
57 ಜಲಚರಗಳೇ, ತಿಮಿಂಗಿಲಗಳೇ,
ಸರ್ವೇಶ್ವರನನ್ನು ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
58 ಆಕಾಶದ ಪಕ್ಷಿಗಳೇ, ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
59 ಕಾಡು ಮೃಗಗಳೇ, ದನಕರುಗಳೇ
ಸರ್ವೇಶ್ವರನನ್ನು ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
60 ಮಾನವ ಜನಾಂಗಗಳೇ, ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
61 ಇಸ್ರಯೇಲ್ ನಾಡೇ, ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
62 ಸರ್ವೇಶ್ವರನ ಯಾಜಕರೇ, ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
63 ಸರ್ವೇಶ್ವರನ ದಾಸರೇ, ಸರ್ವೇಶ್ವರನನ್ನು
ಕೊಂಡಾಡಿ,

ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
64 ಸಜ್ಜನರ ಜೀವಾತ್ಮಗಳೇ, ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
65 ಸಂತರೇ, ದೀನಮನಸ್ಕರೇ, ಸರ್ವೇಶ್ವರನನ್ನು
ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
66 ಹನನ್ಯ, ಅಜರ್ಯ, ಮಿಶಾಯೇಲರೇ
ಸರ್ವೇಶ್ವರನನ್ನು ಕೊಂಡಾಡಿ,
ಅವರನ್ನು ಸ್ತುತಿಸಿ ಸದಾ ಸಂಕೀರ್ತಿಸಿ.
ಏಕೆಂದರೆ ಅವರು ಪಾತಾಳದಿಂದ ನಮ್ಮನ್ನು
ಬಿಡುಗಡೆ ಮಾಡಿದ್ದಾರೆ;
ಮರಣದ ಹಿಡಿತದಿಂದ ತಪ್ಪಿಸಿದ್ದಾರೆ;
ಆವಿಗೆಯ ಮಧ್ಯೆಯಿಂದ, ಉರಿಯುವ
ಜ್ವಾಲೆಯಿಂದ,
ಹೌದು, ಬೆಂಕಿಯ ಒಡಲೊಳಗಿಂದ
ನಮ್ಮನ್ನು ಬಿಡಿಸಿ ರಕ್ಷಿಸಿದ್ದಾರೆ.
67 ಸರ್ವೇಶ್ವರಸ್ವಾಮಿಗೆ ಧನ್ಯವಾದ ಸಲ್ಲಿಸಿ!
ಅವರು ಒಳ್ಳೆಯವರು, ಅವರ ಪ್ರೀತಿ ಶಾಶ್ವತ!
68 ಸರ್ವೇಶ್ವರನನ್ನು ಆರಾಧಿಸುವವರೇ,
ದೇವಾದಿದೇವರನ್ನು ಕೊಂಡಾಡಿ,
ಅವರನ್ನು ಕೀರ್ತಿಸಿ,
ಅವರಿಗೆ ಕೃತಜ್ಞತಾಸ್ತುತಿಗೈಯಿರಿ.
ಅವರ ಪ್ರೀತಿ ಅನವರತ!

# ಸುಸನ್ನಳ ಗ್ರಂಥ

## ಮುನ್ನುಡಿ

ಹಿಬ್ರು ಮೂಲದಿಂದ ಗ್ರೀಕ್ ಭಾಷೆಗೆ ಭಾಷಾಂತರಿಸಿದಾಗ ಪ್ರವಾದಿ ದಾನಿಯೇಲನ ಗ್ರಂಥಕ್ಕೆ ಸೇರ್ಪಡೆಯಾದ ಭಾಗಗಳಲ್ಲಿ ಸುಸನ್ನಳ ಕಥೆಯೂ ಒಂದು. ಸದ್ಗುಣಶೀಲ ಯೆಹೂದ್ಯ ಮಹಿಳೆಯಾಗಿದ್ದ ಸುಸನ್ನಳ ಮೇಲೆ ಮೋಹಮತ್ತರಾದ ನ್ಯಾಯಾಧೀಶರು ವ್ಯಭಿಚಾರವೆಂಬ ಸುಳ್ಳು ಅಪರಾಧವನ್ನು ಹೊರಿಸಿದಾಗ, ಧೀರ ಹಾಗು ಜ್ಞಾನಿಯಾದ ದಾನಿಯೇಲ್ ಪ್ರವಾದಿ ಹೇಗೆ ಆಕೆಯನ್ನು ಬಿಡುಗಡೆಮಾಡಿದನೆಂದು ಈ ಕಥೆ ವಿವರಿಸುತ್ತದೆ.

## ಪರಿವಿಡಿ

| | | | | |
|---|---|---|---|---|
| ಸುಸನ್ನಳನ್ನು ಸೆಳೆಯಲು ಇಬ್ಬರು ನ್ಯಾಯಾಧೀಶರು ಪಟ್ಟ ಪ್ರಯತ್ನ | – | 1 | – | 27 |
| ಸುಸನ್ನಳಿಗೆ ಮರಣದಂಡನೆ ವಿಧಿಸಿದ್ದು | – | 28 | – | 43 |
| ಸುಸನ್ನಳ ಬಿಡುಗಡೆ; ನ್ಯಾಯಾಧೀಶರಿಗೆ ಮರಣದಂಡನೆ | – | 44 | – | 64 |

## ಸುಸನ್ನಳ ಕಥೆ

**1** ಬಾಬಿಲೋನಿನಲ್ಲಿ ಯೋವಾಕೀಮನೆಂಬ ಒಬ್ಬ ವ್ಯಕ್ತಿ ಇದ್ದ. ಅವನು ಹಿಲ್ಕೀಯನ ಮಗಳಾದ ಸುಸನ್ನಳನ್ನು
ಮದುವೆಯಾದ. 2ಆಕೆ ಬಹಳ ಚೆಲುವೆ. ದೇವರಲ್ಲಿ ಆಕೆಗೆ ಅಧಿಕ ಭಯಭಕ್ತಿ. ಅವಳ ತಂದೆತಾಯಿಗಳು
ಕೂಡ ನೀತಿವಂತರು. 3ಮೋಶೆಯ ಧರ್ಮಶಾಸ್ತ್ರಾನುಸಾರ ಆಕೆಗೆ ಸುಶಿಕ್ಷಣವನ್ನು ಕೊಟ್ಟಿದ್ದರು.
4ಯೋವಾಕೀಮನು ಬಹು ಧನವಂತನಾಗಿದ್ದ. ಅವನ ಮನೆಯ ಪಕ್ಕದಲ್ಲೇ ಅವನದೊಂದು ತೋಟವಿತ್ತು.
ಯೆಹೂದ್ಯರಲ್ಲಿ ಸಾಕಷ್ಟು ಜನ ಅವನಲ್ಲಿಗೆ ಬಂದು ಹೋಗುತ್ತಿದ್ದರು. ಏಕೆಂದರೆ ಅವನು ಎಲ್ಲರಿಗಿಂತಲು
ಗೌರವಾನ್ವಿತನಾಗಿದ್ದ.
5 ಆ ವರ್ಷ ಜನನಾಯಕರಲ್ಲಿ ಇಬ್ಬರು ನ್ಯಾಯಾಧೀಶರಾಗಿ ಆಯ್ಕೆಯಾಗಿದ್ದರು. "ದುಷ್ಟತನ
ಬಂದಿರುವುದು ಬಾಬಿಲೋನಿನಿಂದ ಹಾಗು 'ಜನರನ್ನಾಳುವವರು' ಎನಿಸಿಕೊಂಡ ಹಿರಿಯ
ನ್ಯಾಯಾಧೀಶರಿಂದ" ಎಂಬ ಸರ್ವೇಶ್ವರ ನುಡಿ ಅವರ ನಡತೆಗೆ ಅನ್ವಯಿಸುತ್ತಿತ್ತು. 6ಅವರು ಹೆಚ್ಚಾಗಿ
ಯೋವಾಕೀಮನ ಮನೆಯಲ್ಲೇ ತಂಗುತ್ತಿದ್ದರು. ಅಲ್ಲಿದ್ದ ಇವರ ಬಳಿಗೆ ವ್ಯಾಜ್ಯವಿದ್ದವರೆಲ್ಲರು ಬರುತ್ತಿದ್ದರು.
7ಮಧ್ಯಾಹ್ನ ಜನರು ಹೊರಟುಹೋದ ಮೇಲೆ ಸುಸನ್ನಳು ತನ್ನ ಗಂಡನ ತೋಟಕ್ಕೆ ವಿಹಾರಕ್ಕೆಂದು ಹೋಗುತ್ತ
ಇದ್ದಳು. 8ಹೀಗೆ ಅವಳು ಪ್ರತಿದಿನ ಹೋಗುತ್ತಿದ್ದುದನ್ನು ಗಮನಿಸುತ್ತಿದ್ದ ಈ ಇಬ್ಬರು ನ್ಯಾಯಾಧೀಶರು
ಆಕೆಯನ್ನು ಕಾಮದೃಷ್ಟಿಯಿಂದ ನೋಡತೊಡಗಿದರು. 9ಅವರ ಬುದ್ಧಿ ವಕ್ರವಾಯಿತು. ಸ್ವರ್ಗದತ್ತವಾಗಲಿ
ನ್ಯಾಯಬದ್ಧವಾದ ತೀರ್ಪಿನತ್ತವಾಗಲಿ ಅವರ ಮನಸ್ಸು ಹರಿಯಲಿಲ್ಲ. ಅವರಿಬ್ಬರೂ ಅವಳ ಮೇಲಿನ
ಮೋಹದಿಂದ ಪೀಡಿತರಾದರು. 10ಆದರೂ ತಮ್ಮೊಳಗಿನ ತಾಪವನ್ನು ಒಬ್ಬರಿಗೊಬ್ಬರು ತಿಳಿಯಗೊಡಲಿಲ್ಲ.
11ಏಕೆಂದರೆ ಅವಳ ಸಹವಾಸಕ್ಕಾಗಿ ತಮ್ಮಲ್ಲಿದ್ದ ಹಂಬಲವನ್ನು ಹೊರಪಡಿಸಲು ಹೇಸುತ್ತಿದ್ದರು. 12ಆದರೂ
ಪ್ರತಿದಿನ ಅವಳನ್ನು ನೋಡಲು ಕಾತುರದಿಂದ ಕಾದಿರುತ್ತಿದ್ದರು. 13ಒಮ್ಮೆ ಅವರಲ್ಲಿ ಒಬ್ಬನು ಇನ್ನೊಬ್ಬನಿಗೆ,
"ಊಟದ ಸಮಯ ಆಯಿತು; ಮನೆಗೆ ಹೋಗೋಣ," ಎಂದನು. 14ಹೊರಗೆ ಹೋದ ಮೇಲೆ
ಒಬ್ಬರನ್ನೊಬ್ಬರು ಬೀಳ್ಕೊಟ್ಟರು. ಆದರೆ ಮರಳಿ ಅದೇ ಸ್ಥಳಕ್ಕೆ ಬಂದರು. ತಿರುಗಿ ಬಂದ ಕಾರಣವನ್ನು
ಪರಸ್ಪರ ವಿಚಾರಿಸುತ್ತಾ ತಮ್ಮಲ್ಲಿದ್ದ ದುರಾಶೆಯನ್ನು ಒಪ್ಪಿಕೊಂಡರು. ಅಲ್ಲದೆ, ಸುಸನ್ನಳು ಒಬ್ಬಳೇ ಇರುವಾಗ

ತಮ್ಮಿಬ್ಬರೂ ಅವಳನ್ನು ಭೇಟಿಯಾಗಬಹುದಾದ ಸಮಯವನ್ನು ಗೊತ್ತುಮಾಡಿಕೊಂಡರು. 15ಹೀಗೆ ಅವರು ತಕ್ಕ ಸಮಯಕ್ಕಾಗಿ ಕಾದುಕೊಂಡಿರುವಾಗ ಒಮ್ಮೆ ಸುಸನ್ನಳು ಎಂದಿನಂತೆ ಇಬ್ಬರು ದಾಸಿಯರೊಂದಿಗೆ ತೋಟಕ್ಕೆ ಹೋದಳು. ಸೆಕೆಯಾಗಿದ್ದುದರಿಂದ ಅಲ್ಲೆ ಸ್ನಾನ ಮಾಡ ಬಯಸಿದಳು. 16ಮರೆಯಲ್ಲಿ ಅವಿತುಕೊಂಡು ಆಕೆಯನ್ನು ಕಣ್ಣಿಟ್ಟು ನೋಡುತ್ತಿದ್ದ ಆ ಇಬ್ಬರು ಹಿರಿಯರನ್ನು ಬಿಟ್ಟರೆ ಮತ್ತೆ ಯಾರೂ ಅಲ್ಲಿರಲಿಲ್ಲ. 17ಆಕೆ ದಾಸಿಯರಿಗೆ, "ಎಣ್ಣೆಯನ್ನೂ ಸುಗಂಧತೈಲವನ್ನೂ ತೆಗೆದುಕೊಂಡು ಬನ್ನಿ; ತೋಟದ ಬಾಗಿಲನ್ನು ಮುಚ್ಚಿ, ನಾನು ಸ್ನಾನ ಮಾಡಿಕೊಳ್ಳಬೇಕು," ಎಂದಳು. 18ಆಕೆ ಹೇಳಿದಂತೆಯೇ ದಾಸಿಯರು ಮಾಡಿದರು. ತೋಟದ ಬಾಗಿಲನ್ನು ಮುಚ್ಚಿಕೊಂಡು, ತರಲು ಹೇಳಿದ್ದ ವಸ್ತುಗಳನ್ನು ತೆಗೆದುಕೊಂಡು ಬರಲು ಪಕ್ಕದ ಬಾಗಿಲಿಂದ ಹೊರಗೆಹೋದರು. ಆ ಹಿರಿಯರು ಅವಿತುಕೊಂಡಿದ್ದರಿಂದ ಅವರನ್ನು ದಾಸಿಯರು ನೋಡಲಿಲ್ಲ.

### ಮೋಹಮತ್ತರಾದ ನ್ಯಾಯಾಧೀಶರು

19 ದಾಸಿಯರು ಹೊರಗೆ ಹೋದ ಬಳಿಕ ಆ ಇಬ್ಬರು ಹಿರಿಯರು ಎದ್ದು ಸುಸನ್ನಳ ಹತ್ತಿರಕ್ಕೆ ಓಡಿಬಂದರು. 20ಅವಳಿಗೆ, "ನೋಡು, ನಮ್ಮನ್ನು ಯಾರೂ ನೋಡದಂತೆ ತೋಟದ ಬಾಗಿಲು ಹಾಕಿದೆ. ನಾವು ನಿನ್ನಲ್ಲಿ ಮೋಹಿತರಾಗಿದ್ದೇವೆ. ಆದ್ದರಿಂದ ನಮಗೆ ಸಮ್ಮತಿಸು, ನಮ್ಮೊಂದಿಗೆ ಸಂಭೋಗಿಸು. 21ಇಲ್ಲವಾದರೆ, ಒಬ್ಬ ಯುವಕ ನಿನ್ನ ಸಂಗಡ ಇದ್ದನೆಂದೂ ಅದಕ್ಕಾಗಿಯೇ ನೀನು ದಾಸಿಯರನ್ನು ಹೊರಗೆ ಕಳಿಸಿದೆ ಎಂದೂ ನಾವು ನಿನಗೆ ವಿರುದ್ಧ ಸಾಕ್ಷಿ ಹೇಳುತ್ತೇವೆ," ಎಂದರು. 22ಅದಕ್ಕೆ ಸುಸನ್ನಳು ನಿಟ್ಟುಸಿರಿಡುತ್ತಾ, "ನಾನು ದೊಡ್ಡ ಬಿಕ್ಕಟ್ಟಿಗೆ ಸಿಕ್ಕಿಕೊಂಡಿದ್ದೇನೆ. ಈ ಕೆಟ್ಟ ಕೆಲಸವನ್ನು ನಾನು ಮಾಡಿದೆನಾದರೆ, ಮರಣ ದಂಡನೆ ನನಗೆ ಕಟ್ಟಿಟ್ಟ ಬುತ್ತಿ; ಮಾಡದಿದ್ದರೆ ನಿಮ್ಮ ಕೈಯಿಂದ ಪಾರಾಗಲಾರೆ. 23ಇಂತಿರಲು ಸರ್ವೇಶ್ವರನ ಕಣ್ಮುಂದೆ ಪಾಪಮಾಡುವುದಕ್ಕಿಂತ, ಅದನ್ನು ಮಾಡದೆ ನಿಮ್ಮ ಕೈಗೆ ಸಿಕ್ಕಿ ಬೀಳುವುದೇ ನನಗೆ ಲೇಸು," ಎಂದುಕೊಂಡಳು. 24ಹೀಗೆಂದ ಮೇಲೆ ಸುಸನ್ನಳು ಗಟ್ಟಿಯಾಗಿ ಕಿರಿಚಿಕೊಂಡಳು. ಆ ಹಿರಿಯರಿಬ್ಬರೂ ಅವಳಿಗೆ ವಿರುದ್ಧ ಅಬ್ಬರಿಸಿದರು. 25ಅವರಲ್ಲಿ ಒಬ್ಬನು ಓಡಿಹೋಗಿ ತೋಟದ ಬಾಗಿಲನ್ನು ತೆರೆದನು. 26ಇತ್ತ ಮನೆಯ ಆಳುಗಳು ತೋಟದಲ್ಲಿನ ಕೂಗಾಟವನ್ನು ಕೇಳಿ, ಆಕೆಗೆ ಏನಾಯಿತೋ ಎಂದು ನೋಡಲು ಪಕ್ಕದ ಬಾಗಿಲಿನಿಂದ ಒಳಕ್ಕೆ ನುಗ್ಗಿ ಬಂದರು. 27ಹಿರಿಯರು ತಮ್ಮ ಕತೆಯನ್ನು ವರದಿಮಾಡಿದರು. ಅದನ್ನು ಕೇಳಿದ ನೌಕರರು ಬಹಳವಾಗಿ ಸಂಕೋಚಪಟ್ಟರು. ಏಕೆಂದರೆ ಸುಸನ್ನಳನ್ನು ಕುರಿತು ಇಂಥ ವರದಿಯನ್ನು ಅವರು ಎಂದೂ ಕೇಳಿರಲಿಲ್ಲ.

### ನ್ಯಾಯಾಧೀಶರಿಂದಲೇ ಸುಳ್ಳುಸಾಕ್ಷಿ!

28 ಮಾರನೆಯ ದಿನ ಜನರು ಸುಸನ್ನಳ ಗಂಡನಾದ ಯೋವಾಕೀಮನ ಬಳಿಗೆ ಸೇರಿಬಂದರು. ಅವರೊಡನೆ ಆ ಹಿರಿಯರಿಬ್ಬರು ಆಕೆಯನ್ನು ಮರಣದಂಡನೆಗೆ ಗುರಿಮಾಡಿಸಲೇಬೇಕೆಂದು ಪಟ್ಟುಹಿಡಿದರು. 29"ಹಿಲ್ಕೀಯನ ಮಗಳೂ ಯೋವಾಕೀಮನ ಹೆಂಡತಿಯೂ ಆದ ಸುಸನ್ನಳನ್ನು ಕರೆಯಿಸಿರಿ," ಎಂದು ಜನರಿಗೆ ಸಂಬೋಧಿಸಿದರು. ಆಕೆಗೆ ಕರೆ ಕಳಿಸಲಾಯಿತು. 30ಅವಳು ತನ್ನ ತಂದೆ, ತಾಯಿ, ಮಕ್ಕಳು ಮತ್ತು ತನ್ನ ಬಂಧು ಬಳಗದವರೊಂದಿಗೆ ಅಲ್ಲಿಗೆ ಬಂದಳು. 31ಸುಸನ್ನಳು ಅತಿ ಕೋಮಲೆ, ನೋಡಲಿಕ್ಕೆ ಬಲು ಚೆಲುವೆ. 32ಆ ದುಷ್ಟರು ಆಕೆಯ ಸೌಂದರ್ಯವನ್ನು ಕಣ್ತುಂಬ ನೋಡಿ ನಲಿಯಬೇಕೆಂಬ ಆಶೆಯಿಂದ ಆಕೆ ಹಾಕಿಕೊಂಡಿದ್ದ ಮುಸುಕನ್ನು ತೆಗೆಯಿಸಲು ಹೇಳಿದರು. 33ಆದರೆ ಆಕೆಯ ಬಂಧುಬಳಗದವರು ಹಾಗು ಆಕೆಯ ಪರಿಚಯ ಇದ್ದವರು ಕಣ್ಣೀರಿಟ್ಟರು.

34 ತರುವಾಯ ಆ ಹಿರಿಯರಿಬ್ಬರು ಜನರ ನಡುವೆ ನಿಂತುಕೊಂಡು ಆಕೆಯ ತಲೆಯಮೇಲೆ ತಮ್ಮ ಕೈಗಳನ್ನಿಟ್ಟರು. 35ಅವಳಾದರೋ ದುಃಖಿಸುತ್ತಾ ಆಕಾಶದ ಕಡೆಗೆ ದಿಟ್ಟಿಸಿ ನೋಡಿದಳು. ಅವಳ ಹೃದಯ ಸರ್ವೇಶ್ವರನನ್ನು ನೆಚ್ಚಿಕೊಂಡಿತ್ತು. 36ಆಗ ಆ ಹಿರಿಯರು, "ನಾವಿಬ್ಬರೇ ತೋಟದಲ್ಲಿ ತಿರುಗಾಡುತ್ತಿದ್ದಾಗ ಇವಳು ಇಬ್ಬರು ದಾಸಿಯರೊಂದಿಗೆ ಒಳಗೆ ಬಂದಳು. ತೋಟದ ಬಾಗಿಲನ್ನು ಮುಚ್ಚಿದಳು. ಬಳಿಕ ದಾಸಿಯರನ್ನು ಕಳಿಸಿಬಿಟ್ಟಳು. 37ಆಮೇಲೆ ಅಲ್ಲಿಯೇ ಅವಿತುಕೊಂಡಿದ್ದ ಯುವಕನೊಬ್ಬನು ಇವಳ ಬಳಿಗೆ

ಬಂದು ಇವಳೊಡನೆ ಮಲಗಿಕೊಂಡನು. 38ಅದೇ ಸಮಯಕ್ಕೆ ಅಲ್ಲಿಯೇ ತೋಟದ ಒಂದು
ಮೂಲೆಯಲ್ಲಿದ್ದ ನಾವು ಈ ದುರಾಚಾರವನ್ನು ಕಂಡು ಅವರ ಬಳಿಗೆ ಓಡಿಬಂದೆವು. 39ಆದರೆ ಆ
ಯುವಕನನ್ನು ಹಿಡಿಯಲು ನಮ್ಮಿಂದ ಆಗಲಿಲ್ಲ. ಅವನು ನಮಗಿಂತ ಬಲಿಷ್ಠ. ಬಾಗಿಲು ತೆರೆದು, ಹೊರಗೆ
ಜಿಗಿದು ಓಡಿಹೋದ. 40ಇವಳನ್ನು ಹಿಡಿದುಕೊಂಡು, 'ಆ ಯುವಕನು ಯಾರು?' ಎಂದು ಕೇಳಿದೆವು.
ಆದರೆ ಇವಳು ಹೇಳಲಿಲ್ಲ. ಇದೇ ನಾವು ಮಾಡುವ ಆಪಾದನೆ," ಎಂದರು. 41ಅವರು ಜನರ ಹಿರಿಯರು
ಮಾತ್ರವಲ್ಲ ನ್ಯಾಯಾಧೀಶರೂ ಆಗಿದ್ದರಿಂದ ಕೂಡಿದ್ದ ಸಭಿಕರು ಅವರ ಮಾತನ್ನು ನಂಬಿ ಆಕೆಗೆ
ಮರಣದಂಡನೆಯನ್ನು ವಿಧಿಸಿದರು. 42ಆಗ ಸುಸನ್ನಳು ಗಟ್ಟಿಯಾಗಿ ಕೂಗಿ, "ನಿತ್ಯರಾದ ದೇವರೇ, ನೀವು
ಎಲ್ಲ ಗುಟ್ಟನ್ನು ತಿಳಿದವರು. ಎಲ್ಲ ವಿಷಯಗಳನ್ನು, ಅವು ಹುಟ್ಟುವ ಮೊದಲೇ ಅರಿತವರೂ ಆಗಿದ್ದೀರಿ.
ಇವರು ನನ್ನ ವಿರುದ್ಧ ಸುಳ್ಳುಸಾಕ್ಷಿ ಹೇಳಿದ್ದಾರೆಂಬುದು ನಿಮಗೆ ಗೊತ್ತಿದೆ. 43ಇವರು ನನಗೆ ವಿರುದ್ಧ
ಹೊಟ್ಟೆಕಿಚ್ಚಿನಿಂದ ಹೇಳಿದ ಕಾರ್ಯಗಳನ್ನು ನಾನು ಮಾಡಿದ್ದೇ ಇಲ್ಲ. ಆದರೂ ಈಗ ನಾನು ಸಾಯಲೇಬೇಕು,"
ಎಂದು ಮೊರೆ ಇಟ್ಟಳು.

### ದಾನಿಯೇಲನಿಂದ ಸುಸನ್ನಳ ಬಿಡುಗಡೆ

44 ಸರ್ವೇಶ್ವರಸ್ವಾಮಿ ಆಕೆಯ ಮೊರೆಯನ್ನು ಆಲಿಸಿದರು. 45ಜನರು ಅವಳನ್ನು ಕೊಲ್ಲುವುದಕ್ಕೆ
ಸಾಗಿಸಿಕೊಂಡು ಹೋಗುತ್ತಿರುವಾಗ ದೇವರು ದಾನಿಯೇಲನೆಂಬ ಯುವಕನಲ್ಲಿದ್ದ ಪವಿತ್ರಾತ್ಮನನ್ನು
ಚೇತನಗೊಳಿಸಿದರು. 46ದಾನಿಯೇಲನು, "ಈ ಮಹಿಳೆಯ ರಕ್ತಪಾತಕ್ಕೆ ನಾನು ಹೊಣೆ ಅಲ್ಲ," ಎಂದು
ಕೂಗಿ ಹೇಳಿದನು. 47ಜನರೆಲ್ಲರು ಅವನ ಕಡೆಗೆ ತಿರುಗಿಕೊಂಡು, "ನೀನು ಆಡಿದ ಮಾತಿನ
ಮರ್ಮವೇನು?" ಎಂದು ವಿಚಾರಿಸಿದರು. 48ಅವನು ಅವರ ಮಧ್ಯೆ ನಿಂತು, "ಇಸ್ರಯೇಲಿನ ಕುಲಪುತ್ರರೇ,
ನೀವು ಇಷ್ಟು ಬುದ್ಧಿಹೀನರೋ? ಪರೀಕ್ಷೆಮಾಡದೆ, ಸತ್ಯವನ್ನು ಅರಿತುಕೊಳ್ಳದೆ, ಇಸ್ರಯೇಲಿನ
ಕುಲಪುತ್ರಿಯೊಬ್ಬಳಿಗೆ ದಂಡನೆ ವಿಧಿಸಿದಿರೋ? 49ನ್ಯಾಯಸ್ಥಾನಕ್ಕೆ ಮರಳಿ ಬನ್ನಿ, ಏಕೆಂದರೆ ಇವಳ ಮೇಲೆ
ಸುಳ್ಳುಸಾಕ್ಷಿ ಹೇಳಲಾಗಿದೆ," ಎಂದು ಹೇಳಿದನು. 50ಜನರೆಲ್ಲರು ಕೂಡಲೆ ಹಿಂದಿರುಗಿ ಬಂದರು.
ಜನನಾಯಕರು ದಾನಿಯೇಲನಿಗೆ, "ಬಾ, ನಮ್ಮ ನಡುವೆ ಕುಳಿತುಕೊಂಡು ಆ ವಿಷಯವನ್ನು ನಮಗೆ
ವಿವರಿಸು. ಹಿರಿಯರಿಗೆ ಕೊಟ್ಟಂಥ ಗೌರವವನ್ನು ದೇವರು ನಿನಗೆ ಕೊಟ್ಟಂತಿದೆ!" ಎಂದರು.

51 ಆಗ ದಾನಿಯೇಲನು, "ಇವರಿಬ್ಬರನ್ನು ಬೇರ್ಪಡಿಸಿ ದೂರದೂರದಲ್ಲಿ ಇಡಿ. ನಾನು ಇವರನ್ನು
ಪರೀಕ್ಷಿಸುತ್ತೇನೆ," ಎಂದನು. 52ಅಂತೆಯೇ ಅವರನ್ನು ಬೇರ್ಪಡಿಸಲಾಯಿತು. ಆಮೇಲೆ ಅವರಿಬ್ಬರಲ್ಲಿ
ಒಬ್ಬನನ್ನು ಕರೆದು ಅವನಿಗೆ, "ಕೆಟ್ಟತನದಲ್ಲೆ ಬೆಳೆದು ಮುಪ್ಪಾಗಿರುವವನೇ, ನೀನು ಹಿಂದೆ ಮಾಡಿದ ಪಾಪಗಳು
ಇಂದು ಬಯಲಿಗೆ ಬಂದಿವೆ. 53 'ನಿರಪರಾಧಿಗೂ ನೀತಿವಂತನಿಗೂ ಮರಣದಂಡನೆ ವಿಧಿಸಲೇಕೂಡದು'
ಎಂದು ಸರ್ವೇಶ್ವರಸ್ವಾಮಿ ಹೇಳಿದ್ದರೂ ಅನ್ಯಾಯವಾದ ತೀರ್ಪುಕೊಟ್ಟು, ನಿರಪರಾಧಿಯನ್ನು ದಂಡಿಸಿ,
ಅಪರಾಧಿಗಳನ್ನು ಬಿಡುಗಡೆಮಾಡುತ್ತಾ ಬಂದಿರುವೆ. 54ಈಗ ಹೇಳು, ಇವಳನ್ನು ನೀನು ನೋಡಿದ್ದೇ ಆದರೆ,
ಇವರು ಯಾವ ಗಿಡದ ಅಡಿಯಲ್ಲಿ ಕೂಡಿದ್ದರು, ನನಗೆ ತಿಳಿಸು," ಎಂದನು. ಅದಕ್ಕೆ ಅವನು, "ಬಗಿನಿ
ಮರದ ಅಡಿಯಲ್ಲಿ," ಎಂದು ಉತ್ತರವಿತ್ತನು. 55ಅದಕ್ಕೆ ದಾನಿಯೇಲನು, "ನಿನ್ನ ಪ್ರಾಣಕ್ಕೆ ವಿರುದ್ಧ ಚೆನ್ನಾಗಿ
ಸುಳ್ಳಾಡಿದೆ. ದೇವದೂತನು ಈಗಲೆ ದೇವರಿಂದ ತೀರ್ಮಾನ ಪಡೆದು ನಿನ್ನನ್ನು ಬಗೆದುಹಾಕಿ, ಎರಡು
ತುಂಡಾಗಿ ಮಾಡಲಿದ್ದಾನೆ," ಎಂದು ಹೇಳಿ ಅವನನ್ನು ಪಕ್ಕಕ್ಕೆ ಸರಿಸಿದನು. 56ಬಳಿಕ ಎರಡನೆಯವನನ್ನು
ಕರೆತರಲು ಆಜ್ಞಾಪಿಸಿದನು. ಅವನನ್ನು ನೋಡಿ, "ಯೆಹೂದ ವಂಶಕ್ಕೆ ಅಯೋಗ್ಯನಾದ ಎಲೈ ಕಾನಾನ್
ವಂಶಜನೇ, ಸೌಂದರ್ಯವು ನಿನ್ನನ್ನು ಮೋಸಗೊಳಿಸಿತು. ಕಾಮವು ನಿನ್ನ ಮನಸ್ಸನ್ನು ಕೆಡಿಸಿತು. 57ಇಸ್ರಯೇಲಿನ
ಕುಲಪುತ್ರಿಯರೊಂದಿಗೆ ನೀವು ಇದೇ ರೀತಿ ವರ್ತಿಸುತ್ತಾ ಬಂದಿರಿ. ಅವರು ಅಂಜಿಕೆಯಿಂದ ನಿಮಗೆ
ವಶವಾಗುತ್ತಿದ್ದರು. ಆದರೆ ಜುದೇಯದ ಈ ಕುಲಪುತ್ರಿ ಮಾತ್ರ ನಿಮ್ಮ ಅಧರ್ಮಕ್ಕೆ ಇಂಬುಕೊಡಲಿಲ್ಲ.
58ಈಗ ಹೇಳು, 'ಯಾವ ಮರದ ಕೆಳಗೆ ಇವರು ಕೂಡಿದ್ದನ್ನು ನೀನು ಕಂಡುಹಿಡಿದೆ?" ಎಂದನು. ಅವನು,
'ಕಡವಾಲ ಮರದ ಕೆಳಗೆ' ಎಂದು ಉತ್ತರಕೊಟ್ಟ. 59ಆಗ ದಾನಿಯೇಲನು, "ನೀನು ಸಹ ನಿನ್ನ ಕುತ್ತಿಗೆಗೆ

ವಿರುದ್ಧ ಚೆನ್ನಾಗಿ ಸುಳ್ಳಾಡಿದೆ. ನಿನ್ನನ್ನು ಕಡಿದು ಎರಡು ಹೋಳಾಗಿ ಮಾಡಿ ನಿಮ್ಮಿಬ್ಬರನ್ನೂ ನಾಶಮಾಡಲು ದೇವದೂತನು ಕೈಯಲ್ಲಿ ಕತ್ತಿಹಿಡಿದು ಕಾದಿದ್ದಾನೆ," ಎಂದು ನುಡಿದನು.

60 ಕೂಡಿದ್ದ ಸಭಿಕರೆಲ್ಲರು ಆಗ ಗಟ್ಟಿಯಾಗಿ ಕೂಗುತ್ತಾ, ತನ್ನಲ್ಲಿ ಭರವಸೆಯಿಟ್ಟವರನ್ನು ಸಂರಕ್ಷಿಸಿ ಕಾಪಾಡುವ ದೇವರನ್ನು ಕೊಂಡಾಡಿದರು. 61ಅಲ್ಲದೆ, ದಾನಿಯೇಲನು ಆ ಇಬ್ಬರು ಹಿರಿಯರನ್ನು ಸುಳ್ಳುಸಾಕ್ಷಿಗಳೆಂದು ತೋರಿಸಿಕೊಟ್ಟ ಕಾರಣ, ಸಭಿಕರು ಅವರ ವಿರುದ್ಧ ಎದ್ದುನಿಂತು ಪ್ರತಿಭಟಿಸಿದರು. 62ಹೊಟ್ಟೆಕಿಚ್ಚಿನಿಂದ ನೆರೆಯವರ ಮೇಲೆ ಏನು ದಂಡನೆ ತೆರಬೇಕೆಂದಿದ್ದರೋ ಅದನ್ನೇ ಮೋಶೆಯ ಧರ್ಮಶಾಸ್ತ್ರದ ಪ್ರಕಾರ ಅವರ ಮೇಲೆ ತಂದು, ಅವರನ್ನು ಕೊಲ್ಲಿಸಿದರು. ಹೀಗೆ ನಿರ್ದೋಷಿಯ ರಕ್ತ, ಅಂದು ಸುರಕ್ಷಿತವಾಯಿತು.

63 ಹಿಲ್ಕೀಯನು ಮತ್ತು ಅವನ ಹೆಂಡತಿಯು ತಮ್ಮ ಮಗಳು ಸುಸನ್ನಳ ಪರವಾಗಿ ದೇವರನ್ನು ಸ್ತುತಿಸಿದರು. ಆಕೆಯ ಗಂಡನೂ ಬಂಧುಬಳಗದವರೂ ಸೇರಿ ಅಂತೆಯೇ ಸ್ತುತಿಮಾಡಿದರು. ಏಕೆಂದರೆ ಯಾವ ಅವಲಕ್ಷಣವೂ ಅವಳಲ್ಲಿ ಕಂಡು ಬರಲಿಲ್ಲ. 64ಅಂದಿನಿಂದ ದಾನಿಯೇಲನು ಜನರ ದೃಷ್ಟಿಯಲ್ಲಿ ಮಹಾಪುರುಷನಾದ.

# ಬೇಲ್‌ದೇವತೆ ಮತ್ತು ಘಟಸರ್ಪ

### ಮುನ್ನುಡಿ

ಪ್ರವಾದಿ ದಾನಿಯೇಲನ ಗ್ರಂಥದ ಗ್ರೀಕ್ ಅನುವಾದಕ್ಕೆ 'ಬೇಲ್‌ದೇವತೆ ಮತ್ತು ಘಟಸರ್ಪ' ಎಂಬ ಭಾಗವನ್ನೂ ಸೇರಿಸಲಾಗಿದೆ. ಇದರಲ್ಲಿ ಎರಡು ಕಥೆಗಳಿವೆ: ಒಂದು, ಬೇಲ್‌ದೇವತೆಯು ಅಸತ್ಯ ಹಾಗು ಅಬದ್ಧ ಆದುದೆಂದು ನಿರೂಪಿಸಿದ ಪ್ರವಾದಿ ದಾನಿಯೇಲನ ಧೈರ್ಯವನ್ನು ಕುರಿತಾಗಿದ್ದರೆ, ಇನ್ನೊಂದು ಬಾಬಿಲೋನಿನವರು ಪೂಜಿಸುತ್ತಿದ್ದ ಘಟಸರ್ಪವನ್ನು ದಾನಿಯೇಲನು ಹೇಗೆ ಕೊಂದುಹಾಕಿದನೆಂದು ವಿವರಿಸುತ್ತದೆ.

### ಪರಿವಿಡಿ


| | | | | |
|---|---|---|---|---|
| ದಾನಿಯೇಲನು ಬೇಲ್‌ದೇವತೆಯ ಪೂಜಾರಿಗಳ ಮೇಲೆ ಸಾಧಿಸಿದ ಜಯ | – | 1 | – | 22 |
| ದಾನಿಯೇಲನಿಂದ ಘಟಸರ್ಪದ ಕೊಲೆ | – | 23 | – | 32 |
| ಸಿಂಹದ ಗುಹೆಯಿಂದ ದಾನಿಯೇಲನ ಬಿಡುಗಡೆ | – | 33 | – | 42 |


**1** ರಾಜ ಅಸ್ತ್ಯಗೀಯನು ಕಾಲವಾಗಿ ತನ್ನ ಪಿತೃಗಳನ್ನು ಸೇರಿಕೊಂಡ ಬಳಿಕ ಪರ್ಷಿಯದ ಅರಸ ಸೈರಸನು ರಾಜ್ಯಾಡಳಿತವನ್ನು ವಹಿಸಿಕೊಂಡ. 2ದಾನಿಯೇಲನು ಈ ಅರಸನ ಆಪ್ತ ಸಂಗಡಿಗನಾಗಿದ್ದ. ಅರಸನ ಮಿತ್ರರಲ್ಲೆಲ್ಲಾ ಹೆಚ್ಚು ಸನ್ಮಾನಿತನಾಗಿದ್ದ.

3 ಬಾಬಿಲೋನಿನವರಲ್ಲಿ ಬೇಲ್ ಎಂಬ ಒಂದು ವಿಗ್ರಹವಿತ್ತು. ಅದಕ್ಕೆ ಅನುದಿನವೂ ಹನ್ನೆರಡು ಸೇರು ನಯವಾದ ಗೋದಿ ಹಸಿಟ್ಟು, ನಾಲ್ವತ್ತು ಕುರಿಗಳು ಹಾಗು ಆರು ಬುದ್ದಲಿ ದ್ರಾಕ್ಷಾರಸ ವೆಚ್ಚವಾಗುತ್ತಿತ್ತು. 4ಅರಸನು ಆ ವಿಗ್ರಹವನ್ನು ಪೂಜಿಸಿ ಆರಾಧಿಸಲು ಪ್ರತಿದಿನವು ಅಲ್ಲಿಗೆ ಹೋಗುತ್ತಿದ್ದ. ದಾನಿಯೇಲನು ಮಾತ್ರ ತನ್ನ ದೇವರನ್ನೇ ಆರಾಧಿಸುತ್ತಿದ್ದ. ಒಮ್ಮೆ ಅರಸನು ಅವನಿಗೆ, "ನೀನು ಬೇಲ್‌ದೇವತೆಯನ್ನು ಆರಾಧಿಸುವುದಿಲ್ಲವೇಕೆ?" ಎಂದು ಕೇಳಿದ. 5ಅದಕ್ಕೆ ಅವನು, "ಕೈಯಿಂದ ಮಾಡಿದ ಮೂರ್ತಿಗಳನ್ನು ನಾನು ಪೂಜಿಸುವವನಲ್ಲ. ಆಕಾಶವನ್ನೂ ಭೂಮಿಯನ್ನೂ ಸೃಷ್ಟಿಸಿ ಎಲ್ಲಾ ಜೀವಿಗಳ ಮೇಲೆ ದೊರೆತನವುಳ್ಳ

ಜೀವಸ್ವರೂಪನಾದ ದೇವರನ್ನೇ ಪೂಜಿಸುತ್ತೇನೆ," ಎಂದ. 6ಅದಕ್ಕೆ ಅರಸನು, "ಬೇಲ್‌ದೇವತೆ ಜೀವವುಳ್ಳ ದೇವರೆಂದು ನೀನು ಭಾವಿಸುವುದಿಲ್ಲವೆ?" ಎಂದು ಕೇಳಿದ.

7 ಅದಕ್ಕೆ ದಾನಿಯೇಲನು ನಕ್ಕು, "ರಾಜರೇ, ಮೋಸಹೋಗದಿರಿ! ಅದು ಒಳಗೆ ಬರೀ ಮಣ್ಣು, ಹೊರಗೆ ಕಂಚು ಮಾತ್ರ. ಅದು ಎಂದೂ ಏನನ್ನೂ ತಿನ್ನಲಿಲ್ಲ, ಏನನ್ನೂ ಕುಡಿಯಲಿಲ್ಲ," ಎಂದ. 8ಇದನ್ನು ಕೇಳಿ ಕೋಪಗೊಂಡ ಅರಸನು ಪೂಜಾರಿಗಳನ್ನು ಕರೆಸಿದ. ಅವರಿಗೆ, "ಈ ವೆಚ್ಚವನ್ನೆಲ್ಲ ಕಬಳಿಸುತ್ತಿರುವವರು ಯಾರೆಂದು ನೀವು ನನಗೆ ತಿಳಿಸಬೇಕು. ಇಲ್ಲದಿದ್ದರೆ ನೀವು ಸಾಯುವಿರಿ. 9ಬೇಲ್‌ದೇವತೆಯೇ ಇವುಗಳನ್ನೆಲ್ಲ ತಿನ್ನುತ್ತದೆಂದು ತೋರಿಸಿಕೊಟ್ಟಲ್ಲಿ ದಾನಿಯೇಲನು ಸಾಯುವನು. ಏಕೆಂದರೆ ಅವನು ಬೇಲ್‌ದೇವತೆಯನ್ನು ನಿಂದಿಸಿದ್ದಾನೆ," ಎಂದ. ಅದಕ್ಕೆ ದಾನಿಯೇಲನು, "ನಿಮ್ಮ ಮಾತಿನಂತೆ ಆಗಲಿ," ಎಂದು ಉತ್ತರಿಸಿದ.

10 ಬೇಲ್‌ದೇವತೆಯ ಪೂಜಾರಿಗಳು, ಮಡದಿಮಕ್ಕಳಲ್ಲದೆ, ಮೊತ್ತ ಎಪ್ಪತ್ತು ಮಂದಿ ಇದ್ದರು. 11ಅರಸನು ದಾನಿಯೇಲನೊಂದಿಗೆ ಬೇಲ್ ಮಂದಿರಕ್ಕೆ ಬಂದ. ಅಲ್ಲಿದ್ದ ಪೂಜಾರಿಗಳು, "ರಾಜರೇ, ಇಗೋ, ನಾವು ಹೊರಗೆ ಹೋಗುತ್ತೇವೆ. ನೀವೇ ಅದರ ಮುಂದೆ ಊಟವನ್ನು ಬಡಿಸಿ, ದ್ರಾಕ್ಷಾರಸವನ್ನು ಬೆರೆಸಿಟ್ಟು, ಬಾಗಿಲನ್ನು ಮುಚ್ಚಿ, ನಿಮ್ಮ ಮುದ್ರೆ ಉಂಗುರದಿಂದ ಆ ಬಾಗಿಲಿಗೆ ಮುದ್ರೆ ಹಾಕಿ. 12ಬೆಳಿಗ್ಗೆ ನೀವು ಬಂದಾಗ ಬೇಲ್‌ದೇವತೆ ಅದೆಲ್ಲವನ್ನು ತಿನ್ನಲಿಲ್ಲ ಎಂದು ನಿಮಗೆ ಕಂಡುಬಂದಲ್ಲಿ ನಾವು ಸಾವನ್ನು ಅನುಭವಿಸುತ್ತೇವೆ. ಇಲ್ಲದಿದ್ದರೆ, ನಮ್ಮ ವಿರುದ್ಧ ಸುಳ್ಳುಹೇಳುವ ಆ ದಾನಿಯೇಲನು ಸಾವನ್ನು ಅನುಭವಿಸಲಿ!" ಎಂದರು.

13 ಹೀಗೆಂದು ಹೇಳಿಯಾದ ಮೇಲೆ ಪೂಜಾರಿಗಳು ನಿಶ್ಚಿಂತರಾಗಿದ್ದರು. ಏಕೆಂದರೆ ಪೀಠದ ಅಡಿಯಲ್ಲಿ ಅವರು ಒಂದು ಗುಪ್ತದ್ವಾರವನ್ನು ಮಾಡಿದ್ದರು. ಅದರ ಮೂಲಕ ಸದಾ ಹೋಗಿ ಬಂದು ಆ ಕಾಣಿಕೆ ಪದಾರ್ಥಗಳನ್ನೆಲ್ಲ ತಿನ್ನುವುದು ಅವರ ವಾಡಿಕೆಯಾಗಿತ್ತು.

14 ಪೂಜಾರಿಗಳು ಬೇಲ್ ಮಂದಿರದಿಂದ ಹೊರಟುಹೋದ ಮೇಲೆ ಅರಸನು ಆ ದೇವತೆಯ ಮುಂದೆ ಅನ್ನಪಾನಗಳನ್ನು ಇರಿಸಿದ. ಇತ್ತ ದಾನಿಯೇಲನು ತನ್ನ ಸೇವಕರಿಗೆ ಬೂದಿಯನ್ನು ತರಹೇಳಿದ. ಅವರು ಅದನ್ನು ಅರಸನೊಬ್ಬನಿಗೇ ತಿಳಿಯುವಂತೆ ಅವನ ಕಣ್ಮುಂದೆಯೆ ಮಂದಿರದಲ್ಲೆಲ್ಲಾ ಹರಡಿದರು. ಬಾಗಿಲನ್ನು ಬಂದು ಮಾಡಲಾಯಿತು. ಅರಸನ ಮುದ್ರೆ ಉಂಗುರದಿಂದ ಅದಕ್ಕೆ ಮುದ್ರೆಹಾಕಿ ಎಲ್ಲರು ಹೊರಟು ಹೋದರು. 15ಅದೇ ರಾತ್ರಿ ಪೂಜಾರಿಗಳು ತಮ್ಮ ವಾಡಿಕೆಯಂತೆ ಮಡದಿ ಮಕ್ಕಳ ಸಮೇತ ಬಂದು ಅಲ್ಲಿ ಇದ್ದುದನ್ನೆಲ್ಲ ತಿಂದು ಕುಡಿದರು.

16 ಬೆಳಿಗ್ಗೆ ಅರಸನು ನಸುಕಿನಲ್ಲೇ ಎದ್ದು ಬಂದ. ಅವನ ಸಮೇತ ದಾನಿಯೇಲನೂ ಇದ್ದ. 17ಅರಸನು ದಾನಿಯೇಲನಿಗೆ, "ರಾಜ ಮುದ್ರೆಗಳೆಲ್ಲವು ಭದ್ರವಾಗಿವೆಯೋ?" ಎನ್ನಲು ದಾನಿಯೇಲನು, "ಹೌದು ರಾಜರೇ, ಭದ್ರವಾಗಿವೆ" ಎಂದ. 18ಬಾಗಿಲು ತೆರೆದ ಕೂಡಲೆ ಅರಸನು ಪೀಠದ ಕಡೆಗೆ ದೃಷ್ಟಿ ಹರಿಸಿದ. "ಬೇಲ್ ದೇವರೇ, ನೀವು ದೊಡ್ಡವರು! ಕಪಟವೆಂಬುದೇನೂ ನಿಮ್ಮಲ್ಲಿಲ್ಲ!" ಎಂದು ಗಟ್ಟಿಯಾಗಿ ಕೂಗಿ ಹೇಳಿದ. 19ಆದರೆ ದಾನಿಯೇಲನು ನಕ್ಕು, ಅರಸನು ಒಳಗೆ ಹೋಗದಂತೆ ತಡೆಹಿಡಿದು, "ನೆಲಗಟ್ಟನ್ನು ಸ್ವಲ್ಪ ನೋಡಿ ಸ್ವಾಮಿ! ಆ ಹೆಜ್ಜೆಯ ಗುರುತು ಯಾರವೆಂಬುದನ್ನು ಸ್ವಲ್ಪ ಗಮನಿಸಿ," ಎಂದು ಸೂಚಿಸಿದ. 20ಅರಸನು, "ಗಂಡಸರ, ಹೆಂಗಸರ ಮತ್ತು ಮಕ್ಕಳ ಹೆಜ್ಜೆ ಗುರುತುಗಳನ್ನು ನಾನಿಲ್ಲಿ ಕಾಣುತ್ತಿದ್ದೇನಲ್ಲಾ!" ಎಂದು ಹೇಳಿ, ಸಿಟ್ಟುಗೊಂಡ. 21ಪೂಜಾರಿಗಳನ್ನು ಅವರ ಮಡದಿ ಮಕ್ಕಳ ಸಹಿತವಾಗಿ ಹಿಡಿದು ತರುವಂತೆ ಮಾಡಿದ. ಅವರು ತಾವು ಯಾವ ಹಾದಿಯಿಂದ ಒಳಗೆ ಬಂದು ಪೀಠದ ಮೇಲಿದ್ದುದನ್ನೆಲ್ಲ ತಿನ್ನುತ್ತಿದ್ದರೋ ಆ ಗುಪ್ತದ್ವಾರಗಳನ್ನು ಅವನಿಗೆ ತೋರಿಸಿದರು. ಬೇಲ್‌ದೇವತೆಯನ್ನು ದಾನಿಯೇಲನ ವಶಕ್ಕೆ ಒಪ್ಪಿಸಿದ. ದಾನಿಯೇಲನು ಬೇಲ್‌ದೇವತೆಯನ್ನು ಅದರ ಮಂದಿರವನ್ನೂ ಕೆಡವಿಹಾಕಿದ.

**ಘಟಸರ್ಪವನ್ನು ಕೊಂದ ದಾನಿಯೇಲ**

23 ಅದೇ ಸ್ಥಳದಲ್ಲಿ ಒಂದು ಘಟಸರ್ಪ ಇತ್ತು. ಅದನ್ನು ಬಾಬಿಲೋನಿಯರು ಪೂಜಿಸುತ್ತಿದ್ದರು. 24ಅರಸನು ದಾನಿಯೇಲನಿಗೆ, "ಇದು ಕೂಡ ಕಂಚಿನದೇ ಎಂದು ಹೇಳಬಲ್ಲೆಯಾ? ನೋಡು, ಅದು ಜೀವಂತವಾಗಿದೆ. ತಿನ್ನುತ್ತದೆ, ಕುಡಿಯುತ್ತದೆ, ಈಗ ಅದು ಜೀವವುಳ್ಳ ದೇವರಲ್ಲ ಎಂದು ಹೇಳಲಾಗದು.

ಆದುದರಿಂದ ಅದನ್ನು ಆರಾಧಿಸು," ಎಂದ. 25ಅದಕ್ಕೆ ದಾನಿಯೇಲನು, "ನನ್ನ ದೇವರಾದ ಸರ್ವೇಶ್ವರನನ್ನು ಮಾತ್ರ ನಾನು ಆರಾಧಿಸುತ್ತೇನೆ, ಅವರೇ ಜೀವ ಸ್ವರೂಪರಾದ ದೇವರು. 26ರಾಜರೇ, ತಮ್ಮಿಂದ ಅಪ್ಪಣೆಯಾದರೆ ಕತ್ತಿ ಕೋಲುಗಳಿಲ್ಲದೆಯೇ ಈ ಸರ್ಪವನ್ನು ಸಂಹರಿಸಬಲ್ಲೆ," ಎಂದ. ಅರಸನು, "ಅಪ್ಪಣೆ ಕೊಟ್ಟಿದ್ದೇನೆ," ಎಂದ. 27ದಾನಿಯೇಲನು ತಾರೆಣ್ಣೆಯನ್ನೂ ಕೊಬ್ಬನ್ನೂ ಹಾಗು ಕೂದಲನ್ನೂ ತೆಗೆದುಕೊಂಡು ಉಂಡೆಗಳನ್ನಾಗಿ ಮಾಡಿ ಸರ್ಪದ ಬಾಯೊಳಗೆ ಇಡುವಂತೆ ಮಾಡಿದ. ಸರ್ಪವು ಅದನ್ನು ತಿಂದದ್ದೆ ಹೊಟ್ಟೆಹೊಡೆದು ಸತ್ತುಹೋಯಿತು. ಆಗ ದಾನಿಯೇಲನು, "ನೀವು ಪೂಜಿಸುವ ದೇವರನ್ನು ನೋಡಿ!" ಎಂದ.

28 ಬಾಬಿಲೋನಿನವರು ಇದನ್ನು ಕೇಳಿ ಕಡು ಕೋಪಗೊಂಡರು. ಅರಸನ ವಿರುದ್ಧ ಒಟ್ಟುಕೂಡಿಕೊಂಡು, "ರಾಜನು ಯೆಹೂದ್ಯರ ಮತಕ್ಕೆ ಸೇರಿ ಬಿಟ್ಟಿದ್ದಾನೆ. ಅವನು ಬೇಲ್‌ದೇವತೆಯನ್ನು ಕೆಡವಿ ಹಾಳುಮಾಡಿದ್ದಾನೆ. ಘಟಸರ್ಪವನ್ನು ಕೊಂದು ಹಾಕಿದ್ದಾನೆ. ಪೂಜಾರಿಗಳನ್ನು ಕೊಲ್ಲಿಸಿದ್ದಾನೆ," ಎಂದು ಮಾತಾಡಿಕೊಂಡು ಅರಸನ ಬಳಿಗೆ ಬಂದರು. 29"ದಾನಿಯೇಲನನ್ನು ನಮಗೆ ಒಪ್ಪಿಸಿಬಿಡಿ. ಇಲ್ಲವಾದರೆ ನಿಮ್ಮನ್ನೂ ನಿಮ್ಮ ಮನೆಯವರನ್ನೂ ಕೊಲ್ಲುತ್ತೇವೆ," ಎಂದು ಕೂಗಾಡಿದರು. 30ಅವರು ಬಹಳವಾಗಿ ಒತ್ತಾಯ ಪಡಿಸುತ್ತಿರುವುದನ್ನು ಕಂಡ ಅರಸನು ಬಲವಂತಕ್ಕೆ ಒಳಪಟ್ಟು, ದಾನಿಯೇಲನನ್ನು ಅವರ ಕೈಗೆ ಒಪ್ಪಿಸಿಬಿಟ್ಟ.

### ಸಿಂಹಗುಹೆಯಲ್ಲಿ ದಾನಿಯೇಲ

31 ಅವರು ದಾನಿಯೇಲನನ್ನು ತೆಗೆದುಕೊಂಡು ಹೋಗಿ ಸಿಂಹಗಳ ಗವಿಯಲ್ಲಿ ಹಾಕಿದರು. ಅಲ್ಲಿ ಅವನು ಆರು ದಿನ ಇದ್ದ. ಆ ಗವಿಯಲ್ಲಿ ಏಳು ಸಿಂಹಗಳಿದ್ದವು. 32ಅವುಗಳಿಗೆ ದಿನಂಪ್ರತಿ ಎರಡು ಹೆಣಗಳನ್ನೂ ಎರಡು ಕುರಿಗಳನ್ನೂ ಹಾಕುವ ಪದ್ಧತಿಯಿತ್ತು. ಅವು ದಾನಿಯೇಲನನ್ನು ತಿಂದು ಬಿಡಲಿ ಎಂಬ ಉದ್ದೇಶದಿಂದ ಇವನ್ನೆಲ್ಲ ಹಾಕುವುದನ್ನು ಅಷ್ಟು ದಿನ ನಿಲ್ಲಿಸಲಾಗಿತ್ತು.

33 ಜುದೇಯ ನಾಡಿನಲ್ಲಿ ಹಬಕ್ಕೂಕನೆಂಬ ಒಬ್ಬ ಪ್ರವಾದಿ ಇದ್ದ. ಅವನು ಅಡಿಗೆ ಮಾಡಿಕೊಂಡು, ರೊಟ್ಟಿತುಂಡುಗಳನ್ನು ಬುಟ್ಟಿಯಲ್ಲಿ ತುಂಬಿಕೊಂಡು ಕೊಯ್ಲಾಳುಗಳಿಗೆ ಕೊಡಲು ಹೊಲದತ್ತ ಹೊರಟಿದ್ದ. 34ಆಗ ಸರ್ವೇಶ್ವರನ ದೂತನು ಹಬಕ್ಕೂಕನಿಗೆ, "ನಿನ್ನಲ್ಲಿರುವ ಬುತ್ತಿಯನ್ನು ಬಾಬಿಲೋನಿನ ಸಿಂಹದ ಗುಹೆಯಲ್ಲಿ ಇರುವ ದಾನಿಯೇಲನಿಗೆ ತೆಗೆದುಕೊಂಡು ಹೋಗಿ ಕೊಡು," ಎಂದ. 35ಅದಕ್ಕೆ ಹಬಕ್ಕೂಕನು, "ಸ್ವಾಮೀ, ನಾನು ಬಾಬಿಲೋನನ್ನು ಎಂದೂ ನೋಡಿದವನಲ್ಲ, ಆ ಗವಿ ಎಲ್ಲಿದೆ ಎಂಬುದು ಕೂಡ ತಿಳಿಯದು," ಎಂದು ಉತ್ತರಕೊಟ್ಟ. 36ಆಗ ಆ ದೂತನು ಅವನ ತಲೆಯ ಮೇಲೆ ಕೈ ಹಾಕಿ, ಅವನ ಜುಟ್ಟನ್ನು ಹಿಡಿದು, ಅವನನ್ನು ಎತ್ತಿಕೊಂಡು, ತನ್ನ ಉಸಿರಿನ ರಭಸದಿಂದಲೆ ಅವನನ್ನು ಒಯ್ದು, ಬಾಬಿಲೋನಿನಲ್ಲಿದ್ದ ಗವಿಯ ಮೇಲೆ ನಿಲ್ಲಿಸಿದ. 37ಹಬಕ್ಕೂಕನು, "ದಾನಿಯೇಲನೇ, ಎಲೈ ದಾನಿಯೇಲನೇ, ದೇವರು ನಿನಗೆಂದು ಕಳಿಸಿದ ಈ ಬುತ್ತಿಯನ್ನು ತೆಗೆದುಕೋ," ಎಂದು ಕೂಗಿದ. 38ಅದಕ್ಕೆ ದಾನಿಯೇಲನು, "ದೇವರೇ, ನೀವು ನನ್ನನ್ನು ನೆನಪಿಗೆ ತಂದುಕೊಂಡಿರಿ. ನಿಮ್ಮನ್ನು ಪ್ರೀತಿಸುವವರನ್ನು ನೀವು ಎಂದಿಗೂ ಕೈಬಿಡುವುದಿಲ್ಲ," ಎಂದು ಹೇಳಿ ಎದ್ದು ಊಟಮಾಡಿದ. 39ತಕ್ಷಣವೇ ಸರ್ವೇಶ್ವರನ ದೂತನು ಹಬಕ್ಕೂಕನನ್ನು ಒಯ್ದು ಅವನು ಮೊದಲಿದ್ದ ಸ್ಥಳದಲ್ಲೇ ತಂದು ನಿಲ್ಲಿಸಿದ.

40 ಏಳನೆಯ ದಿನ ಅರಸನು ದಾನಿಯೇಲನ ಶೋಕ ಸಂಸ್ಕಾರಕ್ಕಾಗಿ ಅಲ್ಲಿಗೆ ಬಂದ. ಗವಿಗೆ ಬಂದ ಮೇಲೆ ಒಳಗೆ ಇಣಿಕಿ ನೋಡಿದ. ಏನಾಶ್ಚರ್ಯ! ದಾನಿಯೇಲನು ಕುಳಿತುಕೊಂಡಿದ್ದ. 41ಇದನ್ನು ಕಂಡ ಅರಸನು, ಸ್ವರವೆತ್ತಿ, "ಸರ್ವೇಶ್ವರಾ, ದಾನಿಯೇಲನ ದೇವರೇ, ನೀವು ನಿಜವಾಗಿಯೂ ದೊಡ್ಡವರು, ನಿಮ್ಮ ಹೊರತು ಬೇರೆ ಯಾರೂ ದೇವರಿಲ್ಲ!" ಎಂದು ಉದ್ಗರಿಸಿದ. 42ಬಳಿಕ ದಾನಿಯೇಲನನ್ನು ಮೇಲಕ್ಕೆಳೆದು ಅವನನ್ನು ನಾಶಮಾಡಬೇಕೆಂದಿದ್ದ ಎಲ್ಲರನ್ನು ಗವಿಗೆ ಹಾಕಿಸಿದ. ಕ್ಷಣಮಾತ್ರದಲ್ಲೇ, ಅರಸನ ಕಣ್ಣೆದುರಿನಲ್ಲೇ ಅವರನ್ನು ಸಿಂಹಗಳು ತಿಂದು ಹಾಕಿದವು.